ಸಂಪುಟ: 13 Volume ಸಂಚಿಕೆ: 349 Issue ಪುಟಗಳು 08 Pages ಶುಕ್ರವಾರ 13 ಮಾರ್ಚ್ 2026 ₹6 PRGINO.120927 (RNINO:KARKAN/2011/48371) BDR/054/2026-2027 mallammanudi@gmail.com www.mallammanudi.in 9448604450, 7204184576

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ವಿವೇಕವೆಂದರೆಬಿಡಿಸಿನೋಡುವುದು, ವಿಶ್ಲೇಷಿಸುವುದು, ತೂಗುವುದು, ಅಳೆಯುವುದು.

–ಗೋಪಾಲಕೃಷ್ಣ ಅಡಿಗ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಡಾ.ಎಂ.ಮಹ್ಮದ್ ಬಾಷ ಗೂಳ್ಯಂ

ಕೆರೆ ನಿರ್ಮಿಸಲು ಆಗ್ರಹಿಸಿ ಪ್ರತಿಭಟನೆ 6
ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಪ್ರೋತ್ಸಾಹ 7
ಅಧಿಸೂಚನೆ ಬಗ್ಗೆ ಬಿಜೆಪಿ ದನಿ ಇಲ್ಲ 8

**ಮಲ್ಲಮ್ಮ ನುಡಿ**

**ಯುಗಾದಿ ವಿಶೇಷಾಂಕ- 2026**

ಸದಾ ಹೊಸತನಕ್ಕೆ ಹೆಸರಾದ ಪ್ರತಿಷ್ಠಿತ ಪ್ರಾದೇಶಿಕ ಮಲ್ಲಮ್ಮನುಡಿ ದಿನಪತ್ರಿಕೆಯು ಈ ಬಾರಿ ಯುಗಾದಿ ವಿನೂತನ ವಿಶೇಷಾಂಕ–2026 ಹೊರತರಲಿದೆ. ಇದರ ಸಿದ್ಧತೆಯು ಈಗಾಗಲೇ ಆರಂಭವಾಗಿದೆ. ಇದರ ಪ್ರಯುಕ್ತ ವಿಶೇಷ ಸಂಚಿಕೆಗಾಗಿ ಲೇಖಕರಿಂದ ಬರಹಗಳನ್ನು ಆಹ್ವಾನಿಸುತ್ತಿದೆ.

**ಲೇಖಕರು ಪಾಲಿಸಬೇಕಾದ ಸೂಚನೆಗಳು**

- ನನ್ನೂರು ಹಲವು ವೈಶಿಷ್ಟ್ಯಗಳ ತವರು: 200 ಪದ ಮಿತಿ
- ನನ್ನ ಜೀವನದ ಟರ್ನಿಂಗ್ ಪಾಯಿಂಟ್: 200 ಪದಮಿತಿ
- ನಾನು ಪ್ರೀತಿಸಿದೆ. ಆದರೆ ಆಕೆಗೆ ಹೇಳಲೇ ಇಲ್ಲ, ಸ್ವ ಅನುಭವ: 200 ಪದ ಮಿತಿ
- ಕಥೆಗಳು: 600 ಪದಮಿತಿ
- ಯಾವುದೇ ವಿಷಯ ಕುರಿತ ಲಲಿತ ಪ್ರಬಂಧ: 300 ಪದ
- ಕವನ 24 ಸಾಲು ಮೀರದಿರಲಿ.

► ಲೇಖನಗಳನ್ನು ಕಳುಹಿಸಲು ಅಂತಿಮ ದಿನಾಂಕ: 5–03–2026

► ಬರಹಗಳ ಆಯ್ಕೆಯಲ್ಲಿ ಸಂಚಿಕೆ ಸಂಪಾದಕರ ತೀರ್ಮಾನವೇ ಅಂತಿಮ.

ಈ ಮೇಲ್: mallammanudi@gmail.com

## ಹಾರ್ದಿಕ್ ಪಾಂಡೆ ವಿರುದ್ಧ ದೂರು ದಾಖಲು

- ಮಲ್ಲಮ್ಮ ನುಡಿ ವಾರ್ತೆ ಪುಣೆ



ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾದ ಆಟಗಾರರಲ್ಲಿ ಒಬ್ಬರಾಗಿದ್ದ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ವಿರುದ್ದ ಪುಣೆಯ ಶಿವಾಜಿನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ರಾಷ್ಟ್ರಧ್ವಜಕ್ಕೆ ಅವಮಾನ ಮಾಡಿದ್ದಕ್ಕಾಗಿ, ದೂರು ಅರ್ಜಿಯಲ್ಲಿ ವಿವರಿಸಲಾಗಿದೆ.

ಟಿ20 ವಿಶ್ವಕಪ್ ಫೈನಲ್ ಪಂದ್ಯ, ಗುಜರಾತ್ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿತ್ತು. ಭರ್ಜರಿಯಾಗಿ ಗೆದ್ದು ವಿಶ್ವಚಾಂಪಿಯನ್ ಆದ ಬಳಿಕ, ಟೀಂ ಇಂಡಿಯಾದ ಸದಸ್ಯರು ವಿಜಯೋತ್ಸವ ಆಚರಿಸಿಕೊಂಡಿದ್ದರು. ಆ ವೇಳೆ, ಹಾರ್ದಿಕ್ ಪಾಂಡ್ಯ, ರಾಷ್ಟ್ರಧ್ವಜವನ್ನು ಮೈಮೇಲೆ ಸುತ್ತಿಕೊಂಡು, ಗ್ರೌಂಡ್ ಫುಲ್ ಓಡಾಡಿದ್ದರು. ಈ ಸಂಬಂಧ, ಅವರ ವಿರುದ್ದ ದೂರು ದಾಖಲಾಗಿದೆ.

ಈಗ, ಪುಣೆಯ ವಾಜಿದ್ ಖಾನ್ ಎನ್ನುವ ವಕೀಲರು, ರಾಷ್ಟ್ರಧ್ವಜಕ್ಕೆ ಅವಮಾನ ಮಾಡಿದ್ದಾರೆಂದು ನಗರದ ಶಿವಾಜಿನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಈಖಖ ದಾಖಲಿಸುವಂತೆ ಕೋರಿ ವಕೀಲ ಖಾನ್ ಅರ್ಜಿಯನ್ನು ಸಲ್ಲಿಸಿದ್ದಾರೆ ಎಂದು ಠಾಣೆಯ ಅಧಿಕಾರಿಯೊಬ್ಬರು ವಿವರಿಸಿದ್ದಾರೆ.

## ಯುಗಾದಿ ಹಬ್ಬಕ್ಕೆ ಬಮೂಲ್ ಗಿಫ್ಟ್

- ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



'2025–26ನೇ ಸಾಲಿನಲ್ಲಿ ಬಮೂಲ್ 3400 ಕೂಟಿ ರೂ. ವಹಿವಾಟು ಮಾಡಿದ್ದು, 14.50 ಕೋಟಿ ನಷ್ಟದಲ್ಲಿದ್ದ ಸಂಸ್ಥೆಯು ಈ ವರ್ಷ 60 ಕೋಟಿ ಲಾಭ ಕಂಡಿದೆ. ಈ ಹಿನ್ನೆಲೆಯಲ್ಲಿ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್ ಗೆ 1 ರೂ. ಹೆಚ್ಚುವರಿ ಹಣವನ್ನು ನೀಡಲು ತೀರ್ಮಾನಿಸಲಾಗಿದೆ ಎಂದು ಬಮೂಲ್ ಅಧ್ಯಕ್ಷರಾದ ಡಿ.ಕೆ. ಸುರೇಶ್ ತಿಳಿಸಿದ್ದಾರೆ.

ಡೇರಿ ವೃತ್ತದಲ್ಲಿರುವ ಬಮೂಲ ಕಚೇರಿಯಲ್ಲಿ ಸುರೇಶ್ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಕಳೆದ ಸಾಲಿನಲ್ಲಿ ನಮ್ಮ ಒಕ್ಕೂದಿಂದ 2900 ಕೋಟಿ ವಹಿವಾಟು ಮಾಡಿದ್ದು, ಈ ವರ್ಷ ಮಾರ್ಚ್ 31ರ ವೇಳೆಗೆ 3,400 ಕೋಟಿಯಷ್ಟು ವಹಿವಾಟು ನಿರೀಕ್ಷೆ ಇಟ್ಟುಕೊಂಡಿದ್ದೇವೆ. ನಮ್ಮಲ್ಲಿ ಆಡಳಿತಾತ್ಮಕ ವೆಚ್ಚ ಹೆಚ್ಚಾಗಿದೆ ಎಂದಿದ್ದಾರೆ. ನಮ್ಮಲ್ಲಿ 880 ಖಾಯಂ ಸಿಬ್ಬಂದಿ, 1800 ಗುತ್ತಿಗೆ ಕಾರ್ಮಿಕರು ಇದ್ದಾರೆ. ತಿಂಗಳಿಗೆ 15–16 ಕೋಟಿ ರೂ. ಸಿಬ್ಬಂದಿ ವೆಚ್ಚಕ್ಕೆ ಬೇಕಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಆಡಳಿತಾತ್ಮಕವಾಗಿ, ಮಾರುಕಟ್ಟೆ ವಿಚಾರದಲ್ಲಿ ಸಾಕಷ್ಟು ಬದಲಾವಣೆ, ಸುಧಾರಣೆ ಮಾಡುವ ಜವಾಬ್ದಾರಿ ನಮ್ಮ ಆಡಳಿತ ಮಂಡಳಿಗೆ ಇದೆ. ನಾನು ಬಮೂಲ್ ಅಧ್ಯಕ್ಷನಾದ ಬಳಿಕ ಬದಲಾವಣೆ ಮಾಡುವ ನಿರೀಕ್ಷೆ ರೈತರು, ಕಾರ್ಮಿಕರಲ್ಲಿದೆ ಎಂದು ವಿವರಿಸಿದ್ದಾರೆ.

# ತರಲೆಗಳ ತಲೆದಂಡ..?


### ಶಾಸಕಾಂಗ ಸಭೆಯಲ್ಲಿ ಮಹತ್ತರ ಚರ್ಚೆ | ಶಾಸಕರ ಮಾತಿಗೆ ಮನ್ನಣೆ ನೀಡದ ಸಚಿವರ ವಿರುದ್ಧ ದೂರು

- ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಕಾಂಗ್ರೆಸ್‌ನಲ್ಲಿ ಕುರ್ಚಿಯ ಜಟಾಪಟಿ ಇನ್ನೂ ನಿಂತಿಲ್ಲ. ಒಂದೆಡೆ ಡಿಸಿಎಂ ಹಾಗೂ ಅವರ ಬಣ ಸದ್ದು ಮಾಡಿದರೆ ಮತ್ತೊಂದು ಕಡೆ ಸಿಎಂ ಸಿದ್ದರಾಮಯ್ಯ ಚರ್ಚೆಗೆ ಗ್ರಾಸವಾಗುತ್ತಿದ್ದಾರೆ. ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್ಪಿ) ಸಭೆಯನ್ನು ಬಳಸಿಕೊಂಡ ಸಿಎಂ ತಾವೇ ಪೂರ್ಣ ಅವಧಿಗೆ ಮುಖ್ಯಮಂತ್ರಿಯಾಗಿ ಮುಂದುವರಿಯುವುದಾಗಿ ಸಂದೇಶ ರವಾನಿಸಿರುವುದು ಡಿಕೆಶಿ ಬಣಕ್ಕೆ ಬಿಸಿತುಪ್ಪವಾಗಿದೆ. ಏತನ್ಮಧ್ಯೆ ಹಿರಿಯ ಸಚಿವರು ಶಾಸಕರಿಗೆ ಸ್ಪಂದಿಸದೇ ಇದ್ದು ಶಾಸಕರು ದೂರಿದ್ದು, ಹಲವರ ತಲೆದಂಡಕ್ಕೆ ಸಿಎಂ ಮುಂದಾಗಿದ್ದಾರೆ ಎನ್ನಲಾಗಿದೆ.

**ಶಾಸಕರಿಗೆ ಸಿಎಂ ಹೇಳಿದ್ದು..?:** ನನ್ನ ಮುಂದಿನ ಬಜೆಟ್‌ನಲ್ಲಿ, ಪ್ರತಿಯೊಬ್ಬ ಸಚಿವರು ತಮ್ಮ ಇಲಾಖೆಗಳ ಬೇಡಿಕೆಗಳ ಕುರಿತು ಮಾತನಾಡಬೇಕು ಎಂದು ಸಿದ್ದರಾಮಯ್ಯ ಹೇಳಿದ್ದಾಗಿ ಶಾಸಕರೊಬ್ಬರು ತಿಳಿಸಿದ್ದಾರೆ.

**ಹೈಕಮಾಂಡ್ ಅಂತಿಮ:** ಮಾರ್ಚ್ 27ರಂದು ಅಧಿವೇಶನ ಮುಕ್ತಾಯವಾದ ಬಳಿಕ ಕಾಂಗ್ರೆಸ್ ಹೈಕಮಾಂಡ್ ನಾಯಕತ್ವ ಬದಲಾವಣೆ ವಿಚಾರ ಕುರಿತ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ.



**ಹೈಕಮಾಂಡ್ ಮೇಲೆ ಒತ್ತಡ**

ಹಿರಿಯ ಶಾಸಕರು ಇಂದು ಪ್ರತ್ಯೇಕ ಸಭೆ ನಡೆಸುವ ಮುನ್ನ ಸಿಎಂ–ಡಿಸಿಎಂ ಜೊತೆಯಲ್ಲೂ ಚರ್ಚೆ ನಡೆಸಿದ್ದಾರೆ. ಸಿಎಂ ಅವರು, ಹಿರಿಯ ಶಾಸಕರಿಗೆ ಅವಕಾಶ ಕಲ್ಪಿಸಬೇಕಾದರೆ, ಸಂಪುಟದಲ್ಲಿರುವ ಕೆಲ ಸಚಿವರನ್ನು ಕೈಬಿಡಬೇಕು. ಸಂಪುಟ ಪುನಾರಚನೆಗೆ ಹೈಕಮಾಂಡ್ ಒಪ್ಪಬೇಕು. ಇದಕ್ಕೆ ದೆಹಲಿಗೆ ಹೋದಾಗ ವರಿಷ್ಠರ ಮೇಲೆ ಒತ್ತಡ ಹೇರುವಂತೆ ಶಾಸಕರ ನಿಯೋಗಕ್ಕೆ ಸಲಹೆ ನೀಡಿದ್ದಾರೆ ಎಂದು ಮೂಲ ತಿಳಿಸಿದೆ.

> ಮೊದಲ ಬಾರಿಗೆ ಶಾಸಕರಾದವರು ಸಂಪುಟದಲ್ಲಿ ಸೇರ್ಪಡೆಯಾಗವು ಲಾಬಿ ನಡೆಸುತ್ತಿದ್ದಾರೆ. ಅವರಿಗೆ ಸಾಧ್ಯವಾಗುವುದಾದರೆ, 4 ಬಾರಿ ಗೆದ್ದಿರುವ ನಮಗೇಕೆ ಹಕ್ಕು ಮಂಡಿಸಲು ಸಾಧ್ಯವಿಲ್ಲ? ನಾವು ಇದನ್ನು ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗೆ ತಿಳಿಸುತ್ತೇವೆ. ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲು ದೆಹಲಿಗೆ ಹೋಗುತ್ತೇವೆ.
>
> –ಬೇಲೂರು ಗೋಪಾಲಕೃಷ್ಣ, ಶಾಸಕ

**ಸಕಾಲದಲ್ಲಿ ಹೈ ತೀರ್ಮಾನ**

ನಾಯಕತ್ವ ವಿಚಾರದಲ್ಲಿ ಕಾಂಗ್ರೆಸ್ ಸಂಸದೀಯ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿ, ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಅಖಿಲ ಭಾರತೀಯ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಡುವೆ ಚರ್ಚೆ ನಡೆದಿದೆ. ಪಕ್ಷದ ಉನ್ನತ ನಾಯಕತ್ವವು ಸಿಎಂ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಿದೆ ಎಂದು ಮೂಲಗಳು ಖಚಿತ ಪಡಿಸಿವೆ.


**ಸಂಪುಟ ಪುನಾರಚನೆ ನಿರೀಕ್ಷೆ**

ಸಿಎಂ ಸಿದ್ದರಾಮಯ್ಯ ಅವರ ಬೆಂಬಲಿಗರು ಸಚಿವ ಸಂಪುಟ ಪುನಾರಚನೆಗೆ ಉನ್ನತ ನಾಯಕತ್ವದ ಅನುಮತಿ ಪಡೆಯುವ ನಿರೀಕ್ಷೆಯಲ್ಲಿದ್ದಾರೆ. ಆದರೆ, ಶಿವಕುಮಾರ್ ಬೆಂಬಲಿಗರು ಸಿಎಂ ಕುರ್ಚಿ ಬದಲಾಗಬಹುದು ಎಂಬ ನಿರೀಕ್ಷೆಯಲ್ಲಿದ್ದಾರೆ. ಈ ನಡುವೆ ಶಾಸಕ ಬೇಲೂರು ಗೋಪಾಲಕೃಷ್ಣ ನೇತೃತ್ವದಲ್ಲಿ ಹಿರಿಯ ಶಾಸಕರು ಭೋಜನ ಕೂಟದಲ್ಲಿ ಸಭೆ ಸೇರಿ ಸಂಪುಟ ಸ್ಥಾನಕ್ಕಾಗಿ ಹಕ್ಕು ಮಂಡಿಸಿದ್ದಾರೆ ಎನ್ನಲಾಗಿದೆ.

**ಏಕ ಪಕ್ಷೀಯ ನಡತೆ**

ಸಚಿವರು, ಶಾಸಕರಿಗೆ ಸ್ಪಂದಿಸುತ್ತಿಲ್ಲ. ಸರ್ವಾಧಿಕಾರಿಯಂತಾಗುತ್ತಿದ್ದಾರೆ. ಪೊಲೀಸ್ ಸೇರಿ, ಅಧಿಕಾರಿಗಳ ವರ್ಗಾವಣೆಯಲ್ಲೂ ಸಚಿವರು ಏಕ ಪಕ್ಷೀಯವಾಗಿ ನಡೆದು ಕೊಳ್ಳುತ್ತಿದ್ದಾರೆ. ಶಾಸಕರ ಮಾತಿಗೆ ಮನ್ನಣೆ ನೀಡುತ್ತಿಲ್ಲ ಎಂದು ಶಾಸಕಾಂಗ ಸಭೆಯಲ್ಲೇ ಕೆಲವು ಶಾಸಕರ ನಡುವೆಯೇ ಸಂಘರ್ಷದ ಚರ್ಚೆ ನಡೆದಿವೆ. ಈ ಹಿನ್ನೆಲೆಯಲ್ಲಿ ಸಿಎಂ ಕೆಲವರ ತಲೆದಂಡಕ್ಕೆ ಮುಂದಾಗಿದ್ದಾರೆ.

## ಪ್ರೀತಿಸುವಂತೆ ಒತ್ತಡ, ವಿದ್ಯಾರ್ಥಿನಿ ಆತ್ಮಹತ್ಯೆ



**ಭೆಮಳಖೇಡ(ಬೀದರ್):** ಪ್ರೀತಿಸುವಂತೆ ಸಹಪಾಠಿ ವಿದ್ಯಾರ್ಥಿಯೊಬ್ಬ ಪೀಡಿಸಿದ ಹಿನ್ನೆಲೆಯಲ್ಲಿ ನೊಂದ ವಿದ್ಯಾರ್ಥಿನಿ ಶಾಲೆಯ ಮಹಡಿ ಮೇಲಿಂದ ಜಿಗಿದು ಆತಹತ್ಯೆ ಮಾಡಿಕೊಂಡಿದ್ದಾಳೆ. ಈ ಘಟನೆ ಚಿಟಗುಪ್ಪಾ ತಾಲೂಕಿನ ಭೆಮಳಖೇಡ ಗ್ರಾಮದಲ್ಲಿ ನಡೆದಿದೆ. ಮದಿಯಾ ನಶೀರ್ ಪಾಷಾ (16) ಆತಹತ್ಯೆಗೆ ಮಾಡಿಕೊಂಡವಳು. ಭೆಮಳಖೇಡ ಗ್ರಾಮದ ಶಾಲೆಯೊಂದರಲ್ಲಿ ಹತ್ತನೇ ತರಗತಿ ಓದುತ್ತಿದ್ದರುವ ಈಕೆಗೆ ಸಹಪಾಠಿ ಪ್ರೀತಿಸುವಂತೆ ಒತ್ತಡ ಹಾಕುತ್ತಿದ್ದ. ಈ ದೃಶ್ಯಸಿಸಿಟಿವಿಯಲ್ಲಿ ಸೆರೆಯಾಗಿದೆ. ಆದರೂ ಈವರೆಗೂ ವಿದ್ಯಾರ್ಥಿನಿ ಆತಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ ಎಮದು ಪೊಲೀಸರು ತಿಳಿಸಿದ್ದಾರೆ. ಭೆಮಳಖೇಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹೆಚ್ಚಿನ ತನಿಖೆ ಕೈಗೊಳ್ಳಲಾಗಿದೆ ಎಂದು ಹೇಳಿದರು.

## ಕಲಬೆರಕೆ ಹಾಲು: ಸಾವಿನ ಸಂಖ್ಯೆ 13ಕ್ಕೆ

**ರಾಜಮಹೇಂದ್ರವರಂ:** ಪೂರ್ವ ಗೋದಾವರಿ ಜಿಲ್ಲೆಯಲ್ಲಿ ಶಂಕಿತ ಹಾಲು ಕಲಬೆರಕೆ ಪ್ರಕರಣದಲ್ಲಿ ಮೃತರ ಸಂಖ್ಯೆ 13 ಕ್ಕೆ ಏರಿದೆ. ಏಳು ಜನರು ರಾಜಮಹೇಂದ್ರವರಂನ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆ–ಯುತ್ತಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಫೆಬ್ರವರಿ 22 ರಂದು ಹಲವಾರು ವೃದ್ಧ ನಿವಾಸಿಗಳು ಅನುರಿಯಾ, ವಾಂತಿ, ಹೊಟ್ಟೆ ನೋವು ಮತ್ತು ಡಯಾಲಿಸಿಸ್ ಅಗತ್ಯವಿರುವ ತೀವ್ರ ಮೂತ್ರಪಿಂಡದ ಅಸಾಮಾನ್ಯ ಕ್ರಿಯೆಯಂತಹ ರೋಗಲಕ್ಷಣಗಳೊಂದಿಗೆ ಆಸ್ಪತ್ರೆಗಳಿಗೆ ದಾಖಲಾದ ನಂತರ ಪ್ರಕರಣಗಳ ಗುಂಪನ್ನು ಮೊದಲು ಗಮನಿಸಲಾಯಿತು ಎಂದು ಆರೋಗ್ಯ ಇಲಾಖೆಯ ಅಧಿಕಾರಿ ವಿವರಿಸಿದ್ದಾರೆ.

## ಸಿಎಲ್ಪಿಯಲ್ಲಿ ಶಾಸಕರಿಗೆ ಸಿಎಂ ಹೇಳಿದ್ದು..?

- ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್ಪಿ) ಸಭೆಯಲ್ಲಿ ಶಾಸಕ ಪಿ.ಎಂ. ನರೇಂದ್ರಸ್ವಾಮಿ ಅವರು ಎಸ್ಸಿಗಳಿಗೆ ಆಂತರಿಕ ಕೋಟಾ ಜಾರಿಗೆ ತರುವ ನಿರ್ಧಾರದಲ್ಲಿನ ವಿಳಂಬದ ವಿಷಯವನ್ನು ಎತ್ತಿದ್ದಾರೆ. ಮಾ.27 ರಂದು ನಿರ್ಧಾರ ತೆಗೆದುಕೊಳ್ಳಲು ಕರೆಯಲಾದ ವಿಶೇಷ ಸಚಿವ ಸಂಪುಟ ಸಭೆಯ ಮೊದಲು ಎಸ್ಸಿ ಸಮುದಾಯಗಳಿಂದ ಬಂದ ಎಲ್ಲಾ ಶಾಸಕರ ಸಭೆಯನ್ನು ಕರೆಯುವಂತೆ ಸೂಚಿಸಿದ್ದಾರೆ.

ಸಾಕಷ್ಟು ಆದಾಯ ಬಂದರೆ ಪೂರಕ ಬಜೆಟ್ನಲ್ಲಿ ಪರಿಗಣಿಸುವುದಾಗಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ಬಜೆಟ್ ಅನ್ನು ಚೆನ್ನಾಗಿ ಸಿದ್ಧಪಡಿಸಲಾಗಿದೆ. ಕಳೆದ ಬಾರಿಗಿಂತ ಹೆಚ್ಚಿನ ಹಣವನ್ನು ಎಲ್ಲಾ ಇಲಾಖೆಗಳಿಗೆ ನೀಡಲಾಗಿದೆ. ಕೇಂದ್ರದಿಂದ ನಿರೀಕ್ಷಿತ ನೆರವು ಸಿಗದಿದ್ದರೂ, ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದು ಸಿಎಂ ವಿವರಿಸಿದ್ದಾರೆ. ಸಚಿವರು ಎರಡೂ ಸದನಗಳಲ್ಲಿ ಹಾಜರಿರಬೇಕು ಎಂದು ಅವರು ಸಲಹೆ ನೀಡಿದ್ದು, ವಿಧಾನಸಭೆ ಮತ್ತು ಪರಿಷತ್ ಸದಸ್ಯರು ಕಲಾಪಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕೆಂದು ಒತ್ತಾಯಿಸಿದ್ದಾರೆ.

## ಷರತ್ತು ಒಪ್ಪಿದರೆ ಯುದ್ಧ ಇಲ್ಲ: ಇರಾನ್


- ಮಲ್ಲಮ್ಮ ನುಡಿ ವಾರ್ತೆ ಟೆಹ್ರಾನ್

ನಮ್ಮ ಮೂರು ಷರತ್ತುಗಳನ್ನು ಒಪ್ಪಿಕೊಂಡರೆ ಮಧ್ಯಪ್ರಾಚ್ಯ ಯುದ್ಧ ಅಂತ್ಯಗೊಳಿಸುವುದಾಗಿ ಇರಾನ್ ಘೋಷಿಸಿದೆ. ಇದರಿಂದ ಅಮೆರಿಕ, ಇಸ್ರೇಲ್ ಹಾಗೂ ಇರಾನ್ ಮಧ್ಯೆ ನಡುವೆ ನಡೆಯುತ್ತಿರುವ ಯುದ್ಧ ಕೊನೆಗೊಳ್ಳುವ ಲಕ್ಷಣಗಳು ಗೋಚರಿಸತೊಡಗಿವೆ.

ಅಮೆರಿಕದ ನೆಲೆಗಳು ಮತ್ತು ಮಧ್ಯಪ್ರಾಚ್ಯ ದೇಶಗಳ ಮೇಲೆ ನಡೆಯುತ್ತಿರುವ ದಾಳಿ ಕೊನೆಯಾಗಬೇಕಾದರೆ ನಮ್ಮ ಮೂರು ಷರತ್ತನ್ನುಗಳನ್ನು ಒಪ್ಪಿಕೊಳ್ಳಬೇಕೆಂದು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ತಿಳಿಸಿದ್ದಾರೆ.

ಸಂಘರ್ಷದ ಸಮಯದಲ್ಲಿ ಉಂಟಾದ ಹಾನಿಗಳಿಗೆ ಪರಿಹಾರ ನೀಡಬೇಕು. ಭವಿಷ್ಯದಲ್ಲಿ ಆಕ್ರಮಣ ಮಾಡುವುದಿಲ್ಲ ಎಂದು ದೃಢವಾದ ಅಂತರರಾಷ್ಟ್ರೀಯ ಖಾತರಿಗಳನ್ನು ನೀಡಬೇಕು ಎಂದು ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಶಾಂತಿಗೆ ಇರಾನ್ ಬದ್ಧತೆಯನ್ನು ನಾನು ಪುನರುಚ್ಚರಿಸಿದ್ದೇನೆ. ಜಿಯೋನಿಸ್ಟ್ ಆಡಳಿತ ಮತ್ತು ಅಮೆರಿಕ ಹೊತ್ತಿಸಿದ ಈ ಯುದ್ಧವನ್ನು ಕೊನೆಗೊಳಿಸಲು ಇರುವ ಏಕೈಕ ಮಾರ್ಗ ಇದು ಎಂದು ಬರೆದಿದ್ದಾರೆ.

## ಸೂರ್ಯನಿಗೇ ಟಾರ್ಚ್ ಹಿಡಿದ ದೀಪ..!




- ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ತಾಲೂಕಿನ ಪ್ರತಿಯೊಂದು ಗ್ರಾ.ಪಂ. ವ್ಯಾಪ್ತಿಯ ಗ್ರಾಮಗಳಲ್ಲಿ ಹಗಲಲ್ಲಿ ವಿದ್ಯುತ್ ದೀಪಗಳು ಉರಿಯುತ್ತಿರುವುದರಿಂದ ವಿದ್ಯುತ್ ಪೋಲಾಗುತ್ತಿದೆ. ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಆಗುತ್ತಿಲ್ಲ. ಅನಗತ್ಯವಾಗಿ ದೀಪಗಳು ಉರಿಯದಂತೆ ಕ್ರಮ ಕೈಗೊಳ್ಳಬೇಕೆಂದು ಕನ್ನಡ ಸೇನೆ ಕರ್ನಾಟಕ ತಾಲುಕಾಧ್ಯಕ್ಷ ಪವನ ಪೂಜಾರಿ ನೇತೃತ್ವದಲ್ಲಿ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್‌ಗೆ ಮನವಿ ಸಲ್ಲಿಸಿದ್ದಾರೆ. ನಂತರ ಮಾತನಾಡಿ, ರೈತರು ಸಮರ್ಪಕ ವಿದ್ಯುತ್ ಪೂರೈಕೆ ಇಲ್ಲದ್ದಕ್ಕೆ ಕಂಗಾಲಗುತ್ತಿದ್ದಾರೆ. ಇದರಿಂದ ಬೆಳೆಗಳು ಸಂಪೂರ್ಣ ಒಣಗುತ್ತಿವೆ. ಆದರೆ ಪ್ರತಿಯೊಂದು ಗ್ರಾಮಗಳಲ್ಲಿ ವಿದ್ಯುತ್ ಬೀದಿ ಕಂಬಗಳಿಗೆ ಅಳವಡಿಸಲಾದ ಬೀದಿ ದೀಪಗಳು ಅನಗತ್ಯವಾಗಿ ಹಗಲಲ್ಲೇ ಉರಿಯುತ್ತಿದ್ದರೂ ಸಂಬಂಧ ಪಟ್ಟ ಅಧಿಕಾರಿಗಳು ಯಾವುದೇ ಕ್ರಮಕೈಗೊಳ್ಳದ ಕಾರಣ ರೈತರಿಗೆ ತೀವ್ರತೊಂದರೆ ಆಗುತ್ತಿದೆ ಎಂದು ತಿಳಿಸಿದ್ದಾರೆ, ತಿಪಣ್ಣರೆಡ್ಡಿ ಇಟಗಾ, ಉಮೇಶ್ ಧೂಮಾಳೆ, ಉದಯ ಹಿಬಾರೆ, ಮೊಸಿನ್, ಮುಜೀಬ್ ಖುರೇಶಿ, ವಿಷ್ಣುಕುಮಾರ ರಾಠೋಡ, ಪ್ರಭು ಸ್ವಾಮಿ, ರಾಜುರೆಡ್ಡಿ, ಆದರ್ಶ, ಯುನುಸ್, ಪವನ ಜಾಧವ್, ಅಕ್ಷಯ, ಶ್ರೀನಿವಾಸ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಮನವಿ

- ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ನಗರದ ಮಾಜಿ ಚಿವರ ಗೃಹ ಕಚೇರಿಯಲ್ಲಿ ಡಾಕುಳಗಿ ಗ್ರಾಮದ ರೈತರು ತಮ್ಮ ಹೊಲಗಳಲ್ಲಿ ಎದುರಾದ ವಿದ್ಯುತ್ ಸಮಸ್ಯೆಯನ್ನು ಬಗೆಹರಿಸುವಂತೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಮನವಿ ಮಾಡಿದ್ದಾರೆ.

ಡಾಕುಳಗಿ ಗ್ರಾಮದ ಕೆಲ ಪ್ರಮುಖ ರೈತರು ಮಾತನಾಡಿ, ವಿದ್ಯುತ್ ಸಂಪರ್ಕ ಕಡಿತದಿಂದಾಗಿ ಡಾಕುಳಗಿ ಗ್ರಾಮದ ಬಹುತೇಕ ರೈತರ ಹೊಲ ಗದ್ದೆಗಳಲ್ಲಿ ಬೆಳೆದ ಸಮೃದ್ಧ ಬೆಳೆ ಹಾಳಾಗಿ ಹೋಗುತ್ತಿದೆ. ಹೀಗಾಗಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಮಾತನಾಡಿ ನಮಗೆ ಎದುರಾಗಿರುವ ವಿದ್ಯುತ್ ಸಮಸ್ಯೆ ಶಾಶ್ವತ ಪರಿಹಾರ ಕಲ್ಪಿಸಿಕೊಡಬೇಕು ಎಂದು ಕೋರಿದ್ದಾರೆ. ಎಂ.ಡಿ. ಶಫಿ ಅಲಿಭಾಯ್, ಸಾಬೀರ್ ಇನಾಮದಾರ್, ಬಸವರಾಜ ಜೀವಣಗಿ, ಅನಿಲ ಹಲಬುರ್ಗಿ, ಸಿದ್ದಯ್ಯ ಸ್ವಾಮಿ, ವೀರೇಶ ಮಠಪತಿ, ಶಿವಕುಮಾರ ರೆಡ್ಡಿ, ಮಲ್ಲಪ್ಪ ಎಖ್ಖೇಳ್ಳಿ ಸೇರಿ ಅನೇಕರಿದ್ದರು.



**ಇಲಾಖೆ ಅಧಿಕಾರಿ ಜತೆ ಚರ್ಚಿಸಿ ಪರಿಹಾರ**

ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿ, ಡಾಕುಳಗಿ ಗ್ರಾಮದ ರೈತರಿಗೆ ಆಗುತ್ತಿರುವ ವಿದ್ಯುತ್ ಸಮಸ್ಯೆ ಕುರಿತು ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳ ಜತೆಯಲ್ಲಿ ಮಾತನಾಡಿ ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

**ರಾಜ್ಯದಲ್ಲಿ ಅಭಿವೃದ್ಧಿ ಮರೀಚಿಕೆ ಆಗಿದೆ. ಇದರ ಬದಲಿಗೆ ಬರೀ ಕುರ್ಚಿಯ ಕಿತ್ತಾಟ ಆಗುತ್ತಿದೆ: ಛಲವಾದಿ ನಾರಾಯಣ ಸ್ವಾಮಿ**

# ಸಮಾಜದಲ್ಲಿ ಮಹಿಳೆಯರ ಕೊಡುಗೆ ಅನನ್ಯ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಮಹಿಳೆಯರು ಸಮಾಜದ ಬೆನ್ನೆಲುಬು ಮತ್ತು ಅವರ ಕೊಡುಗೆ ಅನನ್ಯ ಹಾಗೂ ಬಹುಮುಖಿಯಾಗಿದೆ ಎಂದು ನಿವೃತ್ತ ಉಪನ್ಯಾಸಕಿ ನಿರ್ಮಲಾ ಬಿರಾದಾರ್ ಅಭಿಪ್ರಾಯಪಟ್ಟರು. ಪಟ್ಟಣದ ಕೆಎಚ್‌ಬಿ ಕಾಲೋನಿಯ ಶಿವಂ ಹಲ್ಲಿನ ಆಸ್ಪತ್ರೆಯಲ್ಲಿ ಮಹಿಳಾ ಶಕ್ತಿ ಸಂಘಟನೆ ವತಿಯಿಂದ ಆಯೋಜಿಸಿದ್ದ ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯ ಸಾಮರ್ಥ್ಯಕ್ಕೆ ಸಾಟಿ ಇಲ್ಲ. ಆಕೆ ಉತ್ತುಂಗದ ಸಾಧನೆ ಮಾಡಬಹುದು. ತನ್ನ ಮಕ್ಕಳನ್ನು ದೇಶದ ಅತ್ಯುನ್ನತ ಸ್ಥಾನಕ್ಕೂ ಏರಿಸಬಹುದು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ದೇವಿಕಾ ಭಾಲ್ಕೆ ಮಾತನಾಡಿ, ಮಹಿಳೆ ಅಂ–ದ್ರೆ ಆದಿಶಕ್ತಿ ಸ್ವರೂಪ ಅವಳಲ್ಲಿ ಪ್ರೀತಿ, ವಿಶ್ವಾಸ, ತಾಳ್ಮೆ ಹಾಗೂ ಹೊಂದಾಣಿಕೆ ಸುಖಿ ಕುಟುಂಬದ ಸೂತ್ರಧಾರಿ ಮಹಿಳೆ ಎಂದು ತಿಳಿಸಿದರು.

> “ಮಹಿಳೆಯರ ಶಿಕ್ಷಣ, ಆತ್ಮಗೌರವ ಹಾಗೂ ಸ್ವಾವಲಂಬನೆಯ ಮೂಲಕ ಮುಂದೆ ಬಂದಾಗ ಮಾತ್ರ ಸಮಾಜದ ಸಮಗ್ರ ಅಭಿವೃದ್ಧಿ ಸಾಧ್ಯವಾಗುತ್ತದೆ. ಮಹಿಳೆಯರು ತಮ್ಮ ಹಕ್ಕುಗಳ ಬಗ್ಗೆ ಜಾಗೃತರಾಗಬೇಕು. ಸಮಾಜದಲ್ಲಿ ನಾಯಕತ್ವ ವಹಿಸುವ ಧೈರ್ಯವನ್ನು ಬೆಳೆಸಿಕೊಳ್ಳಬೇಕು.
>
> **ಶೃತಿ ಸಂತೋಷ ಬಿಜಿ ಪಾಟೀಲ್ ಅಧ್ಯಕ್ಷರು ಬಸವ ಭಾಗ್ಯ ಎಜುಕೇಷನಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಭಾಲ್ಕಿ**

ವನಮಾಲಾ ಪಾಟೀಲ ಮಾತನಾಡಿ ಇಡೀ ಕುಟುಂಬದ ಜವಾಬ್ದಾರಿ ಹೊತ್ತುಕೊಳ್ಳುವ ಮಹಿಳೆಯರು ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

**ಸನ್ಮಾನ :** ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳೆಯರನ್ನು ಸತ್ಕರಿಸಿ, ಪ್ರೋತ್ಸಾಹಿಸಲಾಯಿತು. ಈ ಸಂದರ್ಭದಲ್ಲಿ ಶಿಕ್ಷಕಿ ಸಂಗೀತಾ ನಿಟ್ಟೂರೆ, ದೀಪಿಕಾ ರವೀಂದ್ರ ಚಿಡಗುಪ್ಪೆ, ಪ್ರತಿಭಾ ಪಾಟೀಲ, ಸಾವಿತ್ರಿ ದಾಡಗೆ, ಆರತಿ ಬಿರಾದಾರ, ಸುವರ್ಣಾ ಡಿಗ್ಗೆ, ಮಹಾದೇವಿ ಬಿರಾದರ, ಗೀತಾ ಪಾಟೀಲ, ಸುನಿತಾ ಲಾಂಚಕರ್, ಕಾವೇರಿ ಪಂಚಾಕ್ಷರೆ, ಮಮತಾ ಬಿರಾದಾರ, ಸಾವಿತ್ರಿ ಗುಂಗೆ, ಶಿಕ್ಷಕಿ ರಜನಿ, ಪ್ರೀಯಾ ಪಾಟೀಲ, ಕವಿತಾ, ದಾಕ್ಷಾಯಣಿ, ಮಹಾದೇವಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶಿಕ್ಷಕಿ ಸಂಗೀತಾ ನಿಟ್ಟೂರೆ ಸ್ವಾಗತಿಸಿದರು. ಪ್ರೀಯಾ ಪಾಟೀಲ ವಂದಿಸಿದರು.

# ಕನ್ನಡ ಬಿಟ್ಟು ಇತರೆ ಭಾಷಾ ಪ್ರಚಾರದ ಆರೋಪ: ಅಧಿಕಾರಿಗಳ ಕ್ರಮದ ಎಚ್ಚರಿಕೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಕನ್ನಡವು ಜ್ಞಾನಪೀಠ ಪ್ರಶಸ್ತಿ ಪಡೆದ ಮಹತ್ವದ ಸಾಹಿತ್ಯ ಪರಂಪರೆ ಹೊಂದಿರುವ ಹಾಗೂ ಶಾಸ್ತ್ರೀಯ ಭಾಷೆಯಾಗಿ ಮಾನ್ಯತೆ ಪಡೆದಿರುವ ಸಮೃದ್ಧ ಭಾಷೆಯಾಗಿದ್ದರೂ, ಗಡಿಭಾಗಗಳಲ್ಲಿ ಕನ್ನಡಕ್ಕಿಂತ ಇತರೆ ಭಾಷೆಗಳ ಬಳಕೆ ಹೆಚ್ಚಾಗುತ್ತಿರುವುದು ಕನ್ನಡಾಭಿಮಾನಿಗಳಲ್ಲಿ ಆತಂಕ ಮೂಡಿಸಿದೆ.

ಸಮೀಪದ ಭಾಲ್ಕಿ ತಾಲ್ಲೂಕಿನ ಗುಂಜರ್ಗಾ, ಬಸವನವಾಡಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ನೆರೆ ರಾಜ್ಯದ ಮರಾಠವಾಡ ಪ್ರದೇಶದಿಂದ ಬಂದ ಕೆಲವರು ಮರಾಠಿ ಭಾಷೆಯ ಅಭಿಮಾನವನ್ನು ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರಲ್ಲಿ ಬೆಳೆಸುವ ನಿಟ್ಟಿನಲ್ಲಿ ಚಟುವಟಿಕೆಗಳನ್ನು ನಡೆಸುತ್ತಿರುವ ಆರೋಪ ಕೇಳಿಬಂದಿದೆ.

ಕರ್ನಾಟಕ ಸರ್ಕಾರದಿಂದ ಸಂಬಳ ಪಡೆಯುವ ಕೆಲ ಅಧಿಕಾರಿಗಳು ಮತ್ತು ಶಿಕ್ಷಕರು ಕನ್ನಡ ಭಾಷೆಯ ಪ್ರಚಾರಕ್ಕಿಂತ ಇತರೆ ಭಾಷೆಗಳ ಅಭಿಮಾನ ಬೆಳೆಯುವಂತೆ ಮಾಡುವ ಕಾರ್ಯದಲ್ಲಿ ತೊಡಗಿರುವುದಾಗಿ ಕನ್ನಡಾಭಿಮಾನಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಿಆರ್‌ಪಿ, ಬಿಆರ್‌ಪಿ ಹಾಗೂ ಶಾಲಾ ಮುಖ್ಯ ಶಿಕ್ಷಕರು ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ ಎಂಬ ಆರೋಪವೂ ಕೇಳಿಬಂದಿದೆ.

> “ಕರ್ನಾಟಕದ ಸರ್ಕಾರಿ ಶಾಲೆಗಳಲ್ಲಿ ಕನ್ನಡ ಬಿಟ್ಟು ಇತರೆ ಭಾಷೆಗಳ ಪ್ರಚಾರ–ಪ್ರಸಾರಕ್ಕೆ ಅವಕಾಶ ನೀಡಿದರೆ ಸಂಬಂಧಪಟ್ಟ ಮುಖ್ಯ ಶಿಕ್ಷಕ ಹಾಗೂ ಸಿಆರ್‌ಪಿ ವಿರುದ್ಧ ಕಾರಣ ಕೇಳುವ ನೋಟಿಸ್ ನೀಡಿ ಕ್ರಮ ಕೈಗೊಳ್ಳಲಾಗುವುದು.
>
> **ಚನ್ನಬಸಪ್ಪ ಹಳ್ಳದ, ಕ್ಷೇತ್ರ ಶಿಕ್ಷಣಾಧಿಕಾರಿ, ಭಾಲ್ಕಿ**

> “ಗಡಿಭಾಗದ ಸರ್ಕಾರಿ ಶಾಲೆಗಳಲ್ಲಿ ಕನ್ನಡ ಭಾಷೆಗೆ ಪ್ರಾಮುಖ್ಯತೆ ನೀಡಬೇಕಾದರೆ ಕೆಲವೆಡೆ ಇತರೆ ಭಾಷೆಗಳ ಪ್ರಚಾರ ನಡೆಯುತ್ತಿರುವುದು ಆತಂಕಕಾರಿ ವಿಷಯ. ಸರ್ಕಾರದಿಂದ ಸಂಬಳ ಪಡೆಯುವ ಶಿಕ್ಷಕರು ಕನ್ನಡದ ಗೌರವ ಕಾಪಾಡುವ ಜವಾಬ್ದಾರಿ ಹೊಂದಿದ್ದಾರೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು.
>
> **ಗಣೇಶ ಪಾಟೀಲ, ಜಿಲ್ಲಾಧ್ಯಕ್ಷರು, ನಮ್ಮ ಕರ್ನಾಟಕ ಸೇನೆ ಸಂಘಟನೆ**

ಈ ಕುರಿತು ಪ್ರತಿಕ್ರಿಯಿಸಿದ ಭಾಲ್ಕಿ ಕ್ಷೇತ್ರ ಶಿಕ್ಷಣಾಧಿಕಾರಿ ಚನ್ನಬಸಪ್ಪ ಹಳ್ಳದ ಅವರು, ಸರ್ಕಾರಿ ಶಾಲೆಗಳಲ್ಲಿ ಕನ್ನಡ ಬಿಟ್ಟು ಇತರೆ ಭಾಷೆಗಳ ಪ್ರಚಾರ ನಡೆಯುತ್ತಿರುವುದು ಕಂಡುಬಂದರೆ ಸಂಬಂಧಪಟ್ಟ ಮುಖ್ಯ ಶಿಕ್ಷಕ ಹಾಗೂ ಸಿಆರ್‌ಪಿ ವಿರುದ್ಧ ಕಾರಣ ಕೇಳುವ ನೋಟಿಸ್ ನೀಡಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



## ಬೇಸಿಗೆಯಲ್ಲಿ ಕುಡಿಯುವ ನೀರಿಗೆ ಅಧಿಕಾರಿಗಳ ಹೆಚ್ಚಿನ ಗಮನ ಅಗತ್ಯ

ಬೇಸಿಗೆ ಕಾಲ ಆರಂಭವಾದಂತೆ ರಾಜ್ಯದ ಅನೇಕ ಗ್ರಾಮಗಳು ಹಾಗೂ ಪಟ್ಟಣಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗುತ್ತಿರುವುದು ಕಾಣಿಸುತ್ತಿದೆ. ಉಷ್ಣತೆ ಹೆಚ್ಚಾಗುವುದರಿಂದ ಬಾವಿಗಳು, ಕೆರೆಗಳು, ನೀರಿನ ಮೂಲಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಇಂತಹ ಸಂದರ್ಭದಲ್ಲಿ ಜನರು ಕುಡಿಯುವ ನೀರಿಗಾಗಿ ಸಂಕಷ್ಟ ಅನುಭವಿಸುವ ಪರಿಸ್ಥಿತಿ ಉಂಟಾಗುತ್ತದೆ. ಆದ್ದರಿಂದ ಬೇಸಿಗೆ ಆರಂಭವಾಗುವ ಮೊದಲೇ ಅಧಿಕಾರಿಗಳು ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ಹೆಚ್ಚಿನ ಗಮನ ಹರಿಸುವುದು ಅತ್ಯಾವಶ್ಯಕವಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಇನ್ನಷ್ಟು ಗಂಭೀರವಾಗಿರುತ್ತದೆ. ಅನೇಕ ಗ್ರಾಮಗಳಲ್ಲಿ ಸರಿಯಾದ ನೀರಿನ ಸರಬರಾಜು ಇಲ್ಲದೆ ಜನರು ದೂರದೂರಿಗೆ ಹೋಗಿ ನೀರು ತರಬೇಕಾದ ಸ್ಥಿತಿ ಎದುರಾಗುತ್ತದೆ. ಇದರಿಂದ ಮಹಿಳೆಯರು ಹಾಗೂ ಮಕ್ಕಳಿಗೆ ಹೆಚ್ಚು ತೊಂದರೆ ಉಂಟಾಗುತ್ತದೆ. ಆದ್ದ–ರಿಂದ ಗ್ರಾಮ ಪಂಚಾಯಿತಿ, ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು.

ಕೆಲವೆಡೆ ಬೋರ್‌ವೆಲ್‌ಗಳು ಕೆಟ್ಟು ಹೋಗಿರುವುದು, ನೀರಿನ ಟ್ಯಾಂಕ್‌ಗಳು ಸರಿಯಾಗಿ ನಿರ್ವಹಣೆ ಆಗದಿರುವುದು, ಪೈಪ್‌ಲೈನ್‌ಗಳಲ್ಲಿ ದೋಷಗಳು ಇರುವುದರಿಂದ ನೀರು ಸರಿಯಾಗಿ ಪೂರೈಕೆ ಆಗುವುದಿಲ್ಲ. ಇಂತಹ ಸಮಸ್ಯೆಗಳನ್ನು ಅಧಿಕಾರಿಗಳು ತಕ್ಷಣ ಪರಿಹರಿಸಬೇಕು. ಅಗತ್ಯವಿದ್ದಲ್ಲಿ ಹೊಸ ಬೋರ್‌ವೆಲ್‌ಗಳನ್ನು ತೋಡಿಸುವುದು, ಟ್ಯಾಂಕರ್ ಮೂಲಕ ನೀರು ಪೂರೈಸುವುದು ಮುಂತಾದ ಕ್ರಮಗಳನ್ನು ಕೈಗೊಳ್ಳಬೇಕು.

ಜನರ ಮೂಲಭೂತ ಅಗತ್ಯಗಳಲ್ಲಿ ಕುಡಿಯುವ ನೀರು ಅತ್ಯಂತ ಮುಖ್ಯವಾದದ್ದು. ಜನರಿಗೆ ಸಮಯಕ್ಕೆ ಸರಿಯಾಗಿ ಶುದ್ಧ ಕುಡಿಯುವ ನೀರು ದೊರೆಯುವಂತೆ ನೋಡಿಕೊಳ್ಳುವುದು ಸರ್ಕಾರ ಮತ್ತು ಅಧಿಕಾರಿಗಳ ಪ್ರಮುಖ ಜವಾಬ್ದಾರಿಯಾಗಿದೆ. ಬೇಸಿಗೆ ಕಾಲದಲ್ಲಿ ನೀರಿನ ಸಮಸ್ಯೆ ತೀವ್ರವಾಗುವ ಮೊದಲು ಅಧಿಕಾರಿಗಳು ಸೂಕ್ತ ಕ್ರಮಗಳನ್ನು ಕೈಗೊಂಡರೆ ಜನರ ಸಂಕಷ್ಟವನ್ನು ಬಹಳ ಮಟ್ಟಿಗೆ ತಗ್ಗಿಸಬಹುದು.

ಹೀಗಾಗಿ ಬೇಸಿಗೆ ತೀವ್ರವಾಗುತ್ತಿರುವ ಈ ಸಂದರ್ಭದಲ್ಲಿ ಅಧಿಕಾರಿಗಳು ಎಚ್ಚೆತ್ತುಕೊಂಡು ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಜನರಿಗೆ ಸಮರ್ಪಕವಾಗಿ ನೀರು ಪೂರೈಸುವಲ್ಲಿ ಮುಂದಾಗಬೇಕು. ಜನಪರ ಆಡಳಿತ ಎಂದರೆ ಜನರ ಮೂಲಭೂತ ಅಗತ್ಯಗಳನ್ನು ಪೂರೈಸುವುದೇ ಆಗಿದ್ದು, ಅದನ್ನು ಅಧಿಕಾರಿಗಳು ಮರೆಯಬಾರದು.

# ಪಂಚ ಗ್ಯಾರಂಟಿಯಿಂದ ಮಹಿಳಾ ಸಬಲೀಕರಣ: ಸಂಗ್ರಾಮಪ್ಪ ಪಾಟೀಲ್



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ರಾಜ್ಯ ಸರ್ಕಾರದ ಮಹತ್ವದ ಪಂಚ ಗ್ಯಾರಂಟಿ ಯೋಜನೆಗಳಿಂದ ಮಹಿಳಾ ಸಬಲೀಕರಣ ಸಾಧ್ಯವಾಗಿದೆ ಎಂದು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕ ಅಧ್ಯಕ್ಷ ಸಂಗ್ರಾಮಪ್ಪ ಪಾಟೀಲ್ ತಿಳಿಸಿದರು. ಗುರುವಾರ ತಾಲೂಕ ಪಂಚಾಯತ್ ಸಂಭಂಗಣದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ತಾಲೂಕ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ವತಿಯಿಂದ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಜಾಗೃತಿ ಕಾರ್ಯಕ್ರಮದ ಸಭೆ ಉದ್ದೇಶಿಸಿ ಮಾತನಾಡಿದರು. ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ಕೊಟ್ಟಿರುವ ಭರವಸೆಯಂತೆ ಪಂಚ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಇದರಿಂದ ಮಧ್ಯಮ ವರ್ಗದ ಬಡ ಕುಟಂಬದ ಮಹಿಳೆಯರಿಗೆ ಹೆಚ್ಚಿನ ಅನುಕುಲವಾಗುತ್ತಿದ್ದು, ಪಂಚಗ್ಯಾರೆಂಟಿ ಯೋಜನೆಗಳ ಸದುಪಯೋಗ ಪಡೆದು ಸಂತೋಷದ ಜೀವನ ನಡೆಸಬೇಕು ಎಂದರು. ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್ ಮಾತನಾಡಿ, ಮಹಿಳೆಯರು ಉತ್ತಮ ಸಮಾಜ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಗ್ರಾಮೀಣ ಭಾಗದ ಮಹಿಳೆಯರು ಕೀಳರಿಮೆ ಬೆಳೆಸಿಕೊಳ್ಳದೆ ಆತ್ಮವಿಶ್ವಾಸದಿಂದ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಸಂತೋಷ ಹತ್ತರಕಿ, ಯೋಜನಾಧಿಕಾರಿ ಜಗದೀಶ, ಪಂಚ ಗ್ಯಾರೆಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಮನೋಜಕುಮಾರ್ ಕೋಟೆಕರ್ ಸೇರಿದಂತೆ ಸಮಿತಿಯ ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ವಿದ್ಯುತ್ ಪೋಲಾಗದಂತೆ ತಡೆಯಲು ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಪ್ರತಿಯೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಹಗಲಲ್ಲೂ ವಿದ್ಯುತ್ ಕಂಬಗಳಲ್ಲಿ ದೀಪ ಉರಿಯುತ್ತಿದ್ದು, ಇದರಿಂದ ವಿದ್ಯುತ್ ಪೋಲಾಗುತ್ತದೆ. ಅಲ್ಲದೆ ಸೂಕ್ತ ವಿದ್ಯುತ್ ಪೂರೈಕೆಯಲ್ಲಿ ಸಮಸ್ಯೆ ಉಂಟು ಮಾಡಲಿದ್ದು, ಕೂಡಲೇ ಈ ವಿಚಾರವಾಗಿ ಕ್ರಮ ವಹಿಸಬೇಕು ಎಂದು ಕನ್ನಡ ಸೇನೆ ಕರ್ನಾಟಕ ವತಿಯಿಂದ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಪ್ರತಿಯೊಂದು ಗ್ರಾಮಗಳಲ್ಲಿ ಹಗಲಲ್ಲೂ ಕಂಬಗಳಿಗೆ ವಿದ್ಯುತ್ ದೀಪ ಉರಿಯುತ್ತಿದ್ದು, ಇದರಿಂದ ರೈತರಿಗೆ ವಿದ್ಯುತ್ ಸರಿಯಾಗಿ ದೊರೆಯದ ಕಾರಣ ಸಮಯಕ್ಕೆ ಬೆಳೆಗಳಿಗೆ ನೀರು ಉಣಿಸಲು ಆಗುತ್ತಿಲ್ಲ.

ಬೆಳೆಗಳು ಒಣಗಿ ಹೋಗುತ್ತಿದ್ದು, ಒಂದು ವಾರದಲ್ಲಿ ಹಗಲಲ್ಲಿ ಉರಿಯುತ್ತಿರುವ ವಿದ್ಯುತ್ ದೀಪಗಳು ಸಂಪೂರ್ಣವಾಗಿ ಬಂದ್ ಮಾಡಿಸಬೇಕು. ಇಲ್ಲದಿದ್ದರೆ ತಾಲ್ಲೂಕು ಪಂಚಾಯತ್ ಕಚೇರಿ ಎದುರುಗಡೆ ಪ್ರತಿಭಟನೆ ಮಾಡಲಾಗುವುದು ಎಂದು ಸಂಘಟನೆಯ ಪದಾಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಸಂಘಟನೆಯ ರಾಜ್ಯ ಉಪಾಧ್ಯಕ್ಷ ರವಿಸ್ವಾಮಿ ನಿರ್ಣಾ, ಬೀದರ್ ಜಿಲ್ಲಾಧ್ಯಕ್ಷ ಸುಭಾಷ ಕೆನಾಡೆ, ಜಿಲ್ಲಾ ಉಪಾಧ್ಯಕ್ಷ ಪ್ರಭುಶೆಟ್ಟಿ ಪಸರಗಿ, ಬೀದರ್ (ಉ) ತಾಲ್ಲೂಕಾಧ್ಯಕ್ಷ ರಾಜು ಮಂಗಲಪೇಟ್, ಬೀದರ್ (ದ) ತಾಲ್ಲೂಕಾಧ್ಯಕ್ಷ ನಾಗಶೆಟ್ಟಿ ಸಜ್ಜನಶೆಟ್ಟಿ, ನಗರಾಧ್ಯಕ್ಷ ಶಿವಕುಮಾರ್ ಎಂ., ಕಾರ್ಯದರ್ಶಿ ರಮೇಶ ಧೂಳ, ಜಿಲ್ಲಾ ಸಹ ಕಾರ್ಯದರ್ಶಿ ಆನಂದ ಸಿಕೆಂದ್ರಪೂರ, ಮುಖಂಡರಾದ ಡಾ.ಮಾರುತಿ ಎಸ್., ಅಡೆಪ್ಪ ಶೇರಿಕರ್, ಸೂರ್ಯಕಾಂತ ರಾಂಪೂರ ಸೇರಿದಂತೆ ಇತರರು ಇದ್ದರು.

# ಕುಮಾರಪರ್ವತ ಚಾರಣಕ್ಕೆ ಆನ್ ಲೈನ್ ಟಿಕೆಟ್: ಈಶ್ವರ ಖಂಡ್ರೆ



• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕುಕ್ಕೆ ಸುಬ್ರಹ್ಮಣ್ಯ ಬಳಿಯ ಕುಮಾರ ಪರ್ವತ ಚಾರಣಕ್ಕೆ ಆಗಮಿಸುವವರು ಕಡ್ಡಾಯವಾಗಿ ಆನ್ ಲೈನ್ ಮೂಲಕ ಮಾತ್ರ ಟಿಕೆಟ್ ಖರೀದಿಸಬೇಕಾಗುತ್ತದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ವಿಧಾನಸಭೆಗಿಂದು ತಿಳಿಸಿದ್ದಾರೆ.

ಸದಸ್ಯರಾದ ಭಾಗೀರಥಿ ಮುರುಳ್ಯ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಒಂದೇ ದಿನ 2–3 ಸಾವಿರ ಜನರು ಒಂದೇಕಡೆ ಸೇರಿದರೆ ಅನಾಹುತ ಆಗುತ್ತದೆ. ಹೀಗಾಗಿ ನಿಯಂತ್ರಣ ಕ್ರಮ ಕೈಗೊಂಡು ಪ್ರತಿನಿತ್ಯ 150 ಜನರಿಗೆ ಮಾತ್ರ ಚಾರಣಕ್ಕೆ ಅವಕಾಶ ನೀಡಲಾಗುತ್ತಿದೆ. ಮಳೆಗಾಲದಲ್ಲಿ ಜಾರುವ ಕಾರಣ, ಬೇಸಿಗೆಯಲ್ಲಿ ಕಾಡ್ಗಿಚ್ಚಿನ ಭೀತಿ ಎದುರಾಗುವ ಕಾರಣ ಚಾರಣ ಇರುವುದಿಲ್ಲ ಎಂದು ವಿವರಿಸಿದರು.

ಸುಬ್ರಹ್ಮಣ್ಯದಿಂದ ಕುಮಾರಪರ್ವತಕ್ಕೆ 24 ಕಿ.ಮೀ ಚಾರಣ ಪಥವಿದ್ದು, ಹೋಗಿ, ಮರಳಿ ಬರಲು 2 ದಿನ ಆಗುತ್ತಿತ್ತು, ರಾತ್ರಿ ಅಲ್ಲೇ ಉಳಿಯಬೇಕಿತ್ತು. ಅಲ್ಲಿ ವನ್ಯಜೀವಿಗಳ ಸಂಚಾರವೂ ಇರುವ ಕಾರಣ ಚಾರಣಿಗರ ಸುರಕ್ಷತೆಯ ದೃಷ್ಟಿಯಿಂದ 2024ರ ಜೂನ್ 5ರಂದು ಕೊಡಗು ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಮಾನವ–ವನ್ಯಜೀವಿ ಸಂಘರ್ಷ ಉಪಶಮನ ನಿಧಿ ಸಭೆಯಲ್ಲಿ ರಾತ್ರಿ ತಂಗಲು ನಿರ್ಬಂಧ ವಿಧಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಸುಬ್ರಹ್ಮಣ್ಯ ಮಾರ್ಗವಾಗಿ ಇರುವ ಶೇಷ ಪರ್ವತವು ಕುಮಾರಪರ್ವತದಿಂದ 2 ಕಿ.ಮೀ. ಅಂತದಲ್ಲಿದ್ದು, ಇದು ಅತ್ಯಂತ ದುರ್ಗಮವಾಗಿರುವ ಕಾರಣ 2025ರ ಡಿಸೆಂಬರ್ ನಿಂದ ಅದೇ ಚಾರಣ ಮಾರ್ಗದಲ್ಲಿ ಶೇಷಪರ್ವತಕ್ಕೆ 20 ಕಿ.ಮೀ. ಗೆ ಸೀಮಿತಗೊಳಿಸಿ 12 ಗಂಟೆಗಳ ಒಳಗಾಗಿ ಅಂದರೆ ಬೆಳಗ್ಗೆ 6ಕ್ಕೆ ಚಾರಣ ಆರಂಭಿಸಿ, ಸಂಜೆ 6ರೊಳಗೆ ಮರಳಿ ಬರುವಂತೆ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಚಾರಣ ಆರಂಭದ ಸಮಯವನ್ನು ಬೆಳಗ್ಗೆ 6ಗಂಟೆಗೆ ಬದಲಾಗಿ 5.30ಕ್ಕೆ ಆರಂಭಿಸಬೇಕೆಂಬ ಸದಸ್ಯರ ಸಲಹೆಯ ಬಗ್ಗೆ ಪರಿಶೀಲಿಸುವುದಾಗಿ ಈಶ್ವರ ಖಂಡ್ರೆ ತಿಳಿಸಿದರು.

# ಆಸ್ಪತ್ರೆಗಳಲ್ಲಿ ಔಷಧ ಕೊರತೆ ಸರಿಪಡಿಸಿ: ಪ್ರಭು ಚವ್ಹಾಣ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಉಂಟಾಗುತ್ತಿರುವ ಬಗ್ಗೆ ಬೆಂಗಳೂರಿನಲ್ಲಿ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲಿ ಔರಾದ(ಬಿ) ಕ್ಷೇತ್ರದ ಶಾಸಕ ಪ್ರಭು ಬಿ. ಚವ್ಹಾಣ ಅವರು ಸರ್ಕಾರದ ಗಮನ ಸೆಳೆದರು.

ಔರಾದ(ಬಿ) ವಿಧಾನಸಭಾ ಕ್ಷೇತ್ರವು ತೆಲಂಗಾಣ ಹಾಗೂ ಮಹಾರಾಷ್ಟ್ರ ರಾಜ್ಯಗಳ ಗಡಿಭಾಗದಲ್ಲಿರುವ ಗಡಿ ಕ್ಷೇತ್ರವಾಗಿದ್ದು, ಇಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧದ ಕೊರತೆ ಹೆಚ್ಚಾಗಿದೆ. ಬೇರೆ ಭಾಗಗಳಿಗೆ ಹೋಲಿಸಿದರೆ ನಮ್ಮಲ್ಲಿ ಸಮಸ್ಯೆ ಬಹಳಷ್ಟಿದ್ದು, ಇದರಿಂದ ಬಡ ರೋಗಿಗಳು ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದು ಸಮಸ್ಯೆಯ ಗಂಭೀರತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟರು.

ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಸೂಚಿಸುವ ಔಷಧ ಹೊರಗಿನಿಂದ ಖರೀದಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ಬಡ ರೋಗಿಗಳ ಮೇಲೆ ಆರ್ಥಿಕ ಭಾರ ಬೀಳುತ್ತಿದೆ. ಆದ್ದರಿಂದ ತಕ್ಷಣವೇ ಅಗತ್ಯ ಔಷಧಿಗಳ ಸಮರ್ಪಕ ಪೂರೈಕೆ ಮಾಡುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಆರೋಗ್ಯ ಸಚಿವರಾದ ದಿನೇಶ ಗುಂಡೂರಾವ ಅವರು, ಕೆಎ□□□ಂಎಸ್ಸಿಎಲ್ ಮೂಲಕ ಔಷಧ ಪೂರೈಕೆ ವ್ಯವಸ್ಥೆಯಲ್ಲಿ ಮಹತ್ವದ ಸುಧಾರಣೆ ತರಲಾಗಿದೆ. ರಾಜ್ಯಾದ್ಯಂತ ಸರ್ಕಾರಿ ಆಸ್ಪತ್ರೆಗಳಿಗೆ ಔಷಧ ಪೂರೈಸುವ ಕಾರ್ಯ ನಡೆಯುತ್ತಿದ್ದು, ಟೆಂಡರ್ ಆಗಿದೆ. ಖರೀದಿ ಆದೇಶಗಳಾಗಿವೆ. ಮುಂದಿನ ದಿನಗಳಲ್ಲಿ ಔಷಧ ಕೊರತೆ ಉಂಟಾಗದಂತೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.*ವಿದ್ಯಾರ್ಥಿಗಳ ಸಮಸ್ಯೆಯ ಬಗ್ಗೆ ಪ್ರಸ್ತಾಪ:* ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿವೇತನ,

ಶುಲ್ಕ ವಿನಾಯಿತಿ, ಪ್ರೋತ್ಸಾಹಧನ ವಿತರಣೆಯಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಶಾಸಕರು ಚುಕ್ಕೆ ಗುರುತಿಲ್ಲದ ಪ್ರಶ್ನೆಯ ಮೂಲಕ ಸರ್ಕಾರದ ಗಮನ ಸೆಳೆದರು.

# ಪಾರದರ್ಶಕ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜಿಲ್ಲೆಯಾದ್ಯಾಂತ ಮಾರ್ಚ್.18ರಿಂದ ಏಪ್ರಿಲ್.02 ರವರೆಗೆ ನಡೆಯುವ ಎಸ್.ಎಸ್.ಎಲ್.ಸಿ.ಪರೀಕ್ಷೆ–01ನ್ನು ಪಾರದರ್ಶಕವಾಗಿ ಹಾಗೂ ಅತ್ಯಂತ ವ್ಯವಸ್ಥಿತವಾಗಿ ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ–01ರ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಾ.18 ರಿಂದ ಏಪ್ರಿಲ್.2 ರವರೆಗೆ ಜಿಲ್ಲೆಯಲ್ಲಿ 577 ಪ್ರೌಢ ಶಾಲೆಗಳಿಂದ ಒಟ್ಟು 94 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಲಿದ್ದು, ಔರಾದ (13), ಬಸವಕಲ್ಯಾಣ (17), ಭಾಲ್ಕಿ (16), ಬೀದರ (28), ಹುಮನಾಬಾದ (20) ಕೇಂದ್ರಗಳಿಂದ ಸುಮಾರು 28439 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇದರಲ್ಲಿ 23529 ರೆಗ್ಯುಲರ, 1439 ಪ್ರೈವೇಟ್ ಫ್ರೆಶ್‌ರ್ಸ್, 3471 ರಿಪಿಟರ್ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದು, ಪರೀಕ್ಷೆಯಲ್ಲಿ ಯಾವುದೇ ಅಕ್ರಮಗಳು ನಡೆಯದಂತೆ ಅಗತ್ಯ ಕ್ರಮ ತೆಗೆದುಕೊಳ್ಳಬೇಕೆಂದು ಸೂಚನೆ ನೀಡಿದರು.



ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯದ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳು ಒದಗಿಸಬೇಕು. 94 ಪೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲು ಒಟ್ಟು 41 ಮಾರ್ಗಗಳನ್ನು ರಚಿಸಲಾಗಿದೆ. ಪರೀಕ್ಷೆಗಳನ್ನು ಸುಸೂತ್ರವಾಗಿ ನಡೆಸಲು 1364 ಪರೀಕ್ಷಾ ಕೋಠಡಿಗಳಿಗೆ 1364 ಸಿಸಿ ಕ್ಯಾಮರಗಳನ್ನು ಅಳವಡಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ವೆ□□ಕಾಸ್ಟಿಂಗ್ ಮಾಡಲು ಜಿಲ್ಲಾ ಪಂಚಾಯತದಲ್ಲಿ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಪೊಲೀಸ್ ಬಂದೋಬಸ್ತ ವ್ಯವಸ್ಥೆ ಒದಗಿಸಲಾಗಿದೆ ಎಂದರು.

ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಮುಖ್ಯ ಅಧೀಕ್ಷಕರು ಕೊಠಡಿ ಮೇಲ್ವಿಚಾರಕರೊಂದಿಗೆ ಮುಂಚಿತವಾಗಿ ಸಭೆ ನಡೆಸಿ ನಿಯಮಗಳಂತೆ ಪರೀಕ್ಷೆ ನಡೆಸಲು ಸೂಚಿಸಬೇಕು. ಸುಸೂತ್ರ ಪರೀಕ್ಷೆಗೆ ಪೊಲೀಸ್ ಇಲಾಖೆ, ಖಜಾಣೆ ಇಲಾಖೆ ಸಂಬಂಧಿಸಿದಂತೆ ಇಲಾಖೆಗಳ ಸಹಕಾರಕ್ಕೆ ಸೂಚಿಸಲಾಗಿದೆ. ಪರೀಕ್ಷಾ ಕೇಂದ್ರದ ಹೊರಗೆ ಜನಸಂದಣಿ ಮೇಲೆ ನಿಗಾ ಇಡಬೇಕು. ಯಾವುದೇ ರೀತಿಯ ದೂರುಗಳಿಗೆ ಪೊಲೀಸ್ ಕಂಟ್ರೋಲ್ ರೂಮಗೆ ತಿಳಿಸಬೇಕು. ಅಧಿಕಾರಿಗಳು ಜವಾಬ್ದಾರಿಯುತವಾಗಿ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಪರೀಕ್ಷಾ ಕೇಂದ್ರಗಳ ಸುತ್ತಲು 200 ಮೀಟರ ಪ್ರದೇಶ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ ಇರಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯಾದ್ಯಾಂತ ಮಾರ್ಚ್.22 ರಂದು 13 ಆದರ್ಶ ವಿದ್ಯಾಲಯಗಳಿಗೆ 6ನೇ ತರಗತಿ ಪ್ರವೇಶ ಪರೀಕ್ಷೆ ನಡೆಯುತ್ತಿದ್ದು, ಒಟ್ಟು 3348 ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆ ಬರೆಯುತ್ತಿದ್ದಾರೆ. ಇದಕ್ಕೂ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡು ಪಾರದರ್ಶಕವಾಗಿ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಕರಾಳೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಚಂದ್ರಕಾಂತ ಪೂಜಾರ, ಬೀದರ ಜಿಲ್ಲಾ ಖಜಾನಾಧಿಕಾರಿಗಳಾದ ರವಿ ಹಕಾರಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸುರೇಶ ಎಚ್.ಜಿ., ಡಯಟ್ ಪ್ರಾಂಶುಪಾಲರಾದ ಮಹಮ್ಮದ ಗುಲಶನ್, ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, 94 ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಕರು ಸೇರಿದಂತೆ ಮಾರ್ಗಾಧಿಕಾರಿಗಳು ಇನ್ನಿತರರು ಉಪಸ್ಥಿತರಿದ್ದರು

# ಅಸಕ್ತರಿಗೆ ಆಸರೆಯಾದ ಧರ್ಮಸ್ಥಳ ಸಂಸ್ಥೆ



ಮಲ್ಲಮ್ಮ ನುಡಿ ವಾರ್ತೆ ಸಿರುಗುಪ್ಪ

ನಗರದ ಸದಾಶಿವನಗರದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ ಟ್ರಸ್ಟ್ ವತಿಯಿಂದ ಜನಮಂಗಲ ಕಾರ್ಯಕ್ರಮದಡಿಯಲ್ಲಿ ಅಶಕ್ತರು/ವಿಶೇಷ ಚೇತನರಿಗೆ ಮಂಜೂರುಗೊಂಡ ವಾಟರ್ ಬೆಡ್‌ನ್ನು ಸದಾಶಿವನಗರದ ದುರುಗಮ್ಮನವರಿಗೆ ತಾಲೂಕಿನ ಕ್ಷೇತ್ರ ಯೋಜನಾಧಿಕಾರಿ ಸುಧೀರ್ ಹಂಗಳೂರು ರವರು ವಿತರಿಸಿದರು.

ನಂತರ ಮಾತನಾಡಿದ ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ರಾಜ್ಯಾದ್ಯಂತ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ ಅದರಲ್ಲೂ ವಿಶೇಷವಾಗಿ ಅಶಕ್ತರು/ವಿಶೇಷ ಚೇತನರಿಗೆ ಜಲಮಂಗಲ ಕಾರ್ಯಕ್ರಮದಡಿ ವೀಲ್ ಚೇರ್, ಕಮೋಡ್ ಚೇರ್, ಯು ಸೇಫ್ ವಾಕರ್, ತ್ರೀ ಲೆಗ್ ಸ್ಟಿಕ್, ಸಿಂಗಲ್ ಲೆಗ್ ಸ್ಟಿಕ್, ವಾಟರ್ ಬೆಡ್ ಸಲಕರಣೆಗಳನ್ನು ವಿತರಿಸಲಾಗುತ್ತಿದ್ದು, ತಾಲೂಕಿನಲ್ಲಿ ಈವರೆಗೆ 38 ಲಕ್ಷ ಮೌಲ್ಯದ ಸಲಕರಣೆಗಳನ್ನು ವಿತರಿಸಲಾಗಿದ್ದು ವಿಶೇಷ ಚೇತನರು ಗೌರವಯುತ ಜೀವನ ನಡೆಸಲು ಸಹಕಾರಿಯಾಗಿದೆ ಎಂದು ತಿಳಿಸಿದರು.

ಈ ಸಂದರ್ಭ ಗುಜರಿ ಯೂನುಸ್, ವಲಯ ಮೇಲ್ವಿಚಾರಕಿ ರೇಣುಕಾ, ಜ್ಞಾನವಿಕಾಸ ಸಮನ್ವಯಾಧಿಕಾರಿ ಪ್ರೀಯಾ, ಸೇವಾ ಪ್ರತಿನಿಧಿ ಅನಿತಾ, ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು

# ಮಡಿವಾಳ ಸಮುದಾಯದಿಂದ 16.ರಂದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಕರ್ನಾಟಕ ರಾಜ್ಯ ಮಡಿವಾಳರ ಕ್ಷೇಮಾಭಿವೃದ್ಧಿ ಸಂಘ ಉತ್ತರ ಕರ್ನಾಟಕ ಮಡಿವಾಳ ಸಂಘ ವತಿಯಿಂದ ಮಡಿವಾಳ ಸಮುದಾಯ ಪರಿಷತ್ತ ಜಾತಿಗೆ ಸೇರಿಸಬೇಕೆಂದು ಒತ್ತಾಯದ ಮೇರೆಗೆ 16.3.2026 ರಂದು ಬೆಳಿಗ್ಗೆ 8:00ಗೆ ಫ್ರೀಡಂ ಪಾರ್ಕ್ ಬೆಂಗಳೂರಿನಲ್ಲಿ ಪ್ರತಿಭಟನೆಗೆ ಹಮ್ಮಿಕೊಂಡಿರುವ ಇರುವುದರಿಂದ ತಾಲೂಕಿನ ಮಡಿವಾಳ ಸಮುದಾಯದ ಪೋಸ್ಟರ್ ಗಳನ್ನು ಬಿಡುಗಡೆಗೊಳಿಸಿ ಹಾಗೂ ಭಾಗವಹಿಸಬೇಕೆಂದು ತಾಲೂಕು ಮಡಿವಾಳ ಸಮುದಾಯದ ಅಧ್ಯಕ್ಷರಾದ ರವಿ ಚಿಲ್ಕುಂದ ತಿಳಿಸಿದ್ದಾರೆ

ನಗರದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕರೆಯಲಾಗಿದೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ರಾಜ್ಯದಲ್ಲಿ ಆಡಳಿತ ಮಾಡುತ್ತಿರುವ ಯಾವುದೇ ಸರ್ಕಾರಗಳು ನಮ್ಮನ್ನು ಪಕ್ಷತಿತವಾಗಿ ನಮ್ಮ ಮಡಿವಾಳ ಸಮುದಾಯಕ್ಕೆ ಮಡಿವಾಳ ಸಮುದಾಯವನ್ನು ಪರಿಶಿತ ಜಾತಿ ಪಟ್ಟಿಗೆ ಸೇರಿಸಿದ್ದಾರೆ ಹಾಗೆ ಕರ್ನಾಟಕದಲ್ಲೂ ಕೂಡ ನಮ್ಮನ್ನು ಆಪಟ್ಟಿಗೆ ನಮ್ಮನ್ನು ಸೇರಿಸಬೇಕೆಂದು ನಾವು ಸರ್ಕಾರಕ್ಕೆ ಒತ್ತಾಯಿಸುತ್ತಿದ್ದೇವೆ

ರಾಜ್ಯ ಕರ್ನಾಟಕ ರಾಜ್ಯದ ಮಡಿವಾಳರ ಕ್ಷೇಮಾಭಿವೃದ್ಧಿ ಸಂಘ ವು ಸರ್ಕಾರಕ್ಕೆ ಒತ್ತಡವನ್ನು ನೀಡಿದ್ದರಿಂದ ಅಂದಿನ ಮುಖ್ಯಮಂತ್ರಿಯಾದ ಯಡಿಯೂರಪ್ಪ ರಾಜ್ಯದ ಮಡಿವಾಳ ಜನಾಂಗದವರಿಗೆ ಕಷ್ಟಕಾರ್ಪಣ್ಯಗಳನ್ನು ಅಲಿಸಿ ಮಡಿವಾಳ್ ಜನಾಂಗದವರನ್ನು ಪರಿಷತ್ತ ಜಾತಿಗೆ ಸೇರಿಸಬೇಕೆ ಬೇಡವೇ ಎಂಬುದನ್ನು ಕುಲಶಾಸ್ತ್ರ ಅಧ್ಯಯನ ಅಧ್ಯಯನ ಮತ್ತು ಸಂಶೋಧನೆಯನ್ನು ಮಾಡಿ ವರದಿಯನ್ನು ನೀಡಲು ಮೈಸೂರಿನ ವಿಶ್ವವಿದ್ಯಾಲಯದ ಪ್ರೊಫೆಸರ್ ಡಾಕ್ಟರ್ ಅನುಪಮ ರವರನ್ನು ನೇಮಿಸಲಾಗಿತ್ತು 29ರಲ್ಲಿ ಕಳೆದ ಎರಡು ವರ್ಷಗಳ ಕಾಲ ಅಧ್ಯಯನ ನಡೆಸಿ ರಾಜ್ಯದ ಆಗಿನ ಸುಮಾರು 28 ಜಿಲ್ಲೆಗಳ



ಗುರುತಿಸುವುದರಲ್ಲಿ ನಮಗೆ ಸಂಪೂರ್ಣವಾಗಿ ವಿಫಲವಾಗಿದ್ದಾರೆ ಹಾಗೂನಮ್ಮನ್ನು ಮರೆತಿದ್ದಾರೆ ಆದ್ದರಿಂದ ನಾವು ಅವರನ್ನು ನೆನಪಿಸಿಕೊಳ್ಳಲು ಈ ಮಡಿವಾಳ ಸಮುದಾಯ ದವರನ್ನು ಪರಿಷ ತಿ ಜಾತಿಗೆ ಜ ಪಟ್ಟಿಗೆ ಸೇರಿಸಬೇಕೆಂದು ನಾವು ಪ್ರತಿಭಟನೆ ಮಾಡುವ ಮುಖಾಂತರ ಸರ್ಕಾರಕ್ಕೆ ನಾವು ಗಮನ ತರುತ್ತಿದ್ದೇವೆ ಎಂದರು

ಎಂಟು ರಾಜ್ಯಗಳು ಮೂರು ಕೇಂದ್ರಸ್ಥಾನಗಳಲ್ಲಿ ಖುದ್ದಾಗಿ ಭೇಟಿ ಮಾಡಿ ಜನಾಂಗದ ಮುಖಂಡರು ವೃತ್ತಿಯಲ್ಲಿ ತೊಡಗಿಕೊಂಡವರುಡವರು ಮಡಿ ಕಟ್ಟಗಳ ಕುಲಕಸಭಾವನ್ನು ಮಾಡುವವರು ಇತ್ಯಾದಿ ಅನೇಕರು ಭೇಟಿ ಮಾಡಿ ಈ ಕುಲಶಾಸ್ತ್ರ ಅಧ್ಯಯನವನ್ನು ಮಾಡಿ ವರದಿಯನ್ನು ನೀಡಿರುತ್ತಾರೆ ಈ ಸುದ್ದಿಗೋಷ್ಠಿಯಲ್ಲಿ ಪ್ರಧಾನ ಕಾರ್ಯದರ್ಶಿಯಾದ ರಘು ಖಜಾಂಚಿ ಗಣೇಶ್ ಗ್ರಾಮಾಂತರಧ್ಯಕ್ಷರಾದ ಶೇಖರ್ ಸಂಚಾಲಕರಾದ ಶಿವಾನಂದ್ ಭಾಗವಹಿಸಿದರು

# ಅನುದಾನ ಹಂಚಿಕೆ ತಾರತಮ್ಯಕ್ಕೆ ಹರೀಶ್ ಗೌಡ ಅಸಮಾಧಾನ

ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ಪ್ರಗತಿ ಕಾಲನಿ ಅಭಿವೃದ್ಧಿ ಯೋಜನೆಯಡಿ ಅನುದಾನ ನೀಡಿಕೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ತಾರತಮ್ಯ ನೀತಿ ಅನುಸರಿಸುತ್ತಿದೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ವಿಧಾನಸಭೆ ಅಧಿವೇಶನದಲ್ಲಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.ಬುಧವಾರ ಅಧಿವೇಶನದಲ್ಲಿ ಹರೀಶ್‌ಗೌಡ ಚುಕ್ಕಿ ಪ್ರಶ್ನೆಯಡಿ ಅನುದಾನದ ನೀಡುವಲ್ಲಿ ಇಲಾಖೆ ಹೇಗೆ ತಾರತಮ್ಯ ನೀತಿ ಅನುಸರಿಸುತ್ತಿದೆ ಎನ್ನುವುದನ್ನು ಎಳೆಎಳೆಯಾಗಿ ಸಭೆಯ ಮುಂದಿಟ್ಟರು.

ಈ ವೇಳೆ ಮಾತನಾಡಿದ ಅವರು, 2023-24ರಲ್ಲಿ ಪ್ರಗತಿ ಕಾಲನಿಯ ಯೋಜನೆಯಡಿ ತಾಲೂಕಿಗೆ ನಯಾಪೈಸೆಯನ್ನು ಇಲಾಖೆ ನೀಡಿಲ್ಲ. 2024-25ರಲ್ಲಿ ಒಂದು ಕೋಟಿ ರೂ.ಗಳ ಅನುದಾನ ನೀಡಿದ್ದು, ಅದರಲ್ಲಿ 33 ಲಕ್ಷ ರೂ.ಗಳು ಮಾತ್ರ ಬಿಡುಗಡೆಯಾಗಿದೆ. ಮೈಸೂರು ಜಿಲ್ಲೆಯ ಇನ್ನಿತರ ತಾಲೂಕುಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ಎನ್ನುವ ತಮ್ಮ ಪ್ರಶ್ನೆಗೆ ಸಚಿವರು ಉತ್ತರ ನೀಡಿಲ್ಲ. ಆದರೆ ಕಳೆದ ವಿಧಾನಸಭೆ ಅಧಿವೇಶನದಲ್ಲಿ (2025ರ ಆ.20) ನಾನು ಕೇಳಿದ್ದ ಚುಕ್ಕಿಯಿಲ್ಲದ ಪ್ರಶ್ನೆಗೆ ಉತ್ತರ ನೀಡಿದ್ದು ಅದರಂತೆ ಜಿಲ್ಲೆಗೆ ಪ್ರಗತಿ ಕಾಲನಿ ಯೋಜನೆಯಡಿ ಒಟ್ಟು 70 ಕೋಟಿ ರೂ.ಗಳ ಅನುದಾನ ನೀಡಲಾಗಿದೆ. ಈ ಪೈಕಿ ವರುಣಾ ವಿಧಾನಸಭೆ ಕ್ಷೇತ್ರಕ್ಕೆ 14.25 ಕೋಟಿ ರೂ.ಗಳು, ಪಿರಿಯಾಪಟ್ಟಣಕ್ಕೆ 9.65 ಕೋಟಿ ರೂ., ಕೆ.ಆರ್.ನಗರಕ್ಕೆ 7 ಕೋಟಿ ರೂ.ಗಳು, ಎಚ್.ಡಿ.ಕೋಟೆ 8.45 ಕೋಟಿ ರೂ.ಗಳು, ನಂಜನಗೂಡು 7 ಕೋಟಿ, ಚಾಮುಂಡೇಶ್ವರಿ 3.50 ಕೋಟಿ ರೂ., ಟಿ.ನರಸೀಪುರ 8.85 ಕೋಟಿ ರೂ.ಗಳು, ಚಾಮರಾಜ ಕ್ಷೇತ್ರ 5 ಕೋಟಿ, ನರಸಿಂಹರಾಜ ಕ್ಷೇತ್ರ 4 ಕೋಟಿ ರೂ.ಗಳ ಅನುದಾನ ನೀಡಲಾಗಿದೆ. ಆದರೆ, ಹುಣಸೂರು ಕ್ಷೇತ್ರಕ್ಕೆ ಕೇವಲ ಒಂದು ಕೋಟಿ ರೂ.ಗಳು ಹಾಗೂ ಕೃಷ್ಣರಾಜ ಕ್ಷೇತ್ರಕ್ಕೆ 1 ಕೋಟಿ ರೂ.ಗಳ ಅನುದಾನ ನೀಡಲಾಗಿದೆ. ಯಾವ ಮಾನದಂಡದಡಿ ಅನುದಾನ ವಿತರಿಸಿದ್ದೀರಿ ಎನ್ನುವುದರ ಕುರಿತು ಸಚಿವರು ಮಾಹಿತಿ ನೀಡಿಲ್ಲವೆಂದು ಬೇಸರಿಸಿದರು.

**ಹಳ್ಳಿಗೆ 15 ಸಾವಿರ ನೀಡಬೇಕಿದೆ;**

ಹುಣಸೂರು ತಾಲೂಕಿನಲ್ಲಿ ಶೇ.70ರಷ್ಟು ಪ.ಜಾತಿ, ಪ.ಪಂಗಡ, ಅಲ್ಪಸಂಖ್ಯಾತರು ಮತ್ತು ಹಿಂದುಳಿದವರು ಇರುವ ತಾಲೂಕು ಆಗಿದೆ. ಸರ್ಕಾರ ಇದೀಗ ನೀಡಿರುವ ಅನುದಾನ ಒಟ್ಟು ಜನಸಂಖ್ಯೆಯ ಶೇ.20ರಷ್ಟಿರುವ ಪ.ಜಾತಿ, ಶೇ.15ರಷ್ಟಿರುವ ಪರಿಶಿಷ್ಟಪಂಗಡದ ಜನರ ಕಾಲನಿಗಳಿಗೆ ಹಂಚಲು ಸಾಧ್ಯವೇ? 200ಕ್ಕೂ ಹೆಚ್ಚು ಹಳ್ಳಿಗಳನ್ನು ಹೊಂದಿರುವ ತಾಲೂಕಿಗೆ 1 ಕೋಟಿ ರೂ.ಹಂಚಿದರೆ 1ರಿಂದ 2ಮೀಟರ್ ಚರಂಡಿ ನಿರ್ಮಿಸಬಹುದಷ್ಟೆ. ರಾಜ್ಯ ಸರ್ಕಾರ ಅನುದಾನ ಹಂಚಿಕೆಯಲ್ಲಿ ತಾರತಮ್ಯ ನೀತಿ ಅನುಸರಿಸಿದಂತೆ ತೆ-ೂರುತ್ತಿದೆ. ಪರಿಶಿಷ್ಟಪಂಗಡಕ್ಕಂತೂ ಅನುದಾನವೇ ಇಲ್ಲ. ಜಿಲ್ಲೆಗೆ 70 ಕೋಟಿ ಹಂಚಿಕೆ ಮಾಡಿದ್ದು, ಹುಣಸೂರಿಗೆ ಕೇವಲ ಒಂದು ಕೋಟಿ ರೂ.ಹಂಚಿಕೆ ಆಗಿದೆ ಅಂದರೆ ಏನರ್ಥ ಎಂದು ಬೇಸರಿಸಿದರು.

ಸದಸ್ಯ ಕೃಷ್ಣಪ್ಪ ಮಧ್ಯೆ ಪ್ರವೇಶಿಸಿ, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸಿ ಬಂದಿರುವ ಮಹದೇವಪ್ಪನವರು ಈ ರೀತಿಯ ತಾರತಮ್ಯ ನೀತಿ ಅನುಸರಿಸುತ್ತಾರೆಯೇ ಎಂದರೆ ಏನಿದು ಎಂದು ಬೇಸರಿಸಿದರು.

**ತಾರತಮ್ಯ ನೀತಿ ಅನುಸರಿಸಿಲ್ಲ**

ಶಾಸಕ ಹರೀಶ್‌ಗೌಡರ ಪ್ರಶ್ನೆಗೆ ಉತ್ತರಿಸಿದ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಪ್ರಗತಿ ಕಾಲನಿ ಯೋಜನೆಯಡಿ ಹುಣಸೂರಿಗೆ ಒಂದು ಕೋಟಿ ರೂ. ನೀಡಲಾಗಿದ್ದು, ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಂ ಭವನ ನಿರ್ಮಾಣಕ್ಕೆ 270 ಲಕ್ಷ ರೂ.ಗಳ (9 ಕಾಮಗಾರಿಗಳು) ಅನುದಾನ ನೀಡಲಾಗಿದೆ. ಈ ಪೈಕಿ 7 ಕಾಮಗಾರಿಗಳು ಪ್ರಗತಿಯಲ್ಲಿದ್ದು, 2 ಕಾಮಗಾರಿ ಆರಂಭಿಸಬೇಕಿದೆ. ಅನುದಾನ ಹಂಚಿಕೆಯಲ್ಲಿ ಯಾವುದೇ ತಾರತಮ್ಯ ಮಾಡಿಲ್ಲ. ಈ ಹಿಂದೆ ತಾವು ಲೋಕೋಪಯೋಗಿ ಸಚಿವರಾಗಿದ್ದ ವೇಳೆಯೇ ನೂರಾರು ಕೋಟಿ ರೂ.ಗಳ ಅನುದಾನದಡಿ ತಾಲೂಕಿನಾದ್ಯಂತ ಪರಿಶಿಷ್ಟ ಜಾತಿ, ಜನಾಂಗಗಳ ಕಾಲನಿಯನ್ನು ಕಾಂಕ್ರೀಟೀಕರಣ ಮಾಡಲಾಗಿದೆ. ತಾರತಮ್ಯ ಮಾಡುವ ಉದ್ದೇಶವೂ ಇಲ್ಲ, ಮಾಡುವುದೂ ಇಲ್ಲ ಎಂದರು.

# ಕರ್ತವ್ಯ ಮಾಡದೆ ಲೋಪವೇಸಗಿರುವ ಬಜೆಟ್



ಮಲ್ಲಮ್ಮ ನುಡಿ ವಾರ್ತೆ ಹುಣಸೂರ

ರಾಜ್ಯದ ಮುಖ್ಯಮಂತ್ರಿ ಹಾಗು ಹಣಕಾಸು ಸಚಿವರೂ ಆಗಿರುವ ಸಿದ್ದರಾಮಯ್ಯ ರವರು ಈ ಸಾಲಿನಲ್ಲಿ ಮಂಡಿಸಿರುವ ಬಜೆಟ್ ಗಾತ್ರದಲ್ಲಿ ದೊಡ್ಡದಾಗಿದ್ದರೂ ಆದಿವಾಸಿಗಳ ಪಾಲಿಗೆ ನ್ಯಾಯ ನೀಡದ,ಹೈ ಆದೇಶ ಪಾಲಿಸಿ 3418 ಆದಿವಾಸಿ ಕುಟುಂಬಗಳಿಗೆ ಪುನರ್ವಸತಿ ನೀಡಿ ಸರ್ಕಾರ ತನ್ನ ಪಾಲಿನ ಕರ್ತವ್ಯ ಮಾಡದೆ ಲೋಪವೇಸಗಿರುವ ಬಜೆಟ್ ಇದಾಗಿದೆ ಎಂದು ಆದಿವಾಸಿ ಜನತಾ ಪಾರ್ಲಿಮೆಂಟ್ ಅಧ್ಯಕ್ಷ ಹರ್ಷ, ಬುಡಕಟ್ಟು

ಕೃಷಿಕರ ಸಂಘದ ಅಧ್ಯಕ್ಷ ಜಯಪ್ಪ, ಮಹಿಳಾ ಸಂಘದಅ-ಧ್ಯಕ್ಷರು ಲಕ್ಷ್ಮಿ, ಕಾನೂನು ಸೇವಾ ಪ್ರಾಧಿಕಾರದ ಮಾಜಿ ಸದಸ್ಯ, ವಿಠಲನಾಣಚ್ಚಿ,ಹಾಡಿ ಅರಣ್ಯ ಹಕ್ಕು ಸಮಿತಿಗಳ ಒಕ್ಕೂಟದ ಅಧ್ಯಕ್ಷ ತೆಕ್ಲ ಹಾಡಿ ಶಿವಣ್ಣ ಹಾಗು ಡೀಡ್ ಸಂಸ್ಥೆಯ ಡಾ. ಎಸ್ ಶ್ರೀಕಾಂತ್ ಬೇಸರವ್ಯಕ್ತ ಪಡಿಸಿದ್ದಾರೆ.

ಪ್ರತಿ ವರ್ಷ ಮುಖ್ಯಮಂತ್ರಿಗಳನ್ನು ವಿನಂತಿ ಮಾಡುತಿದ್ದರೂ,10ವರ್ಷ ಹಳೆಯಾದದ ಹೈಕೋರ್ಟ್ ಆದೇಶ ಪಾಲಿಸಿ 3418 ಆದಿವಾಸಿ ಕುಟುಂಬಗಳಿಗೆ ನ್ಯಾಯ ಕೊಡದಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಅವಮಾನ ಎಂದಿದ್ದಾರಲ್ಲದೆ ಬಜೆಟ್ ಕುರಿತು ಇನ್ನೂ ಚರ್ಚೆ ನಡೆತ್ತಿರುವದರಿಂದ ಈ ಕೂಡಲೇರೂ 600 ಕೋಟಿ ಬಜೆಟ್ ನಲ್ಲಿ ಸೇರಿಸಿ ಪುನರ್ವಸತಿ ಕೈಗೊಳ್ಳಲು ನಿರ್ಧರಿಸಿದರೆ ಸರ್ಕಾರದ ಮಾನ ಉಳಿಯುತ್ತದೆ ಎಂದಿದ್ದಾರೆ. ದೇವರಾಜ ಅರಸರ ಅಧಿಕಾರವಧಿಗಿಂತ ಹೆಚ್ಚು ಸಮಯ ಸಿಎಂ ಆದ ಹೆಗ್ಗಳಿಕೆ ಹೊಂದಿರುವ ಮುಖ್ಯ ಮಂತ್ರಿ ಸಿದ್ದರಾಮಯ್ಯ ರಿಗೆ ಇದು ಶೋಭೆ ಅಲ್ಲ ಎಂದಿರುವ ಇವರು, ಬಜೆಟ್ ನಲ್ಲಿ ಆದಿ ವಾಸಿಗಳ ಎಲ್ಲಾ ಬೇಡಿಕೆಗಕನ್ನು ಸೇರಿಸುವಂತೆ,ಮೊದಲೇ ವಿನಂತಿಸಿರುವ ಪ್ರಕಾರ ನಗರದಲ್ಲಿ ಒಂದು ಹಾಡಿ ನಿರ್ಮಾಣ, ಅರಣ್ಯ ಹಕ್ಕು ಮಾನ್ಯ ಮಾಡುವುದು,ಅರಣ್ಯ ಅಭಿವೃದ್ಧಿ ಪಡಿಸಲು 1500 ಹಾಡಿ ಅರಣ್ಯ ಹಕ್ಕು ಸಮಿತಿ ಗಳನ್ನು ಬಲವರ್ಧನೆ ಮಾಡಲು,ಪೆಸಾ1996 ಜಾರಿಗೆ ತಂದು ಆದಿವಾಸಿ ಪಂಚಾಯತಿ ರಚಿಸಲು ಆದಿವಾಸಿ ಪ್ರದೇಶ ಗಳನ್ನು ಅನುಸೂಚಿತ ಪ್ರದೇಶ ಎಂದು ಘೋಷಿಸಿ ಕ್ರಮ ಕೈಗೊಳ್ಳಲು, ಆದಿವಾಸಿ ಪ್ರದೇಶದ ಸರ್ಕಾರಿ ಶಾಲೆಗಳು ಹಾಗು ಆಶ್ರಮ ಶಾಲೆಗಳಲ್ಲಿ ಗುಣಮಟ್ಟ ಶಿಕ್ಷಣ ನೀಡಲು, ಕೆಲವು ಶಾಲೆಗಳನ್ನು ಮೇಲ್ದರ್ಜೆಗೆ ಏರಿಸಲು,ಆದಿವಾಸಿಗಳ ಹಾಗು ಹುಣಸೂರಿನ ಜೀವನದಿ ಯನ್ನು ಮಲಿನ ಮುಕ್ತಗೊಳಿಸಲು, ಹುಣಸೂರು ಉಪವಿಭಾಗವನ್ನು ಹೊಸ ಜಿಲ್ಲೆಯಾಗಿ ಘೋಶಿಸಿ ಅಭಿವೃದ್ಧಿ ಪಡಿಸಲು,ಆದಿವಾಸಿ ಅಭಿವೃದ್ಧಿ ಮಂಡಳಿ ರಚನೆ ಸೇರಿದಂತೆ ಬಜೆಟ್ ನಲ್ಲಿ ಹಣ ನಿಗದಿ ಪಡಿಸಿ ಕೂಡಲೇ ಮುಖ್ಯಮಂತ್ರಿಗಳು ಕ್ರಮ ವಹಿಸಬೇಕು ಎಂದು ಆಗ್ರಹಿಸಿದ್ದಾರೆ.ಆದಿವಾಸಿಅಭಿವೃದ್ಧಿ ನಿಗಮ ರಚಿಸಲು ಬಜೆಟ್ ನಲ್ಲಿ ಪ್ರಸ್ತಾಪ ವಿರುವುದು ಒಳ್ಳೆಯ ಬೆಳವಣಿಗೆ ಆದರೂ ಅದಕ್ಕೆ ಹಣ ನಿಗದಿ ಪಡಿಸದೇ ಇರುವುದು ಸರಿಯಲ್ಲ. ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಹಣ ನಿಗದಿ ಪಡಿಸಿರುವಂತೆ ಆದಿವಾಸಿ ಅಭಿವೃದ್ಧಿ ನಿಗಮಕ್ಕೂ ಬಜೆಟ್ ನಲ್ಲಿ ಹಣ ನಿಗದಿ ಪಡಿಸಬೇಕು ಎಂದು ಮಾಧ್ಯಮಗಳ ಮೂಲಕ ಮುಖ್ಯಮಂತ್ರಿ ಗಳನ್ನು ಆಗ್ರಹಿಸಲಾಗಿದೆ ಎಂದು ತಿಳಿಸಿದ್ದಾರೆ.

# ಕಂಪ್ಲಿಯಲ್ಲಿ ಸೋಮನಾಥ ಜ್ಯೋತಿರ್ಲಿಂಗ ದರ್ಶನ ಹಾಗೂ ಸಾಮೂಹಿಕ ರುದ್ರಪೂಜೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ / ಕಂಪ್ಲಿ



ಸುಮಾರು ಒಂದು ಸಾವಿರ ವರ್ಷಗಳಷ್ಟು ಪುರಾತನವಾದ ಸೋಮನಾಥ ಜ್ಯೋತಿರ್ಲಿಂಗದ ದರ್ಶನ ಮತ್ತು ಸಾಮೂಹಿಕ ರುದ್ರಪೂಜೆಯನ್ನು ಕಂಪ್ಲಿ ಪಟ್ಟಣದ ಶ್ರೀ ಪೇಟೆ ಬಸವೇಸ್ವರ ದೇವಸ್ಥಾನ ಮತ್ತು ಕುರುಗೋಡು ರಸ್ತೆಯಲ್ಲಿರುವ ಕಮ್ಮವಾರಿ ಸಮುದಾಯ ಭವನದಲ್ಲಿಂದು ಏರ್ಪಡಿಸಲಾಗಿತ್ತು. ರಾಜ್ಯದಲ್ಲಿ ಈಗಾಗಲೇ ಮೊದಲನೇ ಹಂತದ ಸೋಮನಾಥ ಜ್ಯೋತಿರ್ಲಿಂಗ ದರ್ಶನ ಮತ್ತು ಸಾಮೂಹಿಕ ರುದ್ರಪೂಜೆಯನ್ನು ಯಶಸ್ವಿಯಾಗಿ ನಡೆಸಿದ್ದು, ಎರಡನೇ ಹಂತದ ಸೋಮನಾಥ ಜ್ಯೋತಿರ್ಲಿಂಗ ದರ್ಶನ ಹಾಗೂ ಸಾಮೂಹಿಕ ರುದ್ರಪೂಜೆಯುವ ಯಾದಗಿರಿಯಿಂದ ಆರಂಭವಾಗಿದ್ದು, ಕಂಪ್ಲಿ ಪಟ್ಟಣಕ್ಕೆ ಆಗಮಿಸಿತು. ಪಟ್ಟಣಕ್ಕೆ ಆಗಮಿಸಿದ ಸೋಮನಾಥ ಜ್ಯೋತಿರ್ಲಿಂಗವನ್ನು ಪೇಟೆ ಬಸವೇಶ್ವರ ದೇವಸ್ಥಾನದ ಪದಾಧಿಕಾರಿಗಳು ಅದ್ದೂರಿಯಂದ ಸ್ವಾಗತಿಸಿ ಸಭಾಂಗಣದಲ್ಲಿ ವಿಶೇಷ ಪೂಜೆಯನ್ನು ಸಲ್ಲಿಸಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ನೀಡಲಾಯಿತು. ಪಟ್ಟಣದ ಭಕ್ತರು ಸಾಲಾಗಿ ಆಗಮಿಸಿ ಸೋಮನಾಥ ಜ್ಯೋತಿರ್ಲಿಂಗಕ್ಕೆ ಪೂಜೆಯನ್ನು ಸಲ್ಲಿಸಿ ಧರ್ಶನ ಭಾಗ್ಯವನ್ನು ಪಡೆದರು. ನಂತರ ಸಕಲ ಸದ್ಭಕ್ತರಿಗೆ ಪ್ರಸಾದವನ್ನು ವಿತರಿಸಿದರು. ನಂತರ ಸೋಮನಾಥ ಜ್ಯೋತಿಲಿಂಗವವನ್ನು ಮೆರವಣಿಗೆಯ ಮೂಲಕ ಕುರುಗೋಡು ರಸ್ತೆಯ ಕಮ್ಮವಾರಿ ಸಮುದಾಯ ಭವನಕ್ಕೆ ಬರಮಾಡಿಕೊಂಡು ಅಲ್ಲಿ ವಿಶೇಷ ವೇದಿಕೆಯಲ್ಲಿ ಬೆಂಗಳೂರು ಆರ್ಟ ಅಪ್ ಲಿವೀಂಗ್ ಆಶ್ರಮದ ಸಾಧ್ವಿ ಸ್ವಾಮಿ ಶರಣನಂದ ನೇತೃತ್ವದಲ್ಲಿ ಸೋಮನಾಥ ಜ್ಯೋತಿರ್ಲಿಂಗಗಳನ್ನು ಪ್ರತಿಷ್ಠಾಪಿಸಿ ವಿಶೇಷಪೂಜೆಯನ್ನು ಸಲ್ಲಿಸುವ ಜೊತೆಗೆ ಅನೇಕ ದಂಪತಿಗಳು ಸಾಮೂಹಿಕ ರುದ್ರಪೂಜೆಯನ್ನು ನೆರವೇರಿಸಿದರು. ನಂತರ ಸಂಕಲ್ಪಮಾಡಿದ ದಂಪತಿಗಳಿಗೆ ಸೋಮನಾಥ ಜ್ಯೋತಿರ್ಲಿಂಗದ ಪ್ರಸಾದವನ್ನು ವಿತರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಕೆಎಸ್‌ಎಸ್‌ವಿಬಿ ಅಧ್ಯಕ್ಷ ಸುಬ್ಬಾರಾವ್, ಬಿಎಸ್‌ವಿ ಸಂಸ್ಥೆಯ ಅಧ್ಯಕ್ಷ ಕಲ್ಗುಡಿ ವಿಶ್ವನಾಥ, ಮುಖಂಡರಾದ ಕೆ.ರವಿಚಂದ್ರ, ಎ.ತಾಂಡವ ಕೃಷ್ಣ, ಬಿ.ಜಡೇಶ, ಎ.ಜಮಾ ಮಹೇಶ್ವರಾವ್, ಎ.ಚಂದ್ರಶೇಖರ, ಶಿಕ್ಷಕರಾದ ಕೆ.ರಜನಿ, ಎ.ಸುನೀತಾ, ಮಹೇಶಬಾಬು ಹಾಗೂ ಪೇಟೆ ಬಸವೇಶ್ವರೆ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು ಹಾಗೂ ಕಮ್ಮವಾರಿ ಸಂಘದ ಪದಾಧಿಕಾರಿಗಳು, ವಿವಿಧ ಸಮಾಜಗಳ ಮುಖಂಡರು, ಮಹಿಳೆಯರು ಮತ್ತು ತಾಲೂಕಿನ ಸಲಕ ಸದ್ಭಕ್ತರು ಭಾಗವಹಿಸಿದ್ದರು.



**ಹುಣಸೂರು ತಾಲೂಕಿನ ಕಿರಿಜಾಜಿಗ್ರಾಮ ಕಸಬಾ ಹೋಬಳಿ ಸರ್ವೆ ನಂಬರ್ ೯೫.ರಲ್ಲಿ ಶ್ರೀರಂಗ ನಾಥ ಸ್ವಾಮಿ ದೇವಸ್ಥಾನ ಆವರಣ ಹಾಗೂ ದೇವಸ್ಥಾನದ ಮುಂದೆ ಕಾಲಿ ಜಾಗ ಗ್ರಾಮದ ಕೆಲವರು ಅಕ್ರಮವಾಗಿ ಕಬಳಿಸಿ ಯತ್ನಿಸಿದ್ದಾರೆ ಆ ಜಾಗವನ್ನು ಯಾರಿಗೂ ಒತ್ತುವರಿ ಆಗದೆ ನಮ್ಮ ಗ್ರಾಮದ ಅನುಕೂಲಕ್ಕೆ ಹಾಗೂ ಸರ್ಕಾರಿ ಜಾಗವನ್ನು ಯಾರೂ ಕೂಡ ಒತ್ತುವರಿ ಮಾಡದಂತೆ ಮತ್ತು ವಶಪಡಿಸಿಕೊಳ್ಳದಂತೆ ಸದರಿ ಜಗವನ್ನು ತಮ್ಮ ಕಚೇರಿಯ ಪ್ರಕಟಣೆ ಫಲಕವನ್ನು ಅಳವಡಿಸಬೇಕೆಂದು ಗ್ರಾಮದ ಮನವಿ ಪತ್ರ ನೀಡಿದರು**

# ಕಲಿಕೆ ಉತ್ತೇಜಿಸುವ ಕಾರ್ಯಕ್ರಮ : ತಾಂಡವ ಕೃಷ್ಣ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ / ಕಂಪ್ಲಿ

ತಾಲೂಕಿನ ಎಮ್ಮಿಗನೂರನ ಶ್ರೀ ವೆಂಕಯ್ಯ ಮೆಮೋರಿಯಲ್ ಶಾಲೆಯಲ್ಲಿ ನರ್ಸರಿ ತರಗತಿಯಿಂದ 2 ನೇತರಗತಿ ವಿದ್ಯಾರ್ಥಿಗಳ ವರ್ಷ ವಿಡೀ ಕಲಿಕೆಯ ಫಲಕಗಳ ಜ್ಞಾನದ ಪ್ರದರ್ಶನ ಕಾರ್ಯಕ್ರಮವನ್ನು ಬಹಳ ವಿಜೃಂಭಣೆಯಿಂದ ನಡೆಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜ್ಯೋತಿ ರವರು ಮಕ್ಕಳಲ್ಲಿ ಹಲವು ಪ್ರತಿಭೆಗಳು ಅಡಗಿಕೊಂಡಿದ್ದು,ಅವುಗಳನ್ನು ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಬೇಕು, ಪ್ರತಿಯೊಂದು ಮಗುವಿನಲ್ಲೂ ಇದೇ ರೀತಿ ಒಂದಲ್ಲ ಒಂದು ಪ್ರತಿಭೆ ಅಡಗಿರುತ್ತದೆ. 'ಬೆಳೆಯುವ ಸಿರಿ ಮೊಳಕೆಯಲ್ಲಿ' ಎಂಬ ಮಾತೇ ಇದೆಯಲ್ಲ. ಅದನ್ನು ಗುರುತಿಸಿ ಬೆಳೆಸುವ ಕೆಲಸವನ್ನು ಪೋಷಕರು ಅಥವಾ ಶಿಕ್ಷಕರು ಮಾಡಬೇಕಾಗುತ್ತದೆ ಎಂದರು.

ನಂತರ ಅಧ್ಯಕ್ಷತೆ ವಹಿಸಿದ ಶಾಲಾ ಸಂಸ್ಥಾಪಕ ಎ. ತಾಂಡವ ಕೃಷ್ಣ ಮಾತನಾಡಿ ಮಕ್ಕಳ ಭೌತಿಕ ಮಾನಸಿಕ ಜ್ಞಾನಾತ್ಮಕ ಮೌಲ್ಯಯುತ ಶಿಕ್ಷಣವನ್ನು ನಾವು ನೀಡುವುದರ ಮೂಲಕ ಮುಂದಿನ ಭವಿಷ್ಯದ ಉತ್ತಮ ಪ್ರಜೆಗಳನ್ನು ರೂಪಿಸಲು ಸಹಕರಿಸುತ್ತೇವೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಕಾರ್ಯಕ್ರಮ ಆಕರ್ಷಣೆಯಾಗಿತ್ತು. ಕಾರ್ಯದರ್ಶಿಗಳಾದ ಎ ಸುನಿತ, ಮುಖ್ಯಗುರುಗಳಾದ ಕೆ. ಎಚ್. ರಾಮು ಶಿಕ್ಷಕರಾದ ಬರ್ಮಾ, ವಿದ್ಯಾರ್ಥಿಗಳ ಪಾಲಕರಾದ ರಾಜಸಾಬ್. ಬಿ ಜಡಿ ಮೂರ್ತಿ, ವೀರೇಶ್, ಓರ್ವಾಯಿ. ಪಲ್ಲವಿ, ಶಾರದಾ, ನೀಲಮ್ಮ, ಲಕ್ಷ್ಮೀನಾರಾಯಣ, ವಿಜಯಲಕ್ಷ್ಮಿ, ಶಾಂಭವಿ, ಗೀತಾ, ಹಾಗೂ ರಾಯಮಣಿ ಎಲ್ಲಾ ಶಿಕ್ಷಕಿಯರು ಸೇರಿದಂತೆ ಪಾಲಕ- ಪೋಷಕರು ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕ ಭಾಗದ ಕನ್ನಡ ಮಾಧ್ಯಮ ಶಾಲೆಗಳ ಅನುದಾನಕ್ಕಾಗಿ ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಲ್ಯಾಣ ಕರ್ನಾಟಕದ ಎಲ್ಲಾ ಅನುದಾನ ರಹಿತ ಕನ್ನಡ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಬಂದ್ ಮಾಡಿ ಮತ್ತು ಅನುದಾನಕ್ಕಾಗಿ ಆಗ್ರಹಿಸಿ ಕಲ್ಯಾಣ ಕರ್ನಾಟಕ ಕನ್ನಡ ಮಾಧ್ಯಮ ಅನುದಾನರಹಿತ ಶಾಲೆಗಳ ಆಡಳಿತ ಮಂಡಳಿಗಳ ಒಕ್ಕೂಟದ ಸಂಘ (ರಿ) ದ ಪದಾಧಿಕಾರಿಗಳು ನಗರದ ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಇಂದು ಪ್ರತಿಭಟನೆ ನಡೆಸಿದರು.

ನಂತರ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬರೆದ ಸವಿವರವಾದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳ ಕೇಂದ್ರ ಸ್ಥಾನಿಕ ಅಧಿಕಾರಿಗೆ ಸಲ್ಲಿಸಿದರು. ಕಳೆದ 30 ವರ್ಷಗಳಿಂದ (1995 ರಿಂದ) ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ಸದರಿ ಕನ್ನಡ ಶಾಲೆಗಳನ್ನು ಉಳಿಸಿ ಬೆಳಸಿಕೊಂಡು ಬರಲಾಗುತ್ತಿದೆ. ಸದರಿ ಶಾಲೆಗಳಿಗೆ ಯಾವುದೇ ಸರ್ಕಾರಿ ಅನುದಾನ ಲಭ್ಯವಾಗಿಲ್ಲ ಎಂದು ಹೇಳಿರುವ ಅವರು, ಕಳೆದ ಒಂದು ವರ್ಷದಿಂದ ಶಿಕ್ಷಣ ಸಚಿವರು ಮತ್ತು ಮುಖ್ಯಮಂತ್ರಿಗಳು ಅನುದಾನ ನೀಡುವ ಭರವಸೆ ನೀಡಿದ್ದರು. ಆದರೆ ಇತ್ತೀಚಿನ ಬಜೆಟ್ ಘೋಷಣೆಯಲ್ಲಿ ಈ ಕುರಿತಂತೆ ಯಾವುದೇ ಅನುದಾನ ನೀಡುವ ಬಗ್ಗೆ ಪ್ರಸ್ತಾಪವಿಲ್ಲದಿರುವುದು ಸಂಕಷ್ಟಕ್ಕೆ ದೂಡಿದೆ ಎಂದು ಅವರು ಮನವಿ ಪತ್ರದಲ್ಲಿ ಹೇಳಿದ್ದಾರೆ.

1995ರ ಸಂತರದ ಎಲ್ಲಾ ಕಲ್ಯಾಣ ಕರ್ನಾಟಕದ ಕನ್ನಡ ಮಾಧ್ಯಮ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಅನುದಾನ ನೀಡಬೇಕು.ಪ್ರಥಮ ಭಾಷೆಯಾಗಿ ಕನ್ನಡವನ್ನು ಬೋಧಿಸುತ್ತಿರುವ ಕಲ್ಯಾಣ ಕರ್ನಾಟಕದ ಎಲ್ಲಾ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಮಹಾರಾಷ್ಟ್ರ ಮಾದರಿಯಲ್ಲಿ (50:50) ಅರ್ಧ ವೇತನವನ್ನು ನೀಡಬೇಕು.

ಕಲ್ಯಾಣ ಕರ್ನಾಟಕದ ಕನ್ನಡ ಮಾಧ್ಯಮ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನವೀಕರಣದ ನಿಯಮ ನಿಬಂಧನೆಗಳಲ್ಲಿ ಸಡಿಲಿಕೆ ಮಾಡಬೇಕು. ಕಲ್ಯಾಣ ಕರ್ನಾಟಕ ಕನ್ನಡ ಮಾಧ್ಯಮ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಖಇ ಮರು ಜಾರಿ ಮಾಡಬೇಕು ಹಾಗೂ ಸರಕಾರಿ ಶಾಲೆಗಳಿಗೆ ನೀಡುವ ಎಲ್ಲಾ ಸವಲತ್ತುಗಳನ್ನು ನೀಡಬೇಕು.ಪ್ರಥಮ ಭಾಷೆಯಾಗಿ ಕನ್ನಡವನ್ನು ಬೋಧಿಸುತ್ತಿರುವ ಕಲ್ಯಾಣ ಕರ್ನಾಟಕದ ಎಲ್ಲಾ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಮೂಲಭೂತ ಸೌಕರ್ಯಗಳಿಗಾಗಿ 371 ಜೆ ಅಡಿಯಲ್ಲಿ ಅನುದಾನವನ್ನು ನೀಡಬೇಕು. ಶಾಲಾ ಮಕ್ಕಳನ್ನು ಮಾತ್ರ ಕರೆತರುವುದಕ್ಕಾಗಿ ಹೊಸದಾಗಿ ಶೋ-ರೂಮ್ ನಿಂದ ಖರೀದಿಸಿದ ಶಾಲಾ ವಾಹನಗಳ ಯುಕ್ತತೆಯ, ಬಾಳಿಕೆ ಅವಧಿಯನ್ನು 15 ವರ್ಷದಿಂದ 30 ವರ್ಷಗಳಿಗೆ ಹೆಚ್ಚಿಸಬೇಕು. ರಾಷ್ಟ್ರೀಕೃತ ಬ್ಯಾಂಕ್‌ಗಳು ಸದರಿ ಅನುದಾನರಹಿತ ಶಾಲೆಗಳಿಗೆ ಕೊಲಾಟ್ರಲ್ ಸಕ್ಯೂರಿಟಿ ಕೇಳದೆ ಮೂಲ ಸೌಕರ್ಯಗಳಿಗಾಗಿ ಸಾಲ ಸೌಲಭ್ಯಗಳು ನೀಡುವಂತೆ ಕ್ರಮಗಳನ್ನು ತೆಗೆದುಕೊಳ್ಳಬೇಕು.

ಕರ್ನಾಟಕದಲ್ಲಿ ಶಿಕ್ಷಣವನ್ನು ನೀಡುವಲ್ಲಿ 50% ಗಿಂತಲೂ ಹೆಚ್ಚು ಮಕ್ಕಳು ಮಕ್ಕಳು ಖಾಸಗಿ ಶಾಲೆಗಳಲ್ಲಿ ಬೋಧನೆ ಪಡೆ-ಯುತ್ತಿದ್ದಾರೆ ಸದರಿ ಖಾಸಗಿ ಶಾಲೆಗಳ ನಿರ್ವಹಣೆಗೆ ಪ್ರತ್ಯೇಕ ಮಂಡಳಿ ರಚಿಸಬೇಕು.

# ಸಿಲಿಂಡರ್ ಸಾಕಷ್ಟು ಲಭ್ಯ: ಜಿಲ್ಲಾಧಿಕಾರಿ

- ಮಲ್ಲಮ್ಮ ನುಡಿ ವಾರ್ತೆ ಬೀದರ



ಜಿಲ್ಲೆಯಲ್ಲಿ ಗೃಹ ಬಳಕೆ ಅಡುಗೆ ಅನಿಲ ಸಿಲಿಂಡಗಳು ಸಾಕಷ್ಟು ಪ್ರಮಾಣದಲ್ಲಿ ಸದ್ಯ ದಾಸ್ತಾನು ಲಭ್ಯವಿರುವುದರಿಂದ ಗ್ರಾಹಕರ ಯಾರು ಗಾಬರಿಗೊಳ್ಳಬಾರದು ಹಾಗೂ ಹೆಚ್ಚುವರಿಯಾಗಿ ದಾಸ್ತಾನು ಮಾಡಿಕೊಳ್ಳಬಾರದೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿರುವ ವದಂತಿಗಳಿಗೆ ಸಾರ್ವಜನಿಕರು ಕಿವಿಗೂಡಬಾರದು. ಹೆಚ್ಚಿನ ಗ್ರಾಹಕರು ಮುಂಚಿತವಾಗಿ ಬುಕ್ಕಿಂಗ್ ಮಾಡುತ್ತಿರುವುದರಿಂದ ಐವಿಆಎಸ್/ಮಿಸಡ್ ಕಾಲ್ ಮಾಡುವ ವ್ಯವಸ್ಥೆಯಲ್ಲಿ ಹೆಚ್ಚಿನ ಸಂಚಾರ ದಟ್ಟನೆ ಉಂಟಾಗಿ ಸದರಿ ಸಿಸ್ಟಗಳು ಕಾರ್ಯನಿರ್ವಹಿಸುತ್ತಿಲ್ಲವಾದ್ದರಿಂದ ಪರ್ಯಾಯವಾಗಿ IOCL, HPCL&BPCL ಎಪಿಜಿ ತೈಲ ಕಂಪನಿಗಳ ವಾಆಪ್ ನಂಬರ್ ಮುಖಾಂತರ ಸಹ ಬುಕ್ಕಿಂಗ್ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ದಿನಾಂಕ.11-03-2026ರಂದು ಜಿಲ್ಲೆಯ ಗ್ಯಾಸ್ ಏಜೆನ್ಸಿದಾರರ ಮತ್ತು ಹೋಟೆಲ್ ಉದ್ಯಮಿದಾರರ ಸಭೆಯನ್ನು ನಡೆಸಲಾಯಿತು. ಸಭೆಯಲ್ಲಿ ವಾಣಿಜ್ಯ ಸಿಲಿಂಡಗಳ ಲಭ್ಯತೆಯ ಬಗ್ಗೆ ಚರ್ಚಿಸಲಾಗಿ ಹೋಟೆಗಳಲ್ಲಿ ಲಭ್ಯವಿರುವ ಸಿಲಿಂಡಗಳನ್ನು ಅಗತ್ಯತೆಯ ಪ್ರಮಾಣದಲ್ಲಿ ಬಳಸಲು ಮತ್ತು ಗ್ಯಾಸ್ ಏಜೆನ್ಸಿ ಬಳಿ ಸ್ಟಾಕ್ ಇರುವ ವಾಣಿಜ್ಯ ಸಿಲಿಂಡಗಳನ್ನು ಅವಶ್ಯಕತೆ ಅನುಗುಣವಾಗಿ ಹೋಟೆಲುಗಳಿಗೆ ಸರಬರಾಜು ಮಾಡಲು ಸೂಚಿಸಲಾಯಿತು. ಯಾರು ಅನಗತ್ಯವಾಗಿ ಹೆಚ್ಚಿನ ಸಿಲಿಂಡರನ್ನು ಸಂಗ್ರಹಣೆ ಮತ್ತು ಮಾರ್ಗಾಂತರ ಮಾಡಬಾರದೆಂದು ತಿಳಿಸಿ, ಅಂತಹ ಪ್ರಕರಣಗಳು ಕಂಡುಬಂದರೆ ಅಗತ್ಯ ವಸ್ತುಗಳ ಕಾಯ್ದೆ 1955 ರಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಲಾಯಿತು.

ಜಿಲ್ಲೆಯಲ್ಲಿ ಎಲ್.ಪಿ.ಜಿ ಸಿಲಿಂಡಗಳ ಕೊರತೆ ಇರುವುದಿಲ್ಲವಾದ್ದರಿಂದ ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ ಮತ್ತು ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ವದಂತಿಗಳಿಗೆ ಸಾರ್ವಜನಿಕರು ಕಿವಿಗೂಡಬಾರದೆಂದು ಅವರು ತಿಳಿಸಿದ್ದಾರೆ.

# ಸರ್ಕಾರಿ ಶಾಲೆಗಳ ಉಳಿವಿಗಾಗಿ ಎಐಡಿಎಸ್‌ಓ ನೇತೃತ್ವದಲ್ಲಿ ಪ್ರತಿಭಟನೆ




• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ರಾಜ್ಯ ಸರ್ಕಾರದ 'ಕೆಪಿಎಸ್ ಮ್ಯಾಗ್ನೆಟ್' ಯೋಜನೆ ವಿರೋಧಿಸಿ ಹಾಗೂ ಸ್ಥಳೀಯ ಸರ್ಕಾರಿ ಶಾಲೆಗಳನ್ನು ಉಳಿಸುವಂತೆ ಆಗ್ರಹಿಸಿ, ಮಂಗಳವಾರ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯ ನೇತೃತ್ವದಲ್ಲಿ ಸಮೀಪದ ನಗನೂರು ಗ್ರಾಮದ ಪೋಷಕರು ಮತ್ತು ಗ್ರಾಮಸ್ಥರ ಪ್ರತಿಭಟನೆ ನಡೆಸಿದರು.

ನಗನೂರು ಸರ್ಕಾರಿ ಉರ್ದು ಶಾಲೆ ಹಾಗೂ ಗುಡ್ಡದ ಗುರುಲಿಂಗೇಶ್ವರ ಬಡಾವಣೆಯ ಸರ್ಕಾರಿ ಶಾಲೆಗಳನ್ನು ಮುಚ್ಚುವ ಸರ್ಕಾರದ ನಡೆಯನ್ನು ವಿರೋಧಿಸಿ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಎಐಡಿಎಸ್‌ಓ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಲಕ್ಕಪ್ಪ, ಮಾತನಾಡಿ ಸರ್ಕಾರವು ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳನ್ನು ಪ್ರಾರಂಭಿಸುವ ನೆಪದಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಒಂದೇ ಶಾಲೆ ಉಳಿಸಿಕೊಂಡು, ರಾಜ್ಯಾದ್ಯಂತ ಸುಮಾರು 40,000 ಸರ್ಕಾರಿ ಶಾಲೆಗಳನ್ನು ಮುಚ್ಚಲು ಸಂಚು ರೂಪಿಸಿದೆ. ಇದು ಬಡ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಆಡುತ್ತಿರುವ ಚೆಲ್ಲಾಟವಾಗಿದೆ. ಹಲವು ಮಹನೀಯರ ಹೋರಾಟದ ಫಲವಾಗಿ ನಮಗೆ ಶಿಕ್ಷಣ ಸಿಕ್ಕಿದೆ. ಆದರೆ ಇಂದು ಶಿಕ್ಷಣವನ್ನು ಕೇವಲ ಕೆಲವರ ಸ್ವತ್ತನ್ನಾಗಿಸಲು ಸರ್ಕಾರ ಮುಂದಾಗಿದೆ. ಒಂದೆಡೆ ಶಾಲೆ ಮುಚ್ಚುವುದಿಲ್ಲ ಎನ್ನುವ ಶಿಕ್ಷಣ ಸಚಿವರು, ಇನ್ನೊಂದೆಡೆ ಇಲಾಖೆಯ ಮೂಲಕ ಶಾಲೆಗಳನ್ನು ವಿಲೀನಗೊಳಿಸುವ ಆದೇಶ ಹೊರಡಿಸುತ್ತಿದ್ದಾರೆ.

> **ದೂರದೂರಿಗೆ ಮಕ್ಕಳನ್ನು ಕಳಿಸೋದು ಹೇಗೆ?**
>
> "ನಾವು ದಿನವಿಡೀ ಕೂಲಿ ಮಾಡಿ ಬದುಕು ಸಾಗಿಸುವವರು. ನಮ್ಮ ಮಕ್ಕಳು ಗ್ರಾಮದ ಶಾಲೆಗೆ ಹೋಗಿ ಬರುವುದು ನಮಗೆ ಧೈರ್ಯ ನೀಡುತ್ತದೆ. ಈಗ ಶಾಲೆಗಳನ್ನು ವಿಲೀನಗೊಳಿಸಿ ಮಕ್ಕಳನ್ನು ದೂರದ ಊರುಗಳಿಗೆ ಕಳುಹಿಸಿ ಎಂದರೆ ನಮಗೆ ಸಾಧ್ಯವಿಲ್ಲ. ಬಡವರ ಮಕ್ಕಳ ಶಿಕ್ಷಣಕ್ಕೆ ಅಡ್ಡಿ ಮಾಡಬೇಡಿ, ನಮ್ಮೂರಿನ ಸರ್ಕಾರಿ ಶಾಲೆ ನಮ್ಮೂರಿನಲ್ಲೇ ಇರಲಿ, ಪೋಷಕರ ಒತ್ತಾಯ

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಬಳಕೆಯಾಗಬೇಕಾದ ಕೆಕೆಆರ್‌ಡಿಬಿ (ಎಎಖಆಃ) ನಿಧಿಯನ್ನು ಆಸ್ಪತ್ರೆ, ಉದ್ಯೋಗ ಸೃಷ್ಟಿಯ ಬದಲು ಶಾಲೆಗಳನ್ನು ಮುಚ್ಚುವ ಯೋಜನೆಗೆ ಬಳಸುತ್ತಿರುವುದು ಅತ್ಯಂತ ಖಂಡನೀಯ ಎಂದು ಕಿಡಿಕಾರಿದರು.

ಈ ಸಂದರ್ಭದಲ್ಲಿ ಭಾಶಾ ಸಾಬ್, ಹಸನ್ ಸಾಬ್, ಅಬ್ದುಲ್ ರಹೀಮ್ ಸಾಬ್, ರಹೀಮ್ ಸಾಬ್, ತಿರುಪತಿ, ಹೊನ್ನಪ್ಪ, ಹಣಮಂತರಾಯ, ಸಿದ್ದಣ್ಣ ಹಳ್ಳಿ, ಮಾಲಮ್ಮ, ಶಿವರಾಜ್ ಹೆಳವರ್, ಸಿದ್ದಣ್ಣ, ಗುರುನಾಥ, ದೇವಿಂದ್ರ, ಭಾಗ್ಯಮ್ಮ ಸೇರಿದಂತೆ ನೂರಾರು ಪೋಷಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಬೌದ್ಧ ಧರ್ಮದ ಕುರುಹುಗಳ, ದೇವಾಲಯಗಳ ರಕ್ಷಣೆಗೆ ಖರ್ಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಬೌದ್ಧ ಧರ್ಮದ ಕುರುಹುಗಳ, ದೇವಾಲಯಗಳ ರಕ್ಷಣೆಗೆ ಉತ್ಖನನ ನಡೆಸುವಂತೆ ರಾಜ್ಯಸಭೆ ವಿರೋಧಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಸಂಸತ್ತಿನಲ್ಲಿ ಆಗ್ರಹ.

ಕಲಬುರಗಿ ಜಿಲ್ಲೆಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸರ್ವೆ ಹಾಗೂ ಉತ್ಖನನ ನಡೆಸಿ ಬೌದ್ಧ ಧರ್ಮ ದೇವಾಲಯಗಳ ಮತ್ತು ಕುರುಹುಗಳನ್ನು ರಕ್ಷಣೆ ಮಾಡುವಂತೆ ರಾಜ್ಯ ಸಭೆ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ಸಂಸತ್ತಿನ ಅಧಿವೇಶನದಲ್ಲಿ ಭಾಗವಹಿಸಿದ್ದ ಅವರು ಕೃಷ್ಣಾ ಹಾಗೂ ಭೀಮಾ ನದಿ ತೀರದಲ್ಲಿ ಅದರಲ್ಲೂ ವಿಶೇಷವಾಗಿ ಕಲಬುರಗಿ ಜಿಲ್ಲೆಯಲ್ಲಿ ಬೌದ್ಧ ಧರ್ಮದ ಕುರುಹುಗಳು ಇವು. ಸರ್ಕಾರ ಉತ್ಖನನ ನಡೆಸಿ ಅವುಗಳನ್ನು ರಕ್ಷಿಸುವಂತೆ ಈಗಾಗಲೇ ಮೂರು ನಾಲ್ಕು ಬಾರಿ ಪತ್ರ ಬರೆದಿದ್ದೇನೆ. ಆದರೂ ರಕ್ಷಿಸುವ ಕೆಲಸವಾಗಿಲ್ಲ ಎಂದು ರಾಜ್ಯಸಭೆ ಅಧ್ಯಕ್ಷರಾದ ಸಿ.ಪಿ.ರಾಧಾಕೃಷ್ಣನ್ ಅವರ ಗಮನಕ್ಕೆ ತಂದರು.

ಅಮರಾವತಿ ರಾಜನಿಂದ ಆನಂತರ ನಾಗಾರ್ಜುನ ಆಚಾರ್ಯರವರೆಗೆ ಕಲಬುರಗಿ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಬೌದ್ಧ ಧರ್ಮ ವಿಸ್ತಾರಗೊಂಡ ಇತಿಹಾಸವನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸಿದ ಖರ್ಗೆ ಅವರು ಬೌದ್ಧ ಧರ್ಮದ ಕುರುಹುಗಳನ್ನು ಪತ್ತೆ ಹಚ್ಚುವ ಸಲುವಾಗಿ ಹಾಗೂ ಬೌದ್ಧ ಧರ್ಮದ ದೇಗುಲ ರಕ್ಷಿಸುವ ಸಲುವಾಗಿ ಉತ್ಖನನದ ಅಗತ್ಯತೆಯನ್ನು ಒತ್ತಿ ಹೇಳಿ, ಕೂಡಲೇ ಕೇಂದ್ರ ಸರ್ಕಾರ ಸಚಿವರು ಅಗತ್ಯ ಕ್ರಮವಹಿಸುವಂತೆ ಅವರು ಕೋರಿದರು.

# ಮಾನವ ವನ್ಯಜೀವಿ ನಿಯಂತ್ರಣಕ್ಕೆ ಪ್ರಥಮ ಆದ್ಯತೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಆನೆಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿರುವುದರ ಜೊತೆಗೆ ಎಕ್ಸ್‌ಪ್ರೆಸ್ ಹೆದ್ದಾರಿ ಮೊದಲಾದ ಮೂಲಭೂತ ಕಾಮಗಾರಿಗೆ ಗಜಪಥ ಛಿದ್ರವಾಗಿ ಆನೆ ಹಾವಳಿಯೂ ಹೆಚ್ಚಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ವಿಧಾನಸಭೆಗಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಪಿ.ಎಂ. ನರೇಂದ್ರ ಸ್ವಾಮಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಆನೆ–ಮಾನವ ಸಂಘರ್ಷ ತಡೆಗಟ್ಟಲು ಸಾಕಷ್ಟು ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ವರ್ಷ 116 ಕಿ.ಮೀ. ರೈಲು ಹಳಿ ತಡೆಗೋಡೆ (ರೈಲ್ವೆ ಬ್ಯಾರಿಕೇಡ್) ಮಂಜೂರು ಮಾಡಿದ್ದು, 201 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿಗಳು ನಡೆಯುತ್ತಿದ್ದು, ವಿವಿಧ ಹಂತದಲ್ಲಿ ಪ್ರಗತಿಯಲ್ಲಿವೆ ಎಂದೂ ತಿಳಿಸಿದರು.

ಮಳವಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಐದೂವರೆ ಕಿ.ಮೀ. ರೈಲು ಹಳಿ ತಡೆಗೋಡೆಗೆ ಮಂಜೂರಾತಿ ನೀಡಲಾಗಿದ್ದು, 9 ಕೋಟಿ 38 ಲಕ್ಷ ರೂ. ವೆಚ್ಚದಲ್ಲಿ ಕಾಮಗಾರಿ ಆರಂಭವಾಗುತ್ತಿದೆ. ಇದರ ಜೊತೆಯಲ್ಲಿ ಟೆಂಟಕಲ್ ಫೆನ್ಸಿಂಗ್, ಕಂದಕ ನಿರ್ಮಾಣ ಮಾಡುತ್ತಿದ್ದೇವೆ. ಆನೆಗಳು ನಾಡಿನತ್ತ ಬಂದಾಗ ಮರಳಿ ಕಾಡಿಗೆ ಅಟ್ಟಲು ಆನೆ ಕಾರ್ಯಪಡೆ ಮಾಡಿದ್ದೇವೆ. ಚಿರತೆ ಕಾರ್ಯಪಡೆ ರಚಿಸಿದ್ದೇವೆ. ಡ್ರೋನ್ ಕ್ಯಾಮರಾ ಬಳಸಿಕೊಂಡು ವನ್ಯಜೀವಿಗಳ ಸಂಚಾರದ ಬಗ್ಗೆ ನಿಗಾ ಇಡುತ್ತಿದ್ದೇವೆ. ಹೆಚ್ಚಿನ ರೈಲು ಹಳಿ ತಡೆಗೋಡೆಗೆ ಬೇಡಿಕೆ ಬಂದರೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಉಪ ವಲಯ ಅರಣ್ಯಾಧಿಕಾರಿಗಳ ನೇಮಕಕ್ಕೂ ಕ್ರಮ ಕೈಗೊಳ್ಳಲಾಗುವುದು ಎಂದರು.

ಮಳವಳ್ಳಿಗೆ ಚಿರತೆ ಕಾರ್ಯಪಡೆ ಮತ್ತು ವಾಹನದ ಅವಶ್ಯಕತೆಯನ್ನು ಪೂರೈಸಲು ಸರ್ಕಾರ ಬದ್ಧವಾಗಿದ್ದು, ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ ಸರ್ಕಾರ ಪ್ರಥಮ ಆದ್ಯತೆ ನೀಡಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

# ಅಭಿವೃದ್ಧಿಯಲ್ಲಿ ಏನೂ ಕೂಡ ಬೆಳವಣಿಗೆ ಆಗಿಲ್ಲ: ವಿಜಯೇಂದ್ರ

ಬೆಂಗಳೂರು: ಈ ಸರಕಾರದ ಬೆಳವಣಿಗೆ, ಸಾಲ ಮಾಡುವುದರಲ್ಲಿ ಸಾಧನೆ ಆಗಿದೆಯೇ ವಿನಾ ರಾಜ್ಯದ ಸರ್ವತೋಮುಖ ಅಭಿವೃದ್ಧಿ ವಿಚಾರದಲ್ಲಿ ಏನೂ ಕೂಡ ಬೆಳವಣಿಗೆ ಆಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಗಮನ ಸೆಳೆದಿದ್ದಾರೆ.

ವಿಧಾನಸಭೆಯಲ್ಲಿ ಇಂದು 2026–27ನೇ ಸಾಲಿನ ರಾಜ್ಯ ಬಜೆಟ್ ಸಂಬಂಧ ಮಾತನಾಡಿದ ಅವರು, ಜಲ ಸಂಪನ್ಮೂಲ ಇಲಾಖೆಯಲ್ಲಿ 2025–26ರಲ್ಲಿ 22,190 ಕೋಟಿ ಮೀಸಲಿಟ್ಟಿದ್ದರು. 2026–27ರಲ್ಲಿ 22,430 ಕೋಟಿ ರೂ. ಕೊಟ್ಟಿದ್ದಾರೆ. ಇದು ಹೆಸರಿಗೆ ಅಷ್ಟೇ ಎಂದು ತಿಳಿಸಿದರು. ಇದರಲ್ಲಿ 8500 ಕೋಟಿ ಸಂಬಳಕ್ಕೇ ಹೋದರೆ, ಬಡ್ಡಿ ಪಾವತಿಗೆ 4400 ಕೋಟಿ ಹೋಗುತ್ತದೆ. 9290 ಕೋಟಿಯಷ್ಟೇ ಕಾಮಗಾರಿಗೆ ಬಂಡವಾಳ ಹೂಡಿಕೆಯಾಗಿ ಉಳಿಯುತ್ತದೆ ಎಂದು ಗಮನಕ್ಕೆ ತಂದರು.

ಬಿಜೆಪಿ ಸರಕಾರ ಆರಂಭಿಸಿ ಶೇ 70– ಶೇ 80 ರಷ್ಟು ಮುಕ್ತಾಯವಾದ ಕಾಮಗಾರಿಗಳನ್ನು ಪೂರೈಸಲು ಸುಮಾರು 90 ಸಾವಿರ ಕೋಟಿ ರೂ. ಬೇಕು. 90 ಸಾವಿರ ಕೋಟಿ ರೂ. ಬಿಡುಗಡೆಗೆ ವಿಳಂಬವಾದರೆ ಅದು 1 ಲಕ್ಷದ 25 ಸಾವಿರ ಕೋಟಿಗೆ ತಲುಪೀತು. ಆದರೆ, ಇವರ ಬಂಡವಾಳ ಮೀಸಲು ಕೇವಲ 9,290 ಕೋಟಿಯಷ್ಟೇ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

2022–23ರಲ್ಲಿ ರಾಜಸ್ವ ವೆಚ್ಚವು 2,15,584 ಕೋಟಿ ಇತ್ತು. 2026–27ರಲ್ಲಿ 3,38,007 ಕೋಟಿ ಇದೆ. ರಾಜ್ಯ ಸರಕಾರ ಮಾಡುವ ಸಾಲವನ್ನು ಅಭಿವೃದ್ಧಿಯ ದೃಷ್ಟಿಯಿಂದ ಸಮಂಜಸವಾಗಿ ಬಳಸಿಕೊಳ್ಳದೇ ಖರ್ಚು ಮಾಡುತ್ತಿದ್ದಾರೆ. ಶಾಸಕರು ಸುಮಾರು 139 ಜನರು ಆಡಳಿತ ಪಕ್ಷದಲ್ಲಿದ್ದರೂ ಇರುವ ಎಲ್ಲರೂ ಕ್ಯಾಬಿನೆಟ್ ರ್ಯಾಂಕಿನವರೇ ಎಂದು ತಿಳಿಸಿದರು. ಅದೂ ಸಾಲದೆಂಬಂತೆ ರಾಜ್ಯದ ಗ್ಯಾರಂಟಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಗ್ಯಾರಂಟಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅವರಿಗೆ ಕ್ಯಾಬಿನೆಟ್ ದರ್ಜೆ ನೀಡಿದ್ದಾರೆ. ಅವರಿಗೆ ಕಚೇರಿ, ಸಂಬಳ, ಪಿ.ಎ– ಒಟ್ಟಾರೆಯಾಗಿ 144 ಜನರಿಗೆ ಕ್ಯಾಬಿನೆಟ್ ದರ್ಜೆ ಕೊಟ್ಟಿದ್ದಾರೆ. ಪ್ರತಿ ತಿಂಗಳು 3 ರಿಂದ 3.5 ಲಕ್ಷ ಖರ್ಚು ಮಾಡುತ್ತಾರೆ ಎಂದು ತಿಳಿಸಿದರು.

# ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ 2026ರ ಮಾರ್ಚ್ 9ರಂದು ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ ಠಾಣಗುಂದಿ ಗ್ರಾಮದಲ್ಲಿರುವ ಡಾನ್ ಬೋಸ್ಕೋ ಸಮುದಾಯ ಭವನದಲ್ಲಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಈ ಕಾರ್ಯಕ್ರಮವನ್ನು ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರ ಯಾದಗಿರಿ ವತಿಯಿಂದ ಜೀವನೋಪಾಯ ಯೋಜನೆ ಹಾಗೂ ಮೈಂಡ್ಸ್ ಯೋಜನೆಯ ಸಹಯೋಗದಲ್ಲಿ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಅಬ್ಬೆತುಮಕುರ ಮತ್ತು ಪ್ರಾಣಗುಂಡಿ ಗ್ರಾಮಗಳ ಮಾನಸಿಕ ಆರೋಗ್ಯ ಮೈಂಡ್ಸ್ ಗುಂಪಿನ ಒಟ್ಟು 42 ಮಹಿಳೆಯರು ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನ ಪಡೆದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಡಾನ್ ಬೋಸ್ಕೋ ಸಂಸ್ಥೆಯ ನಿರ್ದೇಶಕರಾದ ಫಾದರ್ ಶಾಬು ಫ್ರಾನ್ಸಿಸ್ ಮಾತನಾಡಿ, ಈ ವರ್ಷದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದೇಶವನ್ನು ತಿಳಿಸುತ್ತಾ ಮಹಿಳೆಯರು ಪರಸ್ಪರ ಕೊಟ್ಟು ಪಡೆದುಕೊಳ್ಳುವ ಸಹಕಾರದಿಂದ ಮುಂದುವರಿಯಬೇಕು ಎಂದು ಹೇಳಿದರು. ಮಹಿಳೆಯರಲ್ಲಿ ಮಾನಸಿಕ ಆರೋಗ್ಯದ ಕುರಿತು ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದ್ದು, ಸರ್ಕಾರದಿಂದ ಮಹಿಳೆಯರಿಗಾಗಿ ಜಾರಿಗೆ ತಂದಿರುವ ವಿವಿಧ 18 ಯೋಜನೆಗಳ ಕುರಿತು ಮಾಹಿತಿ ನೀಡಿದರು. ಅವುಗಳನ್ನು ಸದುಪಯೋಗಪಡಿಸಿಕೊಂಡು ಅಭಿವೃದ್ಧಿಯತ್ತ ಸಾಗಬೇಕು ಎಂದು ಸಲಹೆ ನೀಡಿದರು.

ಠಾಣಗುಂದಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಶ್ರೀ ಶರಣಪ್ಪ ಅವರು ಮಾತನಾಡಿ, ಮಹಿಳೆಯರು ತಮ್ಮ ಹಕ್ಕುಗಳು ಹಾಗೂ ಸರ್ಕಾರ ನೀಡಿರುವ ಮೀಸಲಾತಿಗಳನ್ನು ಬಳಸಿಕೊಂಡು ಸ್ವಂತ ಉದ್ಯೋಗವನ್ನು ಪ್ರಾರಂಭಿಸಿ ಆರ್ಥಿಕವಾಗಿ ಸಬಲರಾಗಬೇಕು ಎಂದು ಹೇಳಿದರು. ಕುಟುಂಬದಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳಿಬ್ಬರಿಗೂ ಸಮಾನವಾಗಿ ಕೆಲಸದ ಹೊಣೆಗಾರಿಕೆ ನೀಡಬೇಕು; ಹೆಣ್ಣು ಮಕ್ಕಳಿಗೆ ಮಾತ್ರ ಕೆಲಸ ನೀಡುವುದು ತಾರತಮ್ಯವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಜೀವನೋಪಾಯ ಯೋಜನೆಯ ಸಂಯೋಜಕರಾದ ದೇವೇಂದ್ರಪ್ಪ ತೆಲುಗು ಅವರು ಮಾತನಾಡಿ, ಮಹಿಳೆಯರು ಸರ್ಕಾರದ ವಿವಿಧ ಯೋಜನೆಗಳ ಬಗ್ಗೆ ತಿಳಿದುಕೊಂಡು ಅವುಗಳ ಪ್ರಯೋಜನ ಪಡೆದುಕೊಂಡು ಸ್ವಂತ ಉದ್ಯೋಗಗಳನ್ನು ಆರಂಭಿಸಿದರೆ ಜೀವನದಲ್ಲಿ ಮುಂದೆ ಸಾಗಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ, ಕುರ್ಚಿ ಆಟ ಮತ್ತು ನಿಂಬೆಹಣ್ಣಿನ ಓಟ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಯಿತು. ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

# ಜಿಲ್ಲೆಯನ್ನು ದೇಶವೇ ಗುರ್ತಿಸುವಂತೆ ಮಾಡಿದ ಐಎಎಸ್ ಸಾಧಕರಿಗೆ ಸನ್ಮಾನ: ಭೀಮುನಾಯಕ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಕೇಂದ್ರ ಲೋಕಸೇವಾ ಆಯೋಗ (ಯುಪಿಎಸ್‌ಸಿ) ನಡೆಸಿದ ನಾಗರಿಕ ಸೇವಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಜಿಲ್ಲೆಗೆ ಕೀರ್ತಿ ತಂದ ಸಾಧಕರಿಗೆ ಹಮ್ಮಿಕೊಳ್ಳಲಾಗಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ವತಿಯಿಂದ ವಿಶೇಷ ಸನ್ಮಾನ ಮಾಡಲಾಯಿತು.

ನಗರದ ಜಿಲ್ಲಾಡಳಿತ ಭವನದಲ್ಲಿ ನಡೆದ ಈ ಸಮಾರಂಭದಲ್ಲಿ, ಕರವೇ ಜಿಲ್ಲಾಧ್ಯಕ್ಷ ಟಿ.ಎನ್. ಭೀಮುನಾಯಕ ನೇತೃತ್ವದಲ್ಲಿ ಕರವೇ ಬಳಗವು ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಿತು.

ಶೈಕ್ಷಣಿಕವಾಗಿ ಹಿಂದುಳಿದ ಜಿಲ್ಲೆಯೆಂಬ ಹಣೆಪಟ್ಟಿ ಹೊತ್ತಿರುವ ಯಾದಗಿರಿಯ ಪ್ರತಿಭೆಗಳು ರಾಷ್ಟಮಟ್ಟದ ಕಠಿಣ ಪರೀಕ್ಷೆಯಲ್ಲಿ ಸಾಧನೆ ಮಾಡಿರುವುದು ಹೆಮ್ಮೆಯ ವಿಷಯವಾಗಿದ್ದು, ಜಿಲ್ಲೆಯನ್ನು ಮೇಲ್ಮಟ್ಟದಲ್ಲಿ ತಂದು ನಿಲ್ಲಿಸಿದ ಇಂತಹ ಸಾಧಕರು ಮುಂದಿನ ಪೀಳಿಗೆಯ ವಿದ್ಯಾರ್ಥಿಗಳಿಗೆ ಸ್ಪೂರ್ತಿ ಮತ್ತು ಮಾದರಿಯಾಗಿದ್ದಾರೆ.

ಇವರ ಸಾಧನೆಯಿಂದ ದೇಶವೇ ಜಿಲ್ಲೆಯನ್ನು ಗುರ್ತಿಸುವಂತಾಗಿದೆ ಈ ಕಾರಣಕ್ಕೆ ಈ ಸಾಧಕರಿಗೆ ಕರವೇ ಸನ್ಮಾನಿಸಿ ಗೌರವಿಸಿದೆ ಎಂದು ಕರವೇ ಜಿಲ್ಲಾದ್ಯಕ್ಷ ಟಿ.ಎನ್.ಭೀಮುನಾಯಕ ತಿಳಿಸಿದರು.

ಈ ಸಂದರ್ಭದಲ್ಲಿ ಸಂತೋಷಕುಮಾರ ನಿರ್ಮಲಕರ್, ಮಲ್ಲು ಮಾಳಿಕೇರಿ, ಅಂಬ್ರೇಷ್ ಹತ್ತಿಮನಿ, ಚೌಡಯ್ಯ ಬಾವೂರ,

ವಿಶ್ವರಾಜ ಪಾಟೀಲ್, ಭೀಮಾಶಂಕರ ಹತ್ತಿಕುಣಿ, ಬಸವರಾಜ ಜಗನ್ನಾಥ, ಅಶೋಕ ನಾಯಕ, ವಿಜಯಕುಮಾರ ರಾಠೋಡ,

ಸಿದ್ದಲಿಂಗರಡ್ಡಿ ಮುನಗಾಲ, ರವಿ ಜಮ್ಮಾರ, ರಮೇಶ ಡಿ. ನಾಯಕ ಸೇರಿದಂತೆ ಕರವೇ ಮುಖಂಡರು ಇದ್ದರು.

# ಯಾದಗಿರಿ ಜಿಲ್ಲಾ ಉತ್ಸವ ಆಯೋಜನೆ: ದರ್ಶನಾಪೂರ ಭರವಸೆ



ಯಾದಗಿರಿ: ಬರುವ ನವೆಂಬರ್ ತಿಂಗಳೊಳಗಾಗಿ ಜಿಲ್ಲಾ ಉತ್ಸವವನ್ನು ಅದ್ದೂರಿಯಾಗಿ ಆಯೋಜಿಸಲಾಗುವುದು ಎಂದು ಸಣ್ಣ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪೂರ ಪ್ರಕಟಿಸಿದರು.

ನಗರದ ತಮ್ಮ ಉಸ್ತುವಾರಿ ಸಚಿವರ ಕಚೇರಿಯಲ್ಲಿ ಭೇಟಿ ಮಾಡಿದ ಕರ್ನಾಟಕ ರಕ್ಷಣಾ ವೇದಿಕೆಗಳ ಮುಖಂಡರ ನಿಯೋಗದ ಸಭೆಯಲ್ಲಿ ಮಾತನಾಡಿದ ಅವರು, ಮುಂಬರುವ ಏಪ್ರಿಲ್ ತಿಂಗಳಲ್ಲಿ ಜಿಲ್ಲೆಯ ಎಲ್ಲಾ ಉನ್ನತ ಅಧಿಕಾರಿಗಳು ಹಾಗೂ ವಿವಿಧ ಸಂಘ–ಸಂಸ್ಥೆಗಳ ಮುಖಂಡರ ವಿಶೇಷ ಸಭೆ ಕರೆಯಲಾಗುವುದು. ಆ ಸಭೆಯಲ್ಲಿ ಉತ್ಸವದ ಪೂರ್ವಸಿದ್ಧತೆಗಳ ಬಗ್ಗೆ ಸವಿಸ್ತಾರವಾಗಿ ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಇದಕ್ಕೂ ಮುನ್ನ ಸಭೆಯಲ್ಲಿ ಮಾತನಾಡಿದ ಕರವೇ (ಪ್ರವೀಣ ಶೆಟ್ಟಿ ಬಣ) ಉತ್ತರ ಕರ್ನಾಟಕ ಅದ್ಯಕ್ಷ ಶರಣು ಬಿ ಗದ್ದುಗೆ ಈಗಾಗಲೇ ಜಿಲ್ಲೆಯಾಗಿ 16 ವರ್ಷಗಳಾಗುತ್ತಾ ಬರುತ್ತಿದ್ದರೂ ಉತ್ಸವ ಕನಸಾಗಿದೆ. ಜಿಲ್ಲೆಯ ಸಮಸ್ತ ಕನ್ನಡಿಗರ ಕನಸು ಇದೇ ವರ್ಷ ನನಸಾಗಿಸುವಂತೆ ಮನವಿ ಮಾಡಿಕೊಂಡರು.

ಕರವೇ ಜಿಲ್ಲಾದ್ಯಕ್ಷ ಟಿ.ಎನ್. ಭೀಮುನಾಯಕ ಮಾತನಾಡಿ, ಜಿಲ್ಲೆಯ ಜಿಲ್ಲೆಯ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಅನಾವರಣಗೊಳಿಸುವ ಜಿಲ್ಲಾ ಉತ್ಸವ ಆಯೋಜನೆ ಮಾಡುವುದರಿಂದ ಹಿಂದುಳಿದ ಗಡಿಭಾಗದ ಜಿಲ್ಲೆಯಲ್ಲಿ ಕನ್ನಡದ ಕಂಪು ಪಸರಿಸಲು ಕಾರಣವಾಗುತ್ತದೆ.

ಜಿಲ್ಲೆಯ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಮತ್ತು ಸ್ಥಳೀಯ ಕಲಾವಿದರಿಗೆ ವೇದಿಕೆ ಕಲ್ಪಿಸಲು ಜಿಲ್ಲಾ ಉತ್ಸವದ ಅವಶ್ಯಕತೆ ಇದೆ ಎಂದು ಮನವರಿಕೆ ಮಾಡಿಕೊಟ್ಟರು.

ಇದೇ ಸಂದರ್ಭದಲ್ಲಿ ಕರವೇ ನಿಯೋಗವು ಸಚಿವ ದರ್ಶನಾಪುರರಿಗೆ ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಿತು.

**ನಿಯೋಗದಿಂದ ಡಿಸಿ ಭೇಟಿ:**

ಬಳಿಕ ಕರವೇ ಸಂಘಟನೆಗಳ ಮುಖಂಡರ ನಿಯೋಗವು ಜಿಲ್ಲಾಧಿಕಾರಿ ಹರ್ಷಲ್ ಬೋಯರ್ ಅವರ ಕಚೇರಿಗೆ ಭೇಟಿ ಮಾಡಿ ಚರ್ಚಿಸಿ ಮನವಿ ಸಲ್ಲಿಸಿತು. ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಸಮಾಲೋಚನೆ ನಡೆಸಿ ಉತ್ಸವದ ಯಶಸ್ವಿ ಆಯೋಜನೆಗೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸಂತೋಷಕುಮಾರ ನಿರ್ಮಲಕರ್, ಸಿದ್ದುರಡ್ಡಿ ತಂಗಡಗಿ, ಮಲ್ಲು ಮಾಳಿಕೇರಿ, ಅಂಬ್ರೇಷ್ ಹತ್ತಿಮನಿ, ಚೌಡಯ್ಯ ಬಾವೂರ, ವಿಶ್ವರಾಜ ಪಾಟೀಲ್, ಭೀಮಾಶಂಕರ ಹತ್ತಿಕುಣಿ ಇದ್ದರು

# ರಂಜಾನ್, ಯುಗಾದಿ, ಹಬ್ಬದ ಶಾಂತಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ




ರಂಜಾನ್ ಮತ್ತು ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಕಂಪ್ಲಿ ಪೊಲೀಸ್ ಠಾಣೆಯಲ್ಲಿ ಶಾಂತಿ ಸಭೆ ಜರುಗಿತು. ಡಿ ವೈ ಎಸ್ ಪಿ ಪ್ರಸಾದ್ ಗೋಖಲೆ ಮಾತನಾಡಿ ಹಬ್ಬವನ್ನು ಸಂಪ್ರದಾಯದಂತೆ ಶಾಂತಿಯುತವಾಗಿ ಆಚರಿಸಬೇಕು

ಎಂದು ತಿಳಿಸಿದರು. ಹಬ್ಬದ ಪ್ರಯುಕ್ತ ಪಟ್ಟಣವು ಕೋಮು ಸೌಹಾರ್ದತೆಗೆ ಹೆಸರುವಾಸಿಯಾಗಿದ್ದು,

ಮುಂದಿನ ದಿನಗಳಲ್ಲೂ ಅದೇ ರೀತಿ ಮುಂದುವರೆಸಿಕೊಂಡು

ಹೋಗಬೇಕು. ಕಾನೂನು ಸುವ್ಯವಸ್ಥೆ ಧಕ್ಕೆ ಬರುವ ಸಂದರ್ಭ ಬಂದರೆ ಪೊಲೀಸರಿಗೆ ತಕ್ಷಣವೇ ಮಾಹಿತಿ ನೀಡಬೇಕು. ಇದರಿಂದ ರಕ್ಷಣೆ ನೀಡಲು ಸಾಧ್ಯವಾಗುತ್ತದೆ. ಯಾವುದೇ ಸಂದರ್ಭದಲ್ಲಿ ಯಾರೂ ಕಾನೂನನ್ನು ಕೈಗೆತ್ತಿಕೊಳ್ಳಬಾರದು,

ರಂಜಾನ್ ಮತ್ತು ಯುಗಾದಿ ಹಬ್ಬದ ಪ್ರಯುಕ್ತ ಎಲ್ಲಾ ಸಮುದಾಯದ ಜನರು ಸೌಹಾರ್ದಯುತವಾಗಿ ಹಬ್ಬ

ಆಚರಿಸಬೇಕು. ಯಾವುದೇ ಸ್ಥಳದಲ್ಲಿ ಅಕ್ರಮ ಜೂಜು, ಕಳ್ಳತನ ಕಂಡು ಬಂದರೆ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದರು. ಮಾಹಿತಿ ತಿಳಿಸಿದರು

ಈ ಸಂದರ್ಭದಲ್ಲಿ ಪಿಎಕೆಬಿ ವಾಸ್ ಕುಮಾರ್ ಎಎಸ್‌ಐ ಬಸವರಾಜ್ ಪೊಲೀಸ್ ಸಿಬ್ಬಂದಿಗಳು ಹಾಗೂ ಊರಿನ ಹಿರಿಯ ಮುಖಂಡರು ಹಾಗೂ ಯುವಕರು ಯುಗಾದಿ ಮತ್ತು ರಂಜಾನ್ ಹಬ್ಬದ ಶಾಂತಿ ಸಭೆಯಲ್ಲಿ ಪಾಲ್ಗೊಂಡಿದ್ದರು

**ಶ್ರೀ ಹೇಮರೆಡ್ಡಿ ಮಲ್ಲಮ್ಮ ಮಹಿಳಾ ಅಭಿವೃದ್ಧಿ ಸಂಸ್ಥೆಯಿಂದ ಆಯೋಜನೆ**

# ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ: ಪಾಟೀಲ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಶ್ರೀ ಹೇಮರೆಡ್ಡಿ ಮಲ್ಲಮ್ಮ ಮಹಿಳಾ ಅಭಿವೃದ್ಧಿ ಸಂಸ್ಥೆಯ ವತಿಯಿಂದ ಇದೇ ಮಾರ್ಚ್ 15 ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷೆ ಅನ್ನಪೂರ್ಣ ಸಿ ಪಾಟೀಲ ತಿಳಿಸಿದ್ದಾರೆ. ನಗರದ ಚಿತ್ತಾಪುರ ರಸ್ತೆಯ ಡಾನ್ ಬಾಸ್ಕೋ ಶಾಲೆಯ ಮುಂಭಾಗದ ರಾಯಲ್ ಫಂಕ್ಷನ್ ಹಾಲ್ ನಲ್ಲಿ ಭಾನುವಾರ ಬೆಳಿಗ್ಗೆ 10 ಗಂಟೆಗೆ ನಡೆಯುವ ಕಾರ್ಯಕ್ರಮವನ್ನು ಸಮಾಜ ಸೇವಕಿ ಶ್ರೀಮತಿ ಭಾರತಿ ಶರಣಬಸಪ್ಪಗೌಡ ದರ್ಶನಾಪೂರ ಅವರು ಉದ್ಘಾಟಿಸಲಿದ್ದಾರೆ. ವಿಶೇಷ ಅತಿಥಿಗಳಾಗಿ ಅಂತರಾಷ್ಟ್ರೀಯ ಖ್ಯಾತಿಯ ಹಾಸ್ಯ ಭಾಷಣಗಾರ್ತಿ ಇಂಧೂಮತಿ ಸಾಲಿಮಠ ಆಗಮಿಸಲಿದ್ದು, ಹಾಸ್ಯೋತ್ಸವ ಕಾರ್ಯಕ್ರಮ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ಶಾಂತಿ ಸದನ ಶಾಲೆಯ ಸವಿತಾ ಸಾಹೇಬರೆಡ್ಡಿ ಬಕ್ಕಾ ಆಗಮಿಸಲಿದ್ದು, ಸಂಸ್ಥೆಯ ಅಧ್ಯಕ್ಷೆ ಅನ್ನಪೂರ್ಣ ಸಿ ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ.

ಇಂದಿನ ಕಾರ್ಯಕ್ರಮದ ನಿಮಿತ್ತವಾಗಿ ಈಗಾಗಲೇ ಮಹಿಳೆಯರಿಗಾಗಿ ವಿಶೇಷ ಸ್ಪರ್ಧೆಗಳನ್ನು ಆಯೋಜಿಸಿದ್ದು, ಅವುಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಕೂಡ ನಡೆಯಲಿದೆ. ಕಾರ್ಯಕ್ರಮದ ಸಭಾಂಗಣದಲ್ಲಿ ಹೋಳಿ, ಸಂಕ್ರಾಂತಿ, ವರಮಹಾಲಕ್ಷ್ಮಿ ಪೂಜೆ, ಗ್ರಾಮೀಣ ಜೀವನ ಶೈಲಿ ಸೇರಿದಂತೆ ವಿವಿಧ ಪರಿಕಲ್ಪನೆಯ ಪ್ರಾತ್ಯಕ್ಷಿಕೆ ಕೂಡ ನಡೆಯಲಿದೆ. ಜಾತಿ ಮತ ಪಂಥಗಳ ಬೇಧವಿಲ್ಲದೇ ಎಲ್ಲಾ ವರ್ಗಗಳ ಮಹಿಳೆಯರು, ಪಾರಂಪರಿಕ ಇಲಕಲ್ ಸೀರೆಯುಟ್ಟು ಭಾಗವಹಿಸುವ ಈ ಸಮಾರಂಭವನ್ನು ಮಹಿಳೆಯರ ಹಬ್ಬದ ರೀತಿ ಸಂಭ್ರಮದಿಂದ ಆಚರಿಸಲು ತೀರ್ಮಾನಿಸಲಾಗಿದೆ ಎಂದಿದ್ದಾರೆ. 250 ಜನ ಕ್ರಿಯಾಶೀಲ ಹಾಗೂ ವಿವಿಧ ವೃತ್ತಿ–ಪ್ರವೃತ್ತಿಯ ಮಹಿಳಾ ಸದಸ್ಯರನ್ನು ಒಳಗೊಂಡಿರುವ ಶ್ರೀ ಹೇಮರೆಡ್ಡಿ ಮಲ್ಲಮ್ಮ ಮಹಿಳಾ ಅಭಿವೃದ್ಧಿ ಸಂಸ್ಥೆಯು ಕಳೆದ ವರ್ಷ ಅಸ್ತಿತ್ವಕ್ಕೆ ಬಂದಿದ್ದು, ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜಿಲ್ಲೆಯ ಮಹಿಳೆಯರ ಅಭಿವೃದ್ಧಿಗಾಗಿ ಶ್ರಮಿಸುತ್ತಿದೆ. ಪಾಸ್ ಪಡೆದವರಿಗೆ ಮಾತ್ರ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶವಿದ್ದು, ಯಾದಗಿರಿ ನಗರದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಮನವಿ ಮಾಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ನಮ್ಮ ಸಂಸ್ಥೆಯ ಪದಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದ್ದಾರೆ.

# ತಾಲೂಕು ಅಧ್ಯಕ್ಷರಾಗಿ ಪ್ರಭು ಚನ್ನೂರು ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಸಮೀಪದ ತಾಳಿಕೋಟಿ ತಾಲೂಕಿನ ಬೊಮ್ಮನಳ್ಳಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಭು ಚನ್ನೂರು ಅವರನ್ನು ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆ (ಬಿಗ್ರೇಡ್) ಉನ್ನತೀಕರಣ ಸಂಘ (ರಿ) ತಾಲೂಕು ಘಟಕದ ಅಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.

ತಾಲೂಕು ಘಟಕದ ಸಭೆಯಲ್ಲಿ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರ ಸಮ್ಮುಖದಲ್ಲಿ ಈ ಆಯ್ಕೆ ಪ್ರಕ್ರಿಯೆ ನಡೆಯಿತು. ಸಭೆಯಲ್ಲಿ ಹಾಜರಿದ್ದ ಸದಸ್ಯರು ಪ್ರಭು ಚನ್ನೂರು ಅವರ ಸೇವೆ ಹಾಗೂ ಸಂಘಟನಾ ಕಾರ್ಯಗಳನ್ನು ಪರಿಗಣಿಸಿ ಅವರನ್ನು ಅಧ್ಯಕ್ಷರಾಗಿ ಆಯ್ಕೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸದಸ್ಯರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆ ಉನ್ನತೀಕರಣ ಹಾಗೂ ಅವರ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಸಂಘದ ಮೂಲಕ ಒಗ್ಗಟ್ಟಾಗಿ ಕಾರ್ಯನಿರ್ವಹಿಸಲಾಗುವುದು ಎಂದು ತಿಳಿಸಿದರು.

ಪ್ರಭು ಚನ್ನೂರು ಅವರ ಆಯ್ಕೆಗೆ ಸಹೋದ್ಯೋಗಿಗಳು ಹಾಗೂ ಸ್ನೇಹಿತರು ಅಭಿನಂದನೆ ಸಲ್ಲಿಸಿದ್ದಾರೆ.

## ತಂಬಾಕು ಸೇವನೆಯಿಂದ ಕ್ಯಾನ್ಸರ್, ಆರೋಗ್ಯಕ್ಕೆ ಮಾರಕ



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ತಾಲೂಕಿನ ಅಲಗೂಡ ಗ್ರಾಮದಲ್ಲಿ ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರವನ್ನು ಜರುಗಿತು. ಗ್ರಾಮದಲ್ಲಿ ತಂಬಾಕು, ಗುಟ್ಕ, ಪಾನಮಸಾಲಾ ಮತ್ತು ಸಾರಾಯಿ ಮುಕ್ತ ಗ್ರಾಮ ಜನಜಾಗ್ರತಿ ರಾಲಿಯಲ್ಲಿ ಅನೇಕ ವಿದ್ಯಾರ್ಥಿಗಳು ಘೋಷಣೆ


ಮುಖಾಂತರ ಗ್ರಾಮವನ್ನು ಸುತ್ತಿದರು. ಕ್ಯಾನ್ಸರ್ ದಿಂದ ಆಗುವ ಅನಾಹುತಗಳ ಬಗ್ಗೆ ಭೀತ್ತಿ ಚಿತ್ರಗಳ ಮುಖಾಂತರ ತಿಳಿಸಿದರು.

ಗ್ರಾಮದ ಏಕನಾಥ್ ದೇವಾಲಯದಲ್ಲಿ ಹಮ್ಮಿಕೊಂಡಿರುವ ಸಮಾರಂಭದಲ್ಲಿ ಕಲಬುರ್ಗಿಯ ಭಾರತೀಯ ಕ್ಯಾನ್ಸರ್ ಸಂಸ್ಥೆಯ ವಿಭಾಗದ ಮುಖ್ಯಸ್ಥರಾದ ಗುರುರಾಜ ಕುಲಕರ್ಣಿಯವರು ಮಾತನಾಡಿ ತಂಬಾಕು ಸೇವನೆಯಿಂದ್ ಆಗುವ ಅನಾಹುತ ಕುರಿತು ತಿಳಿಸಿದರು. ದಿನದಿಂದ ದಿನ ಕ್ಯಾನ್ಸರ್ ರೋಗ ಬಹಳ ಜನರಿಗೆ ಬರುತ್ತಿದ್ದು ಇದಕ್ಕೆ ಮುಖ್ಯ ಕಾರಣವೆಂದರೆ ತಂಬಾಕು, ಗುಟ್ಕಾ, ಪಾನ್ ಮಸಾಲ ಮತ್ತು ಶರಾಯಿ ಸೇವನೆ ಮಾಡಬಾರದೆಂದು ಎಂದು ಹೇಳಿದರು.

ಇದಲ್ಲದೆ ಪ್ಲಾಸ್ಟಿಕ್ ನಲ್ಲಿ ಊಟ ಮಾಡುವುದು, ಪ್ಲಾಸ್ಟಿಕ್ ಕಪ್ಪಿನಲ್ಲಿ ಬಿಸಿ ಚಾ ಕುಡಿಯುವುದು, ಪೇಪರದಲಿ ಆಹಾರ ಸೇವನೆ ಮಾಡುವುದು ಮತ್ತು ಹೆಚ್ಚಿಗೆ ರಾಸಾಯನಿಕ ಪದಾರ್ಥಗಳು ಬಳಸುವುದರಿಂದ ಕ್ಯಾನ್ಸರ್ ರೋಗ ಹೆಚ್ಚಿನ ಜನರಿಗೆ ಬರುತ್ತಿದೆ ಎಂದು ತಿಳಿಸಿದರು. ಸಮಾಜ ಸೇವಕರಾದ್ ಮಹೇಶ್ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ ಅಲಗೂಡ್ ದಲ್ಲಿ ತಂಬಾಕು ಸೇವನೆ ಅಲ್ಲದೆ ಮದುಮೇಹ ಹೆಚ್ಚಿಗಿದೆ ಎಂದು ತಿಳಿಸಿ ಇದರಿಂದ ಎಲ್ಲರು

ಜಾಗ್ರತೆ ವಹಿಸಬೇಕು ಎಂದರು. ಭಾರತೀಯ ಕ್ಯಾನ್ಸರ್ ಸಂಸ್ಥೆಯ ಶ್ರೀ ನಿಧಿ ಮತ್ತು ದೇವಪ್ಪ ದುರ್ಗೆ. ದೇವಸ್ಥಾನದ ಅಧ್ಯಕ್ಷರಾದ ಶ್ರೀಕಾಂತ್ ಪಾಟೀಲ. ಜ್ಞಾದೇವ್. ಪಿಂಟು ಜವಳೇ, ಅರವಿಂದ ವಾಡೇಕರ್. ಮುಖ್ಯ ಗುರುಗಳಾದ. ರಮೇಶ ರಾಜೋಳೆ. ವಿಜಯಕುಮಾರ್ ಉಕ್ಕವಾಲೆ. ಶಿಕ್ಷಕರಾದ ಸುಜಾತಾ ಖೈರಾಟಕರ. ನಾಗಪ್ಪ ನಿಣ್ಣೆ ಹಾಗೂ ಗ್ರಾಮಸ್ಥರು ಪ್ರಮುಖರು. ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಜಯಂತಿ ಆಚರಣೆಗೆ ಪೂಜ್ಯರ, ಸರ್ವಧರ್ಮೀಯರ ಸಹಕಾರ ಅವಶ್ಯ: ಹಂಪಯ್ಯ ಹಿರೇಮಠ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಪ್ರತಿಯೊಬ್ಬ ಮಹನೀಯರ ಜಯಂತಿಗಳು ಯಶಸ್ವಿಯಾಗಿ ನೆರವೇರಲು ಎಲ್ಲಾ ಪೂಜ್ಯರ ಹಾಗೂ ಸರ್ವಧರ್ಮೀಯರ ಸಹಕಾರ ಅತ್ಯಂತ ಅವಶ್ಯಕವಾಗಿದೆ ಎಂದು ಕರ್ನಾಟಕ ಹಾಲು ಒಕ್ಕೂಟ ಮಹಾಮಂಡಳದ ನಿರ್ದೇಶಕ ಹಂಪಯ್ಯ ಹಿರೇಮಠ ಹೇಳಿದರು.

ತಾಲೂಕಿನ ಮಂಡಲಗಿರಿ ಗ್ರಾಮದಲ್ಲಿ ತಾಲೂಕ ಶ್ರೀ ವೀರಶೈವ ಜಂಗಮ ಸಂಘ ಕುಕನೂರು ಹಾಗೂ ಶ್ರೀ ವೀರಭದ್ರೇಶ್ವರ ಬೇಡ ಜಂಗಮ ಕ್ಷೆಮಾಭಿವೃದ್ಧಿ ಸಂಘ ಮಂಡಲಗಿರಿ ಇವರ ವತಿಯಿಂದ ಶ್ರೀ ಜಗದ್ಗುರು ರೇಣುಕಾಚಾರ್ಯರ ಮೂರ್ತಿ ಪ್ರತಿಷ್ಠಾಪನೆ, ಜಯಂತೋತ್ಸವ ಹಾಗೂ ತಾಲೂಕ ಸಮಾವೇಶವನ್ನು ಗುರುವಾರ ಆಯೋಜಿಸಲಾಯಿತು. ಈ ಕಾರ್ಯಕ್ರಮವನ್ನು ಉದ್ದೇಶಿಸಿ ಕರ್ನಾಟಕ ಹಾಲು ಒಕ್ಕೂಟ ಮಹಾಮಂಡಳದ ನಿರ್ದೇಶಕರಾದ ಹಂಪಯ್ಯ ಹಿರೇಮಠ ಮಾತನಾಡುತ್ತ ಪ್ರತಿಯೊಂದು ಜಯಂತಿಗಳ ಯಶಸ್ವಿನ ಹಿಂದೆ ಪೂಜ್ಯರ ಹಾಗೂ ಸರ್ವಧರ್ಮೀಯರ ಸಹಕಾರ ಅವಶ್ಯಕತೆವಾಗಿದ್ದು ಪ್ರತಿಯೊಬ್ಬರ ಸಹಕಾರದಿಂದಲೇ ಯಂತ್‌ಗಳು ಯಶಸ್ವಿಯಾಗುತ್ತವೆ. ಮಾನವ ಧರ್ಮವನ್ನು ಸ್ಥಾಪಿಸುವಲ್ಲಿ ನಾಂದಿ ಹಾಡಿದ ಮಹಾನ್ ಚೇತನ ಜಗದ್ಗುರು ಆದಿ ರೇಣುಕಾಚಾರ್ಯರ ಮೂರ್ತಿ ಪ್ರತಿಷ್ಠಾಪನೆಯನ್ನು ಮಂಡಲಗಿರಿ ಗ್ರಾಮದಲ್ಲಿ ನೆರವೇರಿಸಿರುವುದು ಅತ್ಯಂತ ಸಂತೋಷದಾಯಕ ವಾಗಿದೆ ಎಂದು ಹೇಳಿದರು.

ಆದಿ ಜಗದ್ಗುರು ರೇಣುಕಾಚಾರ್ಯರು ಮಾನವರನ್ನು ಆಂತರಿಕವಾಗಿ ಪರಿವರ್ತನೆಗೊಳಿಸುತ್ತಾ ಮಹಾದೇವರನ್ನಾಗಿಸಿದ ದಿವ್ಯ ಚೇತನರಾಗಿದ್ದು ಅವರು ಹಾಕಿಕೊಟ್ಟ ಸಂಪ್ರದಾಯವನ್ನು ಉಳಿಸಿಕೊಂಡು ಸುಶಿಕ್ಷಿತರಾಗಿ ಬಾಳೋಣ ಎಂದು ತಿಳಿಸಿದರು .

ಹಿರೇಮಠದ ಪೂಜ್ಯರಾದ ಶ್ರೀ ಸಿದ್ದರಾಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ ಜಗದ್ಗುರುಗಳು ವೀರ ಸಂಸ್ಕೃತಿಯ ಚೇತನವಾಗಿದ್ದು ಬಸವಣ್ಣನವರ ಕಾಲದ ಪೂರ್ವದಲ್ಲಿಯೂ ಸಹ ವೀರಶೈವ ಧರ್ಮ ಇತ್ತು ಎಂಬುದನ್ನು ಎಲ್ಲರೂ ಮನಗಾಣಬೇಕು ಜೊತೆಗೆ ವೀರಶೈವ ಮತ್ತು ಲಿಂಗಾಯತ ಬೇರೆಬೇರೆ ಎಂದು ಕೆಲವರು ಸುಳ್ಳು ಹೇಳುತ್ತಿದ್ದು.

ಜನತೆ ಅದನ್ನೆಲ್ಲಾ ನಂಬಬಾರದು, ವೀರಶೈವ ಲಿಂಗಾಯತ ಎರಡು ಹಿಂದೂ ಧರ್ಮದ ಅವಿಭಾಜ್ಯ ಅಂಗವಾಗಿವೆ ಹಾಗೂ ಪ್ರತಿಯೊಬ್ಬರೂ ವಾಸ್ತವಿಕ ಮೂಲವನ್ನು ಬಿಟ್ಟು ಪ್ರಚಲಿತತೆ ಹಿಂದೆ ಹೊರಟಿರುವುದು ವಿಷಾಧನೆಯವಾಗಿದ್ದು ವಾಸ್ತವವನ್ನು ಅರಿತು ಹೆಜ್ಜೆ ಇಡಬೇಕು ಎಂದು ಹೇಳಿದರು.

ಕುದುರಿಮೋತಿ ಮೈಸೂರು ಸಂಸ್ಥಾನ ಮಠದ ಪೂಜ್ಯರಾದ ವಿಜಯ ಮಹಾಂತೇಶ್ವರ ಮಹಾಸ್ವಾಮಿಗಳು ಮಾತನಾಡಿ ಜಗತ್ತಿನ ಉದಯದಿಂದ ಪ್ರಾರಂಭವಾದ ಪ್ರಾಚೀನ ಧರ್ಮ ಹಿಂದೂ ಧರ್ಮವಾಗಿದ್ದು ಇದರಲ್ಲಿ ಬ್ರಹ್ಮಾಂಡವನ್ನೇ ಲಿಂಗವಾಗಿ ಪೂಜಿಸಲ್ಪಡುತ್ತಿದೆ. ಲಿಂಗಕ್ಕೆ ಯಾವುದೇ ಜಾತಿ ಭೇದಭಾವವಿಲ್ಲ ಎಲ್ಲಾ ಸಮುದಾಯದವರೆಗೂ ಲಿಂಗದಾರಣೆ ಅವಶ್ಯಕತೆವಾಗಿದ್ದು ಜಂಗಮರು ಪರಿಶುದ್ಧ ಆತ್ಮದಿಂದ ಕೂಡಿರಬೇಕು. ಆ ಜಾತಿ ಈ ಜಾತಿ ಎಂದು ಬಡಿದಾಡುವ ಬದಲು ನಾನೊಬ್ಬ ಭಾರತೀಯ, ನಾನೊಬ್ಬ ಹಿಂದು ಎಂದು ಸಾರಿ ಹೇಳುವುದರೊಂದಿಗೆ ಸಾಮರಸ್ಯ, ಸೌಹಾರ್ದತೆಯನ್ನು ನಿಮ್ಮದಾಗಿಸಿಕೊಳ್ಳಿ ಎಂದು ಹಿತವಚನ ನುಡಿದರು.

ಬೆಳಗಿನ ಜಾವ ಬ್ರಾಹ್ಮಿ ಮುಹೂರ್ತದಲ್ಲಿ ಯಲಬುರ್ಗಾ ಪಟ್ಟಣದ ಶ್ರೀಧರ ಮುರಡಿ ಮಠದ ಪೂಜ್ಯರಾದ ಶ್ರೀ ಬಸವಲಿಂಗ ಶಿವಾಚಾರ್ಯರು ಜಗದ್ಗುರು ರೇಣುಕಾಚಾರ್ಯರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯವನ್ನು ನೆರವೇರಿಸಿದರು.

ಮಾಜಿ ಸಚಿವ ಹಾಲಪ್ಪ ಆಚಾರ್ ಜಗದ್ಗುರುಗಳ ಭವ್ಯ ಮೆರವಣಿಗೆಗೆ ಹಾಗೂ ಕುಂಭಮೇಳಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದ ನಂತರ ಪ್ರತಿಯೊಬ್ಬರಿಗೂ ಅನ್ನ ಸಂತರ್ಪಣೆ ಆಯೋಜಿಸಲಾಯಿತು.

ವೇದಿಕೆಯಲ್ಲಿ ಕುಕನೂರು ಪಟ್ಟಣದ ಮುಂಡರಗಿ ಅನ್ನದಾನೇಶ್ವರ ಶಾಖಾಮಠದ ಪೂಜ್ಯರಾದ ಡಾ.ಮಹಾದೇವ ಮಹಾಸ್ವಾಮಿಗಳು ಹಾಗೂ ಮಂಗಳೂರು ಗ್ರಾಮದ ಅರಳಲೇ ಹಿರೇಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯರು ನೇತೃತ್ವವನ್ನು ವಹಿಸಿಕೊಂಡಿದ್ದರು.

ಪ್ರಮುಖರಾದ ವೀರಯ್ಯ ತೋಂಟದಾರ್ಯ ಮಠ, ಮಹೇಶ ಕಲ್ಮಠ, ಹರೀಶ್ವರಯ್ಯ ಹಿರೇಮಠ, ಜಂಗಮ ಸಮಾಜ ತಾಲೂಕು ಪ್ರಧಾನ ಕಾರ್ಯದರ್ಶಿ, ವೀರಯ್ಯ ವಿ ಹಿರೇಮಠ,

ವಿಶ್ವನಾಥಯ್ಯ ಹಿರೇಮಠ ಪ್ರವೀಣ ಕುಮಾರ್ ಹಿರೇಮಠ, ಹಂಪಯ್ಯ ಮೆತಗಲ್, ಶ್ರೀಧರ ಹೊಸಮನಿ, ವೀರಣ್ಣ ಅಣ್ಣಿಗೇರಿ, ಶಿವಕುಮಾರ್ ನಾಗಲಾಪುರ ಮಠ, ಮಹೇಶ್ ಮಳೆ ಮಠ, ಗಿರೀಶ್ ಹಿರೇಮಠ, ಹಂಚಾಳಪ್ಪ ತಳವಾರ, ಹನುಮಂತಪ್ಪ ಉಪ್ಪಾರ, ಶ್ರೀ ದರ ದೇಸಾಯಿ, ಹನುಮಂತಪ್ಪ ನಾಗನಗೌಡರು, ಹಾಗೂ ಗ್ರಾಮದ ಪ್ರಮುಖರು ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು

## ತೆರಿಗೆ ವಸೂಲಾತಿ ಅಭಿಯಾನ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಸಮೀಪದ ಮಟ್ಟೂರ್ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಡುವ ಗ್ರಾಮಗಳಲ್ಲಿ ಗುರುವಾರ ಮಟ್ಟೂರ್ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಂದ ತೆರಿಗೆ ವಸೂಲಾತಿ ಅಭಿಯಾನ ಜರುಗಿತು.

ತೆರಿಗೆ ವಸೂಲಾತಿಯಿಂದ ಗ್ರಾಮ ಪಂಚಾಯತಿಗಳ ಸ್ವಂತ ಸಂಪನ್ಮೂಲ ವೃದ್ಧಿಯಾಗಲಿದ್ದು ಅದರಿಂದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಬುದ್ದಿನಿ, ಗುಡಿಹಾಳ, ಕಡದಾರಾಳ ಸೇರಿದಂತೆ ಮಟ್ಟೂರಲ್ಲಿ ಪ್ರತಿ ಗ್ರಾಮಸ್ಥರ ಮನೆ ಮನೆ ತೆರಳಿ ಕರ ವಸೂಲಿ ಮಾಡಲಾಯಿತು.

ಬಿಲ್ ಕಲೆಕ್ಟರ್ ಮೌನೇಶ, ಕಾರ್ಯದರ್ಶಿ ಸೋಮಣ್ಣ, ಮಹಾಂತೇಶ್ ಹಿರೇಮಠ, ಅಮರೇಗೌಡ, ಗ್ರಾಮಸ್ಥರು ಇದ್ದರು

## ಅರ್ಹರಿಂದ ಅರ್ಜಿ ಆಹ್ವಾನ

ರಾಯಚೂರು: ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಚನ ಕಲ್ಯಾಣ ಎಂಬ ಅಹೋರಾತ್ರಿ (ಒಂಬತ್ತು ಗಂಟೆ) ನಾಟಕವನ್ನು ಸಿದ್ಧಪಡಿಸಿ, ನಾಡಿನಾದ್ಯಂತ ಪ್ರದರ್ಶನ ಮಾಡಲು ಇಲಾಖೆ ಉದ್ದೇಶಿಸಿದೆ. ಆ ಸಂಬಂಧ ನುರಿತ ಹಾಗೂ ಆಸಕ್ತ ಯುವಕ ಯುವತಿಯರು ಹಾಗೂ ಅನುಭವಿ ರಂಗಕಲಾವಿದರು/ಗಾಯಕರುಗಳಿಂದ ಅರ್ಜಿಗಳನ್ನು ಅಹ್ವಾನಿಸಿದೆ (ಅರ್ಜಿ ಲಗತ್ತಿಸಿದೆ), ವಯೋಮಿತಿ 18 ರಿಂದ 40 ವರ್ಷಗಳು ರಂಗಶಿಕ್ಷಣದಲ್ಲಿ ತರಬೇತಿ ಪಡೆದ ಹಾಗೂ ನಾಟಕಗಳಲ್ಲಿ ಅಭಿನಯಿಸಿದ ಕಲಾವಿದರಿಗೆ ಅದ್ಯತೆ ನೀಡಲಾಗುವುದು. ತುಂಬಿದ ಅರ್ಜಿಗಳನ್ನು ದಿನಾಂಕ 20 ಮಾರ್ಚ್ 2026ರ ಒಳಗೆ ಸದಸ್ಯ ಕಾರ್ಯದರ್ಶಿ ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು–560056. ಇಲ್ಲಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪುವಂತೆ ಅಥವಾ ಮೇಲ್ ವಿಳಾಸ: kanakaresearchcentre@gmail.com ದ ಮೂಲಕ ಸಲ್ಲಿಸಲು ಕೋರಿದೆ. ಆಯ್ಕೆಯಾದ ಅಭ್ಯರ್ಥಿಗಳು ಮೂರು ತಿಂಗಳ ಕಾಲದ ಅವಧಿಯಲ್ಲಿ ಪೂರ್ಣಕಾಲಿಕವಾಗಿ ತರಬೇತಿ–ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಮಾಸಿಕ ಗೌರವಧನ ಮತ್ತು ಊಟ–ವಸತಿ ವ್ಯವಸ್ಥೆಯನ್ನು ಮಾಡಲಾಗುವುದು. ಅರ್ಜಿಯ ನಮೂನೆಯನ್ನು ಕನ್ನಡ ಸಂಸ್ಕೃತಿ ಇಲಾಖೆಯ ವೆಬ್ ಸೈಟ್ kannadasiri.karnataka.gov.in ನಲ್ಲಿ ಪಡೆಯಬಹುದು.

## ಅರ್ಹರಿಂದ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ವಚನ ಕಲ್ಯಾಣ ಎಂಬ ಅಹೋರಾತ್ರಿ (ಒಂಬತ್ತು ಗಂಟೆ) ನಾಟಕವನ್ನು ಸಿದ್ಧಪಡಿಸಿ, ನಾಡಿನಾದ್ಯಂತ ಪ್ರದರ್ಶನ ಮಾಡಲು ಉದ್ದೇಶಿಸಿದ್ದು, ಈ ಸಂಬಂಧ ನುರಿತ ಹಾಗೂ ಆಸಕ್ತ ಯುವಕ ಯುವತಿಯರು ಹಾಗೂ ಅನುಭವಿ ರಂಗಕಲಾವಿದರು/ಗಾಯಕರುಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ವಯೋಮಿತಿ 18 ರಿಂದ 40 ವರ್ಷಗಳು, ರಂಗಶಿಕ್ಷಣದಲ್ಲಿ ತರಬೇತಿ ಪಡೆದ ಹಾಗೂ ನಾಟಕಗಳಲ್ಲಿ ಅಭಿನಯಿಸಿದ ಕಲಾವಿದರಿಗೆ ಆದ್ಯತೆಯನ್ನು ನೀಡಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ಮಾ.20 ರೊಳಗಾಗಿ ಸದಸ್ಯ ಕಾರ್ಯದರ್ಶಿ, ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು–560056. ಇಲ್ಲಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪುವಂತೆ ಅಥವಾ ಮೇಲ್ ವಿಳಾಸ: kanakaresearchcentre@gmail.com ದ ಮೂಲಕ ಸಲ್ಲಿಸಬಹುದು.

ಆಯ್ಕೆಯಾದ ಅಭ್ಯರ್ಥಿಗಳು ಮೂರು ತಿಂಗಳ ಕಾಲದ ಅವಧಿಯಲ್ಲಿ ಪೂರ್ಣಕಾಲಿಕವಾಗಿ ತರಬೇತಿ–ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಮಾಸಿಕ ಗೌರವಧನ ಮತ್ತು ಊಟ ವಸತಿ ವ್ಯವಸ್ಥೆಯನ್ನು ಮಾಡಲಾಗುವುದು. ಅರ್ಜಿಯ ನಮೂನೆಯನ್ನು ಕನ್ನಡ ಸಂಸ್ಕೃತಿ ಇಲಾಖೆಯ ವೆಬ್‌ಸೈಟ್ kannadasiri.karnataka.gov.in ನಲ್ಲಿ ಪಡೆಯಬಹುದು.

ಹೆಚ್ಚಿನ ಮಾಹಿತಿ ವಿವರಗಳಿಗಾಗಿ ಸಿ. ಬಸವಲಿಂಗಯ್ಯ (ವಚನ ಕಲ್ಯಾಣ ನಾಟಕದ ನಿರ್ದೇಶಕರು) ಮೊಬೈಲ್ ಸಂಖ್ಯೆ 94485 38620 ಇವರಲ್ಲಿ ಮಾಹಿತಿ ಪಡೆಯಬಹುದು. ಸಂದರ್ಶನಕ್ಕೆ ಹಾಜರಾಗುವ ಕಲಾವಿದರಿಗೆ ಇಲಾಖೆಯು ಯಾವುದೇ ಭತ್ಯೆ ನೀಡಲಾಗುವುದಿಲ್ಲ ಎಂದು ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವಕರು ಸಂಘಟಿತರಾದರೆ ಸದೃಢ ರಾಷ್ಟ್ರ : ಅಶೋಕ ಜೋಶಿ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಯುವಕರು ಈ ದೇಶದ ಬಹುದೊಡ್ಡ ಆಸ್ತಿ. ಯುವಶಕ್ತಿಯನ್ನು ಸದ್ಬಳಕೆ ಮಾಡಿಕೊಂಡಲ್ಲಿ ನಮ್ಮ ದೇಶ ತನ್ನಷ್ಟಕ್ಕೆ ತಾನಾಗಿಯೇ ಅಭಿವೃದ್ಧಿ ಕಾಣಬಲ್ಲದು. ಮಹಾತ್ಮ ಗಾಂಧಿಯವರ ಗ್ರಾಮಗಳ ಅಭಿವೃದ್ಧಿಯಾದರೆ ನಮ್ಮ ದೇಶ ಅಭಿವೃದ್ಧಿ ಕಾಣಬಲ್ಲದು ಎಂಬ ತತ್ವದ ಅಡಿಯಲ್ಲಿ ಹಳ್ಳಿಗಳ ಅಭಿವೃದ್ಧಿ ಆಗಬೇಕಿದೆ. ಅದಕ್ಕೆ ಯುವಕರ ಪಾತ್ರ ಬಹುಮುಖ್ಯವಾಗಿದೆ. ವ್ಯಕ್ತಿತ್ವ ವಿಕಸನದ ಮೂಲಕ ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ದೊರೆತಾಗ ಬದುಕನ್ನು ಯಶಸ್ಸಿನತ್ತ ಕೊಂಡೊಯ್ಯಬಹುದು ಎಂದು ಪ್ರಾಥಮಿಕ ಶಿಕ್ಷಕರ ತರಬೇತಿ ಸಂಸ್ಥೆಯ ನಿವೃತ್ತ ಉಪನ್ಯಾಸಕ ಡಾ. ಅಶೋಕ ಎಂ. ಜೋಶಿ ಹೇಳಿದರು.

ಕೆಎಲ್ಇ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಎನ್‌ಎಸ್‌ಎಸ್ ಶಿಬರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕಾಲೇಜಿನ ಪ್ರಾಚಾರ್ಯ ಅಶ್ವತ್ಥನಾರಾಯಣ ಹೆಗಡೆ ಮಾತನಾಡಿ,

ರಾಷ್ಟ್ರೀಯ ಭಾವೈಕ್ಯತೆ ಮೂಡಿಸುವುದೇ ಎನ್‌ಎಸ್‌ಎಸ್ ಯೋಜನೆಯಾಗಿದೆ. ಉದ್ಯೋಗಕ್ಕಿಂತ ಬದುಕು ಕಟ್ಟಿಕೊಳ್ಳುವುದು ಮುಖ್ಯ. ಶ್ರೇಷ್ಠ ಮನುಷ್ಯರಾದಿ ಮನುಷ್ಯತ್ವ ಬೆಳೆಸಿಕೊಳ್ಳಿ. ಸಮಾಜಕ್ಕೆ ಒಳ್ಳೆಯ ಕೊಡುಗೆ ಕೊಡಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿಯ ಸದಸ್ಯರಾದ ಡಾ. ಮಿನಲ್ ನಾರ್ವೆಕರ, ಪ್ರಾಯೋಗಿಕ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ನಾಗಪ್ಪ ಸರೂರ್ ಉಪಸ್ಥಿತರಿದ್ದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಗೀತಾಗೌಡ ಸ್ವಾಗತಿಸಿದರು. ವಿದ್ಯಾರ್ಥಿನಿ ಸುಪ್ರಿಯಾ ನಾಯ್ಕ ನಿರೂಪಿಸಿದರು. ಉಪನ್ಯಾಸಕಿಯರಾದ ಕಾಂಚನಾ ನಾಯ್ಕ ಪರಿಚಯಿಸಿದರು. ಸುಮತಿ ಗೌಡ ವಂದಿಸಿದರು.

## ಕಾರಾಗೃಹದಲ್ಲಿ ತರಬೇತಿ ಕಾರ್ಯಾಗಾರ



• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆ, ಜಿಲ್ಲಾ ಕಾರಾಗೃಹ ಹಾಗೂ ತೋಟಗಾರಿಕಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಕಾರವಾರ ಜಿಲ್ಲಾ ಕಾರಾಗೃಹ ಬಂದಿಗಳಿಗೆ ಸರ್ಕಾರದಿಂದ ದೊರೆಯುವ ಇಲಾಖಾವಾರು ಸೌಲಭ್ಯಗಳನ್ನು ಕುರಿತ ತರಬೇತಿ ಕಾರ್ಯಕ್ರಮವು ಮಂಗಳವಾರ ನಡೆಯಿತು.

ಕಾರ್ಯಗಾರವನ್ನು ಗೌರವಾನ್ವಿತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಪರಮೇಶ್ವರಪ್ರಸನ್ನ.ಬಿ ಉದ್ಘಾಟಿಸಿದರು, ಕಾರ್ಯಕ್ರಮದಲ್ಲಿ ಜಿಲ್ಲಾ ಕಾರಾಗೃಹದ ಅಧೀಕ್ಷಕಿ ಹೇಮಾವತಿ.ಬಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಅರಣ್ಯ ಪರಿಸರ ವಿಜ್ಞಾನ ಮತ್ತು ಪರಿಸರ ಇಲಾಖೆಯ ಪ್ರಾದೇಶಿಕ ನಿರ್ದೇಶಿಕ ಪ್ರವೀಣ ಕುಮಾರ ಬಸ್ರೂರು, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಸುನೀಲ ಅಂಕೋಲೆಕರ ಮತ್ತಿತರರು ಉಪಸ್ಥಿತರಿದ್ದರು.

ಕಾರಾಗೃಹದಲ್ಲಿರುವ ಬಂದಿಗಳೆಲ್ಲರೂ ಬಿಡುಗಡೆ ಹೊಂದಿದ ನಂತರ ಯಾವುದೇ ಅನ್ಯಮಾರ್ಗ ತುಳಿಯದೇ ಸ್ವತಂತ್ರವಾಗಿ ಅವರವರ ಬದುಕು ಕಟ್ಟಿಕೊಳ್ಳಬೇಕೆಂಬುದು ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆ ಹಾಗೂ ಸರ್ಕಾರದ ಉದ್ದೇಶವಾಗಿದ್ದು, ಇಲಾಖಾವಾರು ಸಮನ್ವಯದೊಂದಿಗೆ ಸರಕಾರದಿಂದ ದೊರೆಯುವ ಇಲಾಖಾವಾರು ಸೌಲಭ್ಯಗಳನ್ನು ಬಂಧಿ ನಿವಾಸಿಗಳಿಗೆ ಕಾರ್ಯಗಾರದ ಮೂಲಕ ತಿಳಿಸಲಾಯಿತು.

ಬಂದಿ ನಿವಾಸಿಗಳೆಲ್ಲರೂ ಕಾರಾಗೃಹದಲ್ಲಿ ಪಡೆದಂತಹ ಇಲಾಖಾವಾರು ಮಾಹಿತಿಯನ್ನು ಹಾಗೂ ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡೆದುಕೊಂಡು ಉತ್ತಮ ಜೀವನ ರೂಪಿಸಿಕೊಳ್ಳವಂತಾಗಬೇಕು ಎಂಬುವುದು ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆಯ ಆಶಯವಾಗಿದೆ.

## ಉತ್ತಮ ಜಲ ಸಂರಕ್ಷಣೆಗಾಗಿ ರಾಷ್ಟ್ರಪತಿಯಿಂದ ಗೌರವ ಪಡೆದ ಅನಿತಾ




• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ಇಲ್ಲಿಗೆ ಸಮೀಪದ ಮುದ್ದಟೂನೂರು ಗ್ರಾಂ ಪಂಚಾಯಿತಿಯಲ್ಲಿ ಎಂಬಿಕೆಯಾಗಿ ಕಾರ್ಯ ನಿರ್ವಹಿಸುತ್ತಿರುವ ವಿ ಅನಿತಾ ಅವರಿಗೆ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕರ ಮನೆ ಮನೆಗೆ ತೆರಳಿ ಸಮರ್ಪಕವಾಗಿ ನೀರಿನ ನಿರ್ವಹಣೆ ಕುರಿತು ಮಾಹಿತಿ ನೀಡಿ ಹೆಚ್ಚಿನ ಮುತುವರ್ಜಿ ವಹಿಸಿದ ಕೆಲಸ ಗುರುತ್ತಿಸಿದ ಕೇಂದ್ರ ಸರ್ಕಾರ ನವದೆಹಲಿಯ ವಿಜ್ಞಾನ ಭವನದಲ್ಲಿ ಬುಧವಾರ ನಡೆದ ಕೇಂದ್ರ ಸರ್ಕಾರದ ಜಲಮಹೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮ ಅವರು ಪ್ರಶಸ್ತಿ ಪತ್ರ ನೀಡಿ ಗೌರವಿಸಿದರು.

ಈ ವೇಳೆ ಮಾತನಾಡಿದ ಅವರು ರಾಷ್ಟ್ರೀಯ ಜಲ ಪ್ರಶಸ್ತಿಗಳು ನೀರಿನ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಮತ್ತು ಉತ್ತಮ ನೀರಿನ ಬಳಕೆಯ ಅಭ್ಯಾಸಗಳನ್ನು ಅಳವಡಿಸಿಕೊಳ್ಳಲು ಪ್ರೇರೇಪಿಸುವ ಗುರಿಯನ್ನು ಹೊಂದಿವೆ ಜಲಸಂರಕ್ಷಣೆ ಪ್ರತಿಯೊಬ್ಬರ ಆದ್ಯಕರ್ತವ್ಯವಾಗಿದೆ, ಗ್ರಾಂ ಪಂಚಾಯಿತಿ ಮಟ್ಟದಲ್ಲಿ ನಿಷ್ಠೆ ಹಾಗೂ ಪ್ರಾಮಾಣಿಕವಾಗಿ ನಾವು ಮಾಡಿ ಅಳಿಲು ಸೇವೆ ಗುರುತಿಸಿದ ಕೇಂದ್ರ ಸರ್ಕಾರ ಜಲಸಂರಕ್ಷಣೆಯ ಕುರಿತು ರಾಷ್ಟ್ರ ರಾಜಧಾನಿಯಲ್ಲಿ ಆಹ್ವಾನ ನೀಡಿ ಗೌರವಿಸಿರುವುದು ಸಂತಸ ತಂದಿದೆ, ನನ್ನ ಎಲ್ಲಾ ಕಾರ್ಯಗಳಿಗೂ ಬೆಂಬಲವಾಗಿ ನಿಂತ ಗ್ರಾಂ ಪಂಚಾಯಿತಿ ಪಿಡಿಒ ಹಾಗೂ ಸಿಬ್ಬಂದಿ ಮುದ್ದಟನೂರು ಗ್ರಾಮಸ್ಥರಿಗೆ ಆಭಾರಿಯಾಗಿದ್ದೇನೆ ಎಂದು ಹೇಳಿದರು.

## ಜಾತ್ರಾ ವೈಭವ; ಸಾಮೂಹಿಕ ವಿವಾಹಕ್ಕೆ ಸಾಕ್ಷಿಯಾದ ಭಕ್ತರು

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ತಾಲೂಕಿನ ಇತಿಹಾಸ ಪ್ರಸಿದ್ಧ ಗುಳಬಾಳ ಗ್ರಾಮದ ಶ್ರೀ ಕಾಳಿಕಾದೇವಿ ಹಾಗೂ ಶ್ರೀ ರಾಮಲಿಂಗೇಶ್ವರರ 26ನೇ ವರ್ಷದ ಜಾತ್ರಾ ಮಹೋತ್ಸವ ಮತ್ತು ಧರ್ಮಸಭೆ ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ಜರುಗಿತು.

ಜಾತ್ರಾಮಹೋತ್ಸವದ ಅಂಗವಾಗಿ ನಡೆದ ಧರ್ಮಸಭೆಯಲ್ಲಿ ಸಾನಿಧ್ಯ ವಹಿಸಿ ಮಾತನಾಡಿದ ಗುಳಬಾಳ ಆನಂದ ಆಶ್ರಮದ ಪೂಜ್ಯ ಮರಿಹುಚ್ಚೇಶ್ವರ ಸ್ವಾಮೀಜಿ, "ಮಠಕ್ಕೆ ಭಕ್ತರೇ ನಿಜವಾದ ಆಸ್ತಿ. ಭಕ್ತರು ನೀಡುವ ಸಹಕಾರ ಮತ್ತು ದೇಣಿಗೆಯಿಂದ ಅನಾಥ ಮಕ್ಕಳ ಶಿಕ್ಷಣ, ಸಾಮೂಹಿಕ ವಿವಾಹ ಹಾಗೂ ಪ್ರಸಾದ ವ್ಯವಸ್ಥೆ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಗಳನ್ನು ನಡೆಸಲಾಗುತ್ತಿದೆ. ಇದು ಗುರುವಿನ ಆಶೀರ್ವಾದದಿಂದ ಸಾಧ್ಯವಾಗಿದೆ" ಎಂದು ಹೇಳಿದರು.

ಧರ್ಮಸಭೆಯಲ್ಲಿ ಆಶೀರ್ವಚನ ನೀಡಿದ ವಿರಗೋಟ ಮಠದ ಸ್ವಾಮೀಜಿ, ಕೊಡೆಕಲ್ಲ ದುರದುಂಡೇಶ್ವರ ಮಠದ ಶ್ರೀಗಳು, ಹಗರಟಗಿ ಮಠದ ಬಸವಲಿಂಗ ಮಹಾಸ್ವಾಮಿಗಳು ಹಾಗೂ ದೇವಾಪುರ ಶ್ರೀಗಳು ಮಾತನಾಡಿ, ಇಂದಿನ ದುಬಾರಿ ಕಾಲದಲ್ಲಿ ಸಾಮೂಹಿಕ ವಿವಾಹಗಳು ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ವರದಾನವಾಗಿವೆ. ಅನಗತ್ಯ ಖರ್ಚುಗಳನ್ನು ತಪ್ಪಿಸಿ ಸರಳವಾಗಿ ವಿವಾಹ ನಡೆಸುವುದರಿಂದ ಸಮಾಜದಲ್ಲಿ ಸಮಾನತೆ ಮೂಡುತ್ತದೆ ಎಂದು ತಿಳಿಸಿದರು. ಭಕ್ತರ ಸಹಕಾರದಿಂದ ಮರಿಹುಚ್ಚೇಶ್ವರ ಸ್ವಾಮೀಜಿ ಇಂತಹ ಸಮಾಜಮುಖಿ ಕಾರ್ಯಗಳನ್ನು ನಡೆಸುತ್ತಿರುವುದು ಶ್ಲಾಘನೀಯ ಎಂದರು.



ಚಬನೂರಿನ ಜ್ಯೋತಿಷ್ಯ ರತ್ನ ಪರಮ ಪೂಜ್ಯ ರಾಮಲಿಂಗಯ್ಯ ಸ್ವಾಮಿ ಹಿರೇಮಠ್ ಅವರು ಜೀವನದಲ್ಲಿ ಧರ್ಮ, ಜ್ಞಾನ ಮತ್ತು ಆತ್ಮಚಿಂತನೆಯ ಮಹತ್ವವನ್ನು ವಿವರಿಸಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಕಾಳಿಕಾದೇವಿ ಹಾಗೂ ಶ್ರೀ ರಾಮಲಿಂಗೇಶ್ವರರಿಗೆ ವಿಶೇಷ ಪೂಜೆ, ಅಭಿಷೇಕ ಮತ್ತು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ ಸಾವಿರಾರು ಭಕ್ತರು ದೇವರ ದರ್ಶನ ಪಡೆದು ಭಕ್ತಿ ಸಮರ್ಪಿಸಿದರು. ಮಠದ ವತಿಯಿಂದ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

**ಸಾಮೂಹಿಕ ವಿವಾಹ:**

ಜಾತ್ರಾಮಹೋತ್ಸವದ ಅಂಗವಾಗಿ ನಡೆದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಆರು ನವಜೋಡಿಗಳು ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಗುಳಬಾಳದ ರಾಮಲಿಂಗೇಶ್ವರ ಶಾಖಾಮಠದ ಶ್ರೀ ಮರಿಹುಚ್ಚೇಶ್ವರ ಸ್ವಾಮಿಗಳ ನೇತೃತ್ವದಲ್ಲಿ ಮಂತ್ರಘೋಷಗಳ ನಡುವೆ ವಿವಾಹ ಕಾರ್ಯಕ್ರಮ ನೆರವೇರಿತು. ಗ್ರಾಮಸ್ಥರು ಹಾಗೂ ಸಾವಿರಾರು ಭಕ್ತರ ಸಮ್ಮುಖದಲ್ಲಿ ನವ ವಧು ವರರಿಗೆ ಮಂಗಳದ್ರವ್ಯಗಳನ್ನು ಅರ್ಪಿಸಿ, ಅವರ ವೈವಾಹಿಕ ಜೀವನ ಸುಖಮಯವಾಗಲಿ ಎಂದು ಆಶೀರ್ವದಿಸಲಾಯಿತು.

ಈ ಸಂದರ್ಭದಲ್ಲಿ ಮುಖಂಡರಾದ ಎಚ್ ಸಿ ಪಾಟೀಲ, ಸೋಮಶೇಖರ ಸ್ಥಾವರಮಠ, ಚಂದ್ರಶೇಖರ ಮಾಗನೂರು, ಗುಳಬಾಳ ಗ್ರಾಮದ ಮುಖಂಡರು, ಭಕ್ತರು, ಹುಣಸಗಿ ಪಟ್ಟಣ ಸೇರಿದಂತೆ ಅನೇಕ ಊರುಗಳಿಂದ ಬಂದಿರುವ ನೂರಾರು ಭಕ್ತರು ಇದ್ದರು.

# ಲಿಂಗ ಸಮಾನತೆ ಮತ್ತು ಸುಸ್ಥಿರ ಭವಿಷ್ಯ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ವೀರಶೈವ ಮಹಾವಿದ್ಯಾಲಯದ, ಮಹಿಳಾ ಸಬಲೀಕರಣ ಕೋಶ ಏರ್ಪಡಿಸಿದ "ವಿಶ್ವ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ"ಯ ಕಾರ್ಯಕ್ರಮವನ್ನು ಆಚರಿಸಲಾಯಿತು. ಬಳ್ಳಾರಿ ಜಿಲ್ಲೆಯ ಪೊಲೀಸ್ ಅಧೀಕ್ಷರಾದ ಡಾ.ಸುಮನ್ ಪೆನ್ನೇಕರ್, ಇವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ, ನಾವು ಮಹಿಳೆಯರನ್ನು ಬೆಂಬಲಿಸಿ ಸಬಲೀಕರಿಸಿದಾಗ, ಸಂಪೂರ್ಣ ಸಮಾಜವೇ ಲಾಭ ಪಡೆಯುತ್ತದೆ. ಶಿಕ್ಷಣ, ನಾಯಕತ್ವ, ಉದ್ಯೋಗ ಮತ್ತು ನಿರ್ಧಾರ ತೆಗೆದುಕೊಳ್ಳುವ ಕ್ಷೇತ್ರಗಳಲ್ಲಿ ಮಹಿಳೆಯರಿಗೆ ಸಮಾನ ಅವಕಾಶಗಳನ್ನು ನೀಡುವುದರಿಂದ ಕುಟುಂಬಗಳು, ಸಮುದಾಯಗಳು ಮತ್ತು ಸಮಾಜ ಹೆಚ್ಚು ಬಲವಾಗುತ್ತದೆ. "ಉಖಗಿಇ ಖಿಔ ಉಂಖಓ " ಎಂಬ ಸಂದೇಶವು ಮಹಿಳೆಯರ ಸಬಲೀಕರಣವು ಯಾರಿಗೂ ನಷ್ಟವಲ್ಲ, ಅದು ಸಂಪೂರ್ಣ ಸಮಾಜಕ್ಕೆ ಲಾಭ ಎಂಬುದನ್ನು ನೆನಪಿಸುತ್ತದೆ. ಮಹಿಳೆಯರು ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಅತ್ಯಂತ ಮಹತ್ವದ ಪಾತ್ರ ವಹಿಸುತ್ತಾರೆ. ಅವರು ತಾಯಂದಿರು, ಶಿಕ್ಷಕರು, ನಾಯಕರು, ವಿಜ್ಞಾನಿಗಳು, ವೈದ್ಯರು, ಉದ್ಯಮಿಗಳು ಮತ್ತು ರಾಷ್ಟ್ರ ನಿರ್ಮಾಪಕರು ಆಗಿದ್ದಾರೆ. ಕೊನೆಗೆ ಮಹಿಳೆಯರನ್ನು ಸಬಲೀಕರಿಸುವುದು ಎಂದರೆ ಮಾನವ ಕುಲವನ್ನೇ ಸಬಲೀಕರಿಸುವುದಾಗಿದೆ ಎಂದು ನುಡಿದರು.

ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಡಾ.ಅರವಿಂದ್ ಪಟೇಲ್, ಇವರು ಮಾತನಾಡುತ್ತ ಪುರುಷರ ಮನುಸ್ಥಿತಿ ಉಳ್ಳ ಮಹಿಳೆಯರು ಹೆಣ್ಣು ಭ್ರೂಣ ಹತ್ಯೆಯಲ್ಲಿ ಭಾಗಿಯಾಗುತ್ತಿದ್ದಾರೆ. ಇದು ಅತ್ಯಂತ ವಿಷಾದಕರವಾಗಿದೆ ಹಾಗೂ ಮನೆಯಿಂದಲೇ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ಒದಗಿಸಿದ್ದೇ ಆದಲ್ಲಿ ಮಹಿಳಾ ದಿನಾಚರಣೆ ಅವಶ್ಯಕತೆ ಇರುವುದಿಲ್ಲ ಎಂದು ಮಾತನಾಡಿದರು.

ವೀರಶೈವ ವಿದ್ಯಾವರ್ಧಕ ಸಂಘದ ಸಹ ಕಾರ್ಯದರ್ಶಿಗಳಾದ ಯಾಲ್ಪಿ ಪಂಪನಗೌಡ, ವೀರಶೈವ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ಸಾಹುಕಾರ ಸತೀಶ್ ಬಾಬು, ಕಾಲೇಜು ಆಡಳಿತ ಮಂಡಳಿಯ ಸದಸ್ಯರಾದ ಅಕ್ಕಿ ಶಿವರಾಜ್, ಮಹಾವಿದ್ಯಾಲಯದ ಪ್ರಾಂಶುಪಾಲರಾದ ಜಿ ಮಲ್ಲನಗೌಡ, ಅರ್ಥಶಾಸ್ತ್ರ ಪ್ರಾಧ್ಯಾಪಕರಾದ ಡಾ.ರಾಜಶ್ರೀ ಪಾಟೀಲ್ ಮತ್ತು ಮಹಿಳಾ ಸಭಿಲೀಕರಣ ಸಮಿತಿ ಕೋಶದ ಸಂಚಾಲಕರಾದ ಶ್ರೀಮತಿ. ಅನುರಾಧ.ಕೆ ಇವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಈ ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿಗಳು ಹಾಗೂ 100ಕ್ಕಿಂತಲೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಡಾ.ಕವಿತ ಸಂಗನಗೌಡ. ಎಂ, ದೈಹಿಕ ಶಿಕ್ಷಣ ನಿರ್ದೇಶಕರು ಇವರು ಕಾರ್ಯಕ್ರಮವನ್ನು ನಿರೂಪಿಸಿದರು. ಕುಮಾರಿ ರೇಖಾಶ್ರೀ, ಉಪನ್ಯಾಸಕರು ಇವರು ವಂದಿಸಿದರು.

# ಕೆರೆ ನಿರ್ಮಿಸಲು ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ


ಹರಗಿನಡೋಣಿ ಗ್ರಾಮಕ್ಕೆ ಕುಡಿಯುವ ನೀರಿನ ಕೆರೆ ನಿರ್ಮಿಸಲು ಆಗ್ರಹಿಸಿ ಪ್ರತಿಭಟನಾ ಧರಣಿಯ ಹಿನ್ನೆಲೆಯಲ್ಲಿ ಡಿಸಿ ಯವರನ್ನು ಬೇಟಿ ಮಾಡಲಾಯಿತು. ಡಿಸಿ ಯವರು ಎಲ್ಲಾ ಬೇಡಿಕೆಗಳನ್ನು ಸಂಬಂಧ ಪಟ್ಟ ಅಧಿಕಾರಿಗಳಿಗೆ ಫೋನ್ ಮಾಡಿ ಮಾತನಾಡಿದರು. KMERC ಹಣದಿಂದ ಈ ಸಲ ಮೊದಲನೇ ಆದ್ಯತೆಯಾಗಿ ಕೆರೆ ನಿರ್ಮಾಣ ಖಂಡಿತವಾಗಿ ಮಾಡೇ ಮಾಡುತ್ತೇವೆ ಎಂದು ಕೂಲಂಕಷವಾಗಿ ಚರ್ಚಿಸಿ ಒಂದು ದಿನ ಊರಿಗೆ ಬರುತ್ತೇನೆ ಎಂದು ಭರವಸೆ ನೀಡಿದರು.

ಇನ್ನುಳಿದ ಬೇಡಿಕೆಗಳಿಗೆ ಸಂಬಂಧಿಸಿದಂತೆ ವಸತಿ ಸಂಬಂಧಪಟ್ಟ ಹಾಗೆ ಸಂಪೂರ್ಣವಾಗಿ ವಸತಿಹೀನರು ನಿವೇಶನಹೀನರಿಗೆ ಮೊದಲ ಆದ್ಯತೆ–ಯಾಗಿ ಮನೆ ನಿರ್ಮಿಸಲು ಕ್ರಮ ಕೈಗೊಳ್ಳುವುದಾಗಿ ಹಾಗೆಯೇ ಈಗಾಗಲೇ ಭೂಮಿಯನ್ನು ಗುರುತಿಸಲ್ಲಾಗಿದೆ ಎಂದು ತಿಳಿಸಿದರು. ಹಾಗೆಯೇ ಕಾರ್ಮಿಕರಿಗೆ ಕೆಲಸ, ಮಹಿಳೆಯರಿಗೆ ಕರಕೌಶಲ್ಯ ಕೆಲಸ ಈ ವಿಷಯಕ್ಕೆ ಸಂಬಂಧಿಸಿದ ಒಂದು ಸಭೆ ನಡೆಸಿ ಕಾರ್ಯ ಯೋಜನೆ ರೂಪಿಸುವುದಾಗಿ ಭರವಸೆ ನೀಡಿದರು ಹಾಗೆಯೇ ಗ್ರಾಮದ ಸುತ್ತಮುತ್ತಲಿನ ಕೈಗಾರಿಕೆಗಳಿಂದ ಆಗುತ್ತಿರುವ ವಾಯುಮಾಲಿನ್ಯ ಕುರಿತು ಕೂಡಲೇ ಮಾಲಿನ್ಯ ನಿಯಂತ್ರಣ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲು ನಿರ್ದೇಶಿಸುವುದಾಗಿ ಹೇಳಿದರು ಹಾಗೆಯೇ ಬೆಳಗಲ್ ಗ್ರಾಮದಲ್ಲಿ ನಿರ್ಮಾಣ ಆದ ಆಸ್ಪತ್ರೆಯ ಪ್ರಾರಂಭಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳೊಂದಿಗೆ ಮಾತನಾಡಿ ಈಗಾಗಲೇ ಮೂಲ ಸೌಕರ್ಯಗಳು ಮತ್ತು ಸಿಬ್ಬಂದಿಗಳಿಗೆ ವ್ಯವಸ್ಥೆ ಮಾಡಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಇಂದು ನಿಯೋಗದಲ್ಲಿ ಗಣಿಪಾದಿತ ಪರಿಸರ ಮತ್ತು ಜನಪದ ಹೋರಾಟ ಸಮಿತಿಯ ರಾಜ್ಯ ಸಂಚಾಲಕರರಾದ ಡಿ ನಾಗಲಕ್ಷ್ಮಿ ರಾಜ್ಯ ಸಮಿತಿ ಸದಸ್ಯರಾದ ಆರ್ ಸೋಮಶೇಖರ್ ಗೌಡ ೦ಖಗಖಿಗಅ ಜಿಲ್ಲಾ ಅಧ್ಯಕ್ಷರಾದ ಎ ದೇವದಾಸ್ ಗ್ರಾಮದ ಮಾಜಿ ಉಪಾಧ್ಯಕ್ಷರಾದ ಚಂದ್ರ ಮಾಜಿ ಪಂಚಾಯತಿ ಅಧ್ಯಕ್ಷರಾದ ಲಕ್ಷ್ಮೀ, ಎಗ್ಗಿ ಶಿವರಾಮ, ಆಲ್ದಳ್ಳಿ ರಮೇಶ್, ಯಂಕಾರೆಡ್ಡಿ ಇನ್ನಿತರ ಮುಖಂಡರಗಳು ಮಾನ್ಯ ಜಿಲ್ಲಾಧಿಕಾರಿಗಳ ಭೇಟಿ ಮಾಡಿದ ನಿಯೋಗದಲ್ಲಿ ಇದ್ದರು

# ವ್ಯಕ್ತಿ ಕಾಣೆ, ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ



ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ತಂಬ್ರಹಳ್ಳಿ ಗ್ರಾಮದ ನಿವಾಸಿ ಕಾಟ್ರಳ್ಳಿ ಹನುಮಂತಪ್ಪ ತಂದೆ ಕಾಟ್ರಳ್ಳಿ ನಾಗಪ್ಪ (ಸು. 82 ವರ್ಷ) ವ್ಯಕ್ತಿ ಕಾಣೆಯಾಗಿದ್ದು, ಈ ಕುರಿತು ಫೆಬ್ರವರಿ 28ರಂದು ಹೊಸಪೇಟೆ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ಕಾಟ್ರಳ್ಳಿ ಹನುಮಂತಪ್ಪ ಸುಮಾರು 5.2 ಅಡಿ ಎತ್ತರ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ದಪ್ಪ ಮೂಗು, ಬೆಕ್ಕಿನ ಕಣ್ಣು, ಬಿಳಿ ಗಡ್ಡ ಮೀಸೆ ಹೊಂದಿದ್ದು, ಎಡಗೈ ಐದು ಬೆರಳುಗಳು ಒಳಕ್ಕೆ ಮುದುರಿಕೊಂಡಿರುತ್ತವೆ. ಕನ್ನಡ ಮತ್ತು ಹಿಂದಿ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಅಂಗಿ, ಬಿಳಿ ಬಣ್ಣದ ಪಂಚೆ ಧರಿಸಿರುತ್ತಾರೆ.

ಈ ಮೇಲ್ಕಂಡ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದುಬಂದಲ್ಲಿ ಹೊಸಪೇಟೆ ಬಡಾವಣೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08394–230233, 9480805755, ಟಿ.ಬಿ ಡ್ಯಾಂ ವೃತ್ತ ನಿರೀಕ್ಷಕರ ದೂರವಾಣಿ ಸಂಖ್ಯೆ 08394–224933, 9480805731, ಜಿಲ್ಲಾ ನಿಸ್ತಂತು ಕೇಂದ್ರ ದೂರವಾಣಿ ಸಂಖ್ಯೆ 08394226100 ಗೆ ಸಂಪರ್ಕಿಸಬಹುದು ಬಡಾವಣೆ ಠಾಣಾಧಿಕಾರಿ ಶಿವಕುಮಾರ್ ನಾಯ್ಕ ತಿಳಿಸಿದ್ದಾರೆ.

# ಪೈಪಲೈನ್ ಕಾಮಗಾರಿಗೆ ಭೂಮಿ ಪೂಜೆ: ರಾಜೇಶ್ವರಿ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ 34ರಲ್ಲಿ ಮಾಜಿ ಮೇಯರ್ ಎಂ.ರಾಜೇಶ್ವರಿ ಅವರು ಬುಧವಾರ ಪೈಪಲೈನ್ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

ಅಂದಾಜು ವೆಚ್ಚ 10 ಲಕ್ಷ ರೂ.ಗಳ 15ನೇ ಹಣಕಾಸು ಯೋಜನೆಯ ಅನುದಾನದ ಅಡಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ರಾಜೇಶ್ವರಿ ಅವರು ತಿಳಿಸಿದ್ದಾರೆ.

ಈ ಸಂದರ್ಭ ಕಾಂಗ್ರೆಸ್ ಮುಖಂಡ ಸುಬ್ಬರಾಯುಡು, ಭತ್ರಿ ಮಂಜು, ಪರಮೇಶ್, ಪೆದ್ದ ಷಣ್ಮುಖ, ಈಶ್ವರ, ಹೊನ್ನೂರಸ್ವಾಮಿ, ಸೂರಿ, ತಿಪ್ಪೇಶ, ಜಡೆಪ್ಪ ಮತ್ತು ಯೋಗಾನಂದ ರೆಡ್ಡಿ ಹಾಜರಿದ್ದರು.

# ಪೂರ್ವಭಾವಿ ಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಏ.05 ರಂದು ಭಾರತದ ಮಾಜಿ ಉಪ ಪ್ರಧಾನಮಂತ್ರಿ ಹಾಗೂ ಹಸಿರುಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನ ರಾಂ ಅವರ 119ನೇ ಜಯಂತ್ಯೋತ್ಸವ ಮತ್ತು ಏ.14 ರಂದು ಭಾರತ ರತ್ನ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 135 ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಅದ್ದೂರಿ ಆಚರಣೆ ಕುರಿತು ಚರ್ಚಿಸಲು ಮಾ.17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಆಯೋಜಿಸಲಾಗಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಸಭೆಯ ಅಧ್ಯಕ್ಷತೆ ವಹಿಸುವರು.

ಸಭೆಗೆ ಜಿಲ್ಲೆಯ ಎಲ್ಲಾ ಸಂಘ– ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಭಾಗವಹಿಸಿ ಮಹನೀಯರ ಜಯಂತಿ ಕಾರ್ಯಕ್ರಮ ಯಶಸ್ವಿಗೊಳಿಸಲು ತಮ್ಮ ಅಮೂಲ್ಯವಾದ ಸಲಹೆ– ಸೂಚನೆಗಳನ್ನು ನೀಡಬಹುದು ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಚಾಮರಾಜನಗರ ಜಿಲ್ಲೆ ಹೆಗ್ಗವಾಡಿ ಗ್ರಾಮದಲ್ಲಿ ಮಾಜಿ ಸಂಸದರು ಹಾಗೂ ಕೆ ಪಿ ಸಿ ಸಿ ಕಾರ್ಯಧ್ಯಕ್ಷರಾದ ದಿವಂಗತ ಆರ್ ಧ್ರುವನಾರಾಯಣ್ ಅವರ 3ನೇ ವರ್ಷದ ಪುಣ್ಯಸ್ಮರಣೆಯಲ್ಲಿ ಹುಣಸೂರು ತಾಲೂಕಿನ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಪಾಲ್ಗೊಂಡು ಅವರ ಸಮಾಧಿಗೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ್ ಕುಶಲಪುರಿ ವಿಚಾರಿಸಿದರುಈ ಆರ್ ಧ್ರುವನಾರಾಯಣ್ ರವರು ಸಮಾಜದ ಏಳಿಗೆಗಾಗಿ ಸಲ್ಲಿಸಿದ ಅವಿಸ್ಮರಣಿಯ ಸೇವೆಯನ್ನು ಸ್ಮರಿಸಿದರು.*ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಅಭಿಮಾನಿಗಳ ಮುಖಂಡರು ಹಾಜರಿದ್ದರು




ಬಳ್ಳಾರಿ: ಗಣಿ ನಾಡು ಬಳ್ಳಾರಿ ಮಾರ್ಗವಾಗಿ ಸಿರುಗುಪ್ಪ ಮತ್ತು ಲಿಂಗಸುಗೂರು ಮಾರ್ಗದ ರೈಲ್ವೆ ಸೌಲಭ್ಯವನ್ನು ಕಲ್ಪಿಸಬೇಕು, ನಮ್ಮ ಭಾಗದಲ್ಲಿ ನೆನೆಗುದಿಗೆ ಬಿದ್ದ ಎಲ್ಲ ಯೋಜನೆಗಳನ್ನು ಕೂಡಲೇ ಅನುಷ್ಠಾನಕ್ಕೆ ತರಬೇಕು ಎಂದು ಒತ್ತಾಯಿಸಿ ಸಿರುಗುಪ್ಪ ಕ್ಷೇತ್ರದ ಮಾಜಿ ಶಾಸಕ ಎಂ.ಎಸ್.ಸೋಮಲಿಂಗಪ್ಪ ಅವರ ನೇತೃತ್ವದ ನಿಯೋಗ ಕೇಂದ್ರ ಸಚಿವ ಎಚ್ .ಡಿ. ಕುಮಾರಸ್ವಾಮಿ ಅವರಿಗೆ ಬುಧವಾರ ಮನವಿ ಸಲ್ಲಿಸಿದರು. ನವ ದೆಹಲಿಯಲ್ಲಿ ಸಚಿವರನ್ನು ಭೇಟಿ ಮಾಡಿದ ರೈಲ್ವೆ ಕ್ರಿಯಾ ಸಮಿತಿಯ ನಿಯೋಗ ನಾನಾ ಬೇಡಿಕೆಗಳ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ, ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಗಣಪಾಲ್ ಐನಾಥ್ ರೆಡ್ಡಿ, ಸಿರುಗುಪ್ಪ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ್ ಸ್ವಾಮಿ, ಸೇರಿದಂತೆ ಅನೇಕ ಗಣ್ಯರು, ರೈಲ್ವೆ ಕ್ರಿಯಾ ಸಮಿತಿಯ ಮಹೇಶ್ವರ ಸ್ವಾಮಿ, ವಿವಿಧ ಮುಖಂಡರು, ಕಾರ್ಯಕರ್ತರು, ಸಿರುಗುಪ್ಪ ಕ್ಷೇತ್ರದ ಪ್ರಮುಖರು ಇತರರಿದ್ದರು. ಸಚಿವರು ನಿಯೋಗದ ಎಲ್ಲ ಬೇಡಿಕೆಗಳನ್ನೂ ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

# ವಿದ್ಯಾರ್ಥಿಗಳಿಂದ ಗುರುವಂದನಾ ಕಾರ್ಯಕ್ರಮ




• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ತಾಲೂಕಿನ ನಾರಾಯಣಪೂರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ 2004 – 25 ನೇ ಸಾಲಿನ ಎಸ್. ಎಸ್. ಎಲ್. ಸಿ. ವಿದ್ಯಾರ್ಥಿಗಳಿಂದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನದ ಗೌರ ಗ್ರಾಮದ ಸರಕಾರಿ ಪ್ರೌಢ ಶಾಲೆಯ ಮುಖ್ಯ ಗುರುಗಳಾದ ಸುಧಾ–ಕರ್ ಮಹೇಂದರಕರ್ ಉದ್ಘಾಟಿಸಿ ಮಾತನಾಡಿದ ಅವರು ತಂದೆ ತಾಯಿ ಹಾಗೂ ಗುರುಗಳು. ಇವರನ್ನು ಗೌರವ ದಿಂದ ಕಾಣಬೇಕು ಎಂದರು. ಇಂಥ ಸಮಾರಂಭ ಹಮ್ಮಿಕೊಂಡಿದ್ದಕ್ಕೆ ಎಲ್ಲರನ್ನು ಅಭಿನಂದನೆಗಳು ತಿಳಿಸಿದರು. ಇದೆ ಸಂದರ್ಭದಲ್ಲಿ ಅನೇಕ ಶಿಕ್ಷಕರು ತಮ್ಮ ಅಭಿಪ್ರಾಯ ವ್ಯಕ್ತ ಪಡಿಸಿ ಉತ್ತಮ ಸಮಾರಂಭ ಹಮ್ಮಿಕೊಂಡಿದ್ದು ಎಲ್ಲರಿಗೂ ಸಂತೋಷ ತಂದಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಸಹ ತಮ್ಮ ಅನ್ನಿಸಿಕೆ ಅಲ್ಲದೆ ಶಿಕ್ಷಕರೊಂದಿಗೆ ಅವರ ಒಡನಾಟ ಹೇಗಿತ್ತು ಎಂಬುದು ತಿಳಿಸಿದರು. ಅಧ್ಯಕ್ಷತೆ ನಿವೃತ್ತ ಮುಖ್ಯ ಗುರುಗಳಾದ ಶಂಕರ ಬೀರನಾಳೆ ವಹಿಸಿ ಮಾತನಾಡಿ ನಮ್ಮ ಗಿಂತ ಹೆಚ್ಚಿನ ಗೌರವ ತಾಯಿಗೆ ನೀಡಿ ಎಂದರು. ಸಮಾರಂಭದ ರೂವಾರಿ ಪೋಪಟ್ ಜಮಾದಾರ ಸಂಚಾಲನೆ. ಶಿವಕಾಂತ ಪ್ರಾರ್ಥನೆ. ಅಬ್ದುಲ್ ಖಾದರ ವಂದಿಸಿದರು.

# ವಿದ್ಯಾರ್ಥಿ ಅರವಿಂದ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ಸಂಜಯ ಗಾಂಧಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ವ್ಯಾಸಂಗ ಮಾಡ್ತಿದ್ದ ವಿದ್ಯಾರ್ಥಿಯೋರ್ವ ನೇಣು ಬಿಗಿದುಕೊಂಡು ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ನಿನ್ನೆ ಕಾಲೇಜಿನಲ್ಲಿ ಉಪನ್ಯಾಸಕರು ಬೈದಿರೋದು ಅತ್ಯಹತ್ಯೆಗೆ ಕಾರಣ ಎಂದು ಅರೋಪ ಕೇಳಿಬಂದಿದೆ

ನಗರದ ಗುಗ್ಗರಹಟ್ಟಿ ಪ್ರದೇಶದ ಅರವಿಂದ ಆತ್ಮಹತ್ಯೆ ಮಾಡಿಕೊಂಡಿರುವ ವಿದ್ಯಾರ್ಥಿಯಾಗಿದ್ದಾನೆ.

ನಿನ್ನೆ ದಿನ ಕಾಲೇಜಿನ ವಿದ್ಯಾರ್ಥಿಗಳ ಮಧ್ಯೆ ಒಂದಷ್ಟು ಜಗಳವಾಗಿತ್ತು. ಆಗ ಆರವಿಂದ ಪೋಷಕರನ್ನು ಕಾಲೇಜಿನ ಉಪನ್ಯಾಸಕರು ಕರೆದು. ಹೀಗೆ ಗಲಾಟೆ ಮಾಡೋ ಹುಡುಗರನ್ನು ನಾವು ಕಾಲೇಜಿನಲ್ಲಿ ಇರಿಸಿಕೊಳ್ಳಲು ಸಾಧ್ಯವಿಲ್ಲ. ಇದು ಲಾಸ್ಟ್ ವಾರ್ನಿಂಗ್ ಎಂದು ಹೇಳಿ ಕಳುಹಿಸಿದ್ದರು. ಇದರಿಂದ ಮನನೊಂದ ಅರವಿಂದ ನಿನ್ನೆ ಮನೆಯಲ್ಲಿ ನೇಣಿಗೆ ಶರಣಾಗಿದ್ದಾನೆ ಎಂಬ ಆರೋಪವಾಗಿದೆ.

ಇಂದು ಬೆಳಿಗ್ಗೆ ಅರವಿಂದ ಸಾವಿನ ಹಿನ್ನಲೆಯಲ್ಲಿ ಕಾಲೇಜಿನಲ್ಲಿ ಶ್ರದ್ಧಾಂಜಲಿ ಸಭೆ ನಡೆಸಲಾಯ್ತು. ನಂತರ ಕಾಲೇಜಿನಲ್ಲಿ ವಿದ್ಯಾರ್ಥಿಗಳು ಅರವಿಂದ ಗೆ ಕಾಲೇಕಿನ ಹ□□□ಡಿ ಮತ್ತು ಉಪನ್ಯಾಸಕರು ಬೈದಿರೋದೇ ಕಾರಣ ಎಂದು ಆರೋಪಿಸಿ ಹೈಡ್ರಾಮ ನಡೆದು ಅರವಿಂದ ಸಾವಿನ ವಿಷಯದಲ್ಲಿ ರೊಚ್ಚಿಗೆದ್ದ ವಿದ್ಯಾರ್ಥಿಗಳು. ಕಾಲೇಜಿನ ಟೇಬಲ್, ಗ್ಲಾಸ್ ಒಡೆದು ಹಾಕಿ ಆಡಳಿತ ಮಂಡಳಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸ್ಥಳಕ್ಕೆ ಆಡಳಿತ ಮಂಡಳಿ ಬರಬೇಕು ನ್ಯಾಯ ಕೊಡಬೇಕೆಂದು ವಿದ್ಯಾರ್ಥಿಗಳು ಪಟ್ಟು ಹಿಡಿದಿದ್ದರು. ಸ್ಥಳಕ್ಕೆ ಬ್ರೂಸ್ ಪೇಟ್ ಪೊಲೀಸರು ಅಗಮಿಸಿ ಪರಿಸ್ಥಿತಿ ತಿಳಿಗೊಳಿಸಿದರು.

# ಟೈಲರಿಂಗ್ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣಪತ್ರ ವಿತರಣೆ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಸಿಂಧಿಗಿ ಕಾಂಪೌಂಡ್‌ನಲ್ಲಿರುವ ಪ್ರತಿಭಾ ಮಹಿಳಾ ಮಂಡಳಿ (ರಿ) ವತಿಯಿಂದ ಆಯೋಜಿಸಿದ್ದ ಟೈಲರಿಂಗ್ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಹಿಳೆಯರಿಗೆ ಪ್ರಮಾಣಪತ್ರ ವಿತರಣೆ ಕಾರ್ಯಕ್ರಮ ಬುಧವಾರ ಬೆಳಿಗ್ಗೆ ನಡೆಯಿತು.

ಕಾರ್ಯಕ್ರಮದಲ್ಲಿ ಕಾಮಿನೇನಿ ಆಸ್ಪತ್ರೆಯ ಡಾ. ಅರುಣ ಕಾಮಿನೇನಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣಪತ್ರಗಳನ್ನು ವಿತರಿಸಿದರು. ಮಹಿಳೆಯರು ಸ್ವಾವಲಂಬಿಗಳಾಗಲು ಇಂತಹ ತರಬೇತಿ ಕಾರ್ಯಕ್ರಮಗಳು ಬಹಳ ಉಪಯುಕ್ತವಾಗುತ್ತವೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಹಂಪಿರಮಣ ವಹಿಸಿದ್ದರು. ಗೌರವ ಅಧ್ಯಕ್ಷರಾಗಿ ವಕೀಲರಾದ ಸಾಧನ ಹಿರೇಮಠ ಉಪಸ್ಥಿತರಿದ್ದರು.

ವಿಶೇಷ ಅತಿಥಿಗಳಾಗಿ ವಕೀಲರಾದ ವಿಜಯಲಕ್ಷ್ಮಿ, ಬಿಜೆಪಿ ಮಹಿಳಾ ಮೋರ್ಚಾ ರಾಜ್ಯ ಕಾರ್ಯದರ್ಶಿ ಸುಗುಣ ಹಾಗೂ ಜಿಲ್ಲಾ ಉಪಾಧ್ಯಕ್ಷೆ ಪುಷ್ಪ ಭಾಗವಹಿಸಿ ಮಹಿಳೆಯರಿಗೆ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಪ್ರತಿಭಾ ಮಹಿಳಾ ಮಂಡಳಿ ಅಧ್ಯಕ್ಷೆ ಸುಜಾತ ರವಿಚಂದ್ರ ಮಾತನಾಡಿ, ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಸಂಘಟನೆ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತರಬೇತಿ ಪಡೆದ ಅನೇಕ ಮಹಿಳೆಯರು ಹಾಗೂ ಸಂಘಟನೆಯ ಸದಸ್ಯರು ಉಪಸ್ಥಿತರಿದ್ದರು.

# ಕಾನೂನುಬಾಹಿರ ಖಾತಾ ನೀಡಿದ ಆರೋಪ: ತನಿಖೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆ ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿ ಉದ್ಯಾನವನಕ್ಕಾಗಿ ಕಾಯ್ದಿರಿಸಿದ ಹಾಗೂ ಸರ್ಕಾರಿ ಹಳ್ಳ ಪರಂಬೋಕು ಜಮೀನುಗಳಿಗೆ ಕಾನೂನುಬಾಹಿರವಾಗಿ ನಮೂನೆ□3 ಬಿ ಖಾತಾ ನೀಡಲಾಗಿದೆ ಎಂದು ಆರೋಪಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಜಿಲ್ಲಾ ಸಂಘಟನಾ ಸಂಚಾಲಕ ಡಿ.ಇ.ವೀರೇಶ್ ದೂರು ಸಲ್ಲಿಸಿದ್ದಾರೆ.

ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಆ ವೀರೇಶ್ ಅವರು, ಸಿರುಗುಪ್ಪ ಸ.ನಂ.437/ಬಿ2 ವಿಸ್ತೀರ್ಣ 3.05 ಎಕರೆ ಸರ್ಕಾರಿ ಜಾಗವನ್ನು ಜಿಲ್ಲಾ ಪಂಚಾಯಿತಿ ವತಿಯಿಂದ ಉದ್ಯಾನವನಕ್ಕಾಗಿ ಕಾಯ್ದಿರಿಸಲಾಗಿದೆ. ಆದರೆ ಕೆಲವು ಪ್ರಭಾವಿ ವ್ಯಕ್ತಿಗಳು ಆ ಜಾಗವನ್ನು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡು ವಾಸಿಸುತ್ತಿದ್ದು, ಅವರಿಗೆ ಯಾವುದೇ ಹಕ್ಕುಪತ್ರ ಇಲ್ಲದಿದ್ದರೂ ನಗರಸಭೆ ವತಿಯಿಂದ ನಮೂನೆ□3 ಬಿ ಖಾತಾ ನೀಡಲಾಗಿದೆ ಎಂದು ಆರೋಪಿಸಿದರು.

ಇದಲ್ಲದೆ ಸ.ನಂ.337ಎ (1.41 ಎಕರೆ) ಹಾಗೂ ಸ.ನಂ.345ಬಿ/1 (2.82 ಎಕರೆ) ಸರ್ಕಾರಿ ಹಳ್ಳ ಪರಂಬೋಕು ಜಮೀನುಗಳಿಗೆ ಸಹ ನಮೂನೆ□3 ನೀಡಬಾರದೆಂದು ಈಗಾಗಲೇ ತಹಶೀಲ್ದಾರರಿಗೆ ದೂರು ನೀಡಲಾಗಿತ್ತು. ಈ ಕುರಿತು ಜಿಲ್ಲಾಧಿಕಾರಿಗಳ ಜನತಾ ದರ್ಶನ ಕಾರ್ಯಕ್ರಮದಲ್ಲಿಯೂ (ಖಕ–ಉಖಖ ಓಿ.172789) ದೂರು ಸಲ್ಲಿಸಲಾಗಿದ್ದು, ಸ್ಥಳ ಪರಿಶೀಲನೆ ನಡೆಸಿ ಒತ್ತುವರಿ ತೆರವುಗೊಳಿಸಲು ಅಧಿಕಾರಿಗಳು ಸೂಚಿಸಿದ್ದರು ಎಂದು ತಿಳಿಸಿದರು.

ಆದರೂ ಇತ್ತೀಚೆಗೆ ಸಿರುಗುಪ್ಪ ನಗರಸಭೆ ಪೌರಾಯುಕ್ತರು ಸರ್ಕಾರಿ ಜಾಗಗಳಿಗೆ ನಮೂನೆ□3 ಬಿ ಖಾತಾ ನೀಡಿರುವುದು ಕಾನೂನುಬಾಹಿರವಾಗಿದೆ ಎಂದು ಅವರು ಆರೋಪಿಸಿದರು.

ಆದ್ದರಿಂದ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ, ಸರ್ಕಾರಿ ಜಾಗಗಳಿಗೆ ಅನಧಿಕೃತವಾಗಿ ಖಾತಾ ನೀಡಿದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಡಳಿತವನ್ನು ಆಗ್ರಹಿಸಿದರು.

# ಮಂಜುನಾಥಗೆ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿಯ ಕಿಷ್ಕಿಂದ ವಿಶ್ವವಿದ್ಯಾಲಯದ ಡೀನ್ ಸಂಶೋಧನೆ ಮತ್ತು ನಾವೀನ್ಯತೆ ಹಾಗೂ ಭೌತವಿಜ್ಞಾನದ ಪ್ರಾಧ್ಯಾಪಕ ಡಾ. ಮಂಜುನಾಥ ಎಸ್. ಇವರಿಗೆ ಉದಯೋನ್ಮುಖ ಅನ್ವೇಷಕ ಪ್ರಶಸ್ತಿಯನ್ನು ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ 7ನೇ ಮಾರ್ಚ್‌ದಂದು ಆಯೋಜಿಸಿದ್ದ ನ್ಯಾನೊವಿಜ್ಞಾನ ಮತ್ತು ನ್ಯಾನೊತಂತ್ರಜ್ಞಾನ ಹೊರಹೊಮ್ಮಿದ ಪ್ರವೃತ್ತಿಗಳು ಎನ್ನುವ ರಾಷ್ಟ್ರೀಯ ಸಮಾವೇಶದಲ್ಲಿ ನೀಡಿ ಗೌರವಿಸಲಾಯಿತು.

ಮಂಜುನಾಥರು ವಸ್ತುವಿಜ್ಞಾನದಲ್ಲಿ ಸಲ್ಲಿಸಿದ ಉದಯೋನುಖ ಕೊಡುಗೆಗಳಿಗೆ ಈ ಗೌರವಕ್ಕೆ ಭಾಜನರಾಗಿದ್ದಾರೆ. ಈ ಪ್ರಶಸ್ತಿಯನ್ನು ವಿಶ್ವವಿಖ್ಯಾತ ವಿಜ್ಞಾನಿ ಪ್ರೊ. ಸಬು ಥಾಮಸ್ ಅವರಿಂದ ನೀಡಲಾಗಿದ್ದು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯದ ಡಾ. ದಿನೇಶ್ ಕುಮಾರ್, ಸಮಾವೇಶದ ಸಂಚಾಲಕ ಪ್ರೊ. ವೈ.ಟಿ. ರವಿಕಿರಣ್, ಬೆಂಗಳೂರಿನ ಜವಾಹರಲಾಲ್ ಉನ್ನತ ವೈಜ್ಞಾನಿಕ ಸಂಶೋಧನಾ ಕೇಂದ್ರದ ವಿಜ್ಞಾನಿ ಪ್ರೊ. ಪ್ರತಾಪ್ ವಿಷ್ಣೋಯ್ ಉಪಸ್ಥಿತರಿದ್ದರು.

# ಹಲವು ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿವಾರ್ತೆ ಕುಕನೂರು

110/11 ಕೆ.ವಿ ಮಂಗಳೂರು ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಾಲ್ಕನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆ ಮಾರ್ಚ್ 13ರಂದು ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಹಲವು ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಮಂಗಳೂರು ವಿದ್ಯುತ್ ವಿತರಣಾ ಕೇಂದ್ರಕ್ಕೆ ಒಳಪಡುವ ಎಫ್ 12 ಕದ್ರಳ್ಳಿ ಐಪಿ, ಎಫ್ 2 ಮುತ್ತಾಳ ನಿರಂತರಜ್ಯೋತಿ, ಎಫ್ 3 ಬೇವೂರ ಐಪಿ, ಎಫ್ 10 ಚಂಡಿನಾಳ ಐಪಿ, ಎಫ್ 4 ಮಂಗಳೂರು ನಿರಂತರಜ್ಯೋತಿ, ಎಫ್ 5 ಕುದ್ರಿಮೋತಿ ಐಪಿ, ಎಫ್ 7 ನೆಲಜೇರಿ ಐಪಿ ಹಾಗೂ ಎಫ್ 8 ಬೈರನಾಯಕನಹಳ್ಳಿ ಐಪಿ ಫೀಡರ್‌ಗಳ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ.

ಮಂಗಳೂರು, ಕುದ್ರಿಮೋತಿ, ಬೈರನಾಯಕನಹಳ್ಳಿ, ಚಂಡಿನಾಳ, ಚಿಕ್ಕಬೀಡನಾಳ, ಹೀರೆಬೀಡನಾಳ, ಕದ್ರಳ್ಳಿ, ಹೋನ್ನೂರಸಿ, ಶಿರೂರು, ಅರಕೇರಿ, ನೆಲಜೇರಿ, ಮ್ಯಾದನೇರಿ, ಮುತ್ತಾಳ ಮತ್ತು ವಟಪರ್ವಿ ಸೇರಿದಂತೆ ಹಲವು ಗ್ರಾಮಗಳು ಇದರ ವ್ಯಾಪ್ತಿಗೆ ಬರುತ್ತವೆ.

ನಿರ್ವಹಣಾ ಕಾಮಗಾರಿ ಮುಕ್ತಾಯವಾದ ಕೂಡಲೇ ವಿದ್ಯುತ್ ಸರಬರಾಜು ಪುನರಾರಂಭಿಸಲಾಗುವುದು.

ಈ ಅವಧಿಯಲ್ಲಿ ಸಾರ್ವಜನಿಕರು ಯಾವುದೇ ರೀತಿಯ ದುರಸ್ತಿ ಕೆಲಸಗಳನ್ನು ಕೈಗೊಳ್ಳಬಾರದು ಎಂದು ಜೆಸ್ಕಾಂ ಅಧಿಕಾರಿಗಳು ಮನವಿ ಮಾಡಿದ್ದಾರೆ.

# ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2026–27ನೇ ಸಾಲಿನ ಮುಂಗಡ ಪತ್ರವನ್ನು ತಯಾರಿಸಲು ಮಾರ್ಚ್ 16ರ ಬೆಳಿಗ್ಗೆ 10.30 ಗಂಟೆಗೆ ಜೋನಲ್ 01ರ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ನೋಂದಾಯಿತ ಸ್ಥಳೀಯ ಕಲ್ಯಾಣ ಸಂಘ, ವ್ಯಾಪಾರ, ಉದ್ಯಮ ನಡೆಸುವ ಸಂಘ–ಸಂಸ್ಥೆಗಳು ಎನ್.ಜಿ.ಓ. ಸಂಘಗಳು ಸೇರಿದಂತೆ ಇತರೆ ಪ್ರಮುಖ ನಾಗರಿಕರು ಭಾಗಿಯಾಗಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನವನಗರದ ಯುನಿಟ್ 1ರಲ್ಲಿ ಬೃಹತ್ ವೇದಿಕೆ ನಿರ್ಮಾಣ

# ಸರಕಾರಿ ವೈದ್ಯಕೀಯ ಕಾಲೇಜಗೆ ಸಿಎಂ ಶಂಕುಸ್ಥಾಪನೆ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯ ಜನತೆಯ ಬಹು ವರ್ಷಗಳ ನಿರೀಕ್ಷೆಯಾಗಿದ್ದ ಸರಕಾರಿ ವೈದ್ಯಕೀಯ ಕಾಲೇಜ ನಿರ್ಮಾಣಕ್ಕೆ ಮಾರ್ಚ 14ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್.ಬಿ.ತಿಮ್ಮಾಪೂರ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಮುಖ್ಯಮಂತ್ರಿಗಳ ಕಾರ್ಯಕ್ರಮದ ಪೂರ್ವಭಾವಿ ಹಾಗೂ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನವನಗರದ ಯುನಿಟ್–1 ರಲ್ಲಿ ಬರುವ ಸೆಕ್ಟರ ನಂ.1 ಮತ್ತು 13 ರಲ್ಲಿ ಒಟ್ಟು 42 ಎಕರೆ ಜಮೀನಿನಲ್ಲಿ 450 ಕೋಟಿ ರೂ.ಗಳ ವೆಚ್ಚದ ಸರಕಾರಿ ವೈದ್ಯಕೀಯ ಕಾಲೇಜಿನ ಕಟ್ಟಡ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದು, ಇದರ ಜೊತೆಗೆ ಕೃಷ್ಣಾಮೇಲ್ದಂಡೆ ಯೋಜನೆ ಹಂತ–3ರ ಭೂಸ್ವಾಧೀನಕ್ಕೆ ಒಳಪಡುವ ಜಮೀನುಗಳಿಗೆ ಒಪ್ಪಂದದ ದರದಂತೆ ಪರಿಹಾರ ವಿತರಣೆಗೆ ಚಾಲನೆ ನೀಡಲಿದ್ದಾರೆಂದು ತಿಳಿಸಿದರು.

ಶಂಕುಸ್ಥಾಪನೆ ಸಮಾರಂಭದ ಘನ ಉಪಸ್ಥಿತಿಯನ್ನು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂ ವಹಿಸಲಿದ್ದು, ಸಚಿವರಾದ ಎಚ್.ಕೆ.ಪಾಟೀಲ, ರಾಮಲಿಂಗಾರೆಡ್ಡಿ, ಎಂ.ಬಿ.ಪಾಟೀಲ, ದಿನೇಶ ಗುಂಡೂರಾವ್, ಡಾ.ಎಚ್.ಸಿ.ಮಹದೇವಪ್ಪ, ಸತೀಶ ಜಾರಕಿಹೊಳೆ, ಪ್ರಿಯಾಂಕ ಖರ್ಗೆ, ಶಿವಾನಂದ ಪಾಟೀಲ, ಜಮೀರ ಅಹ್ಮದಖಾನ್, ಡಾ.ಶರಣಪ್ರಕಾಶ ಪಾಟೀಲ ಹಾಗೂ ಭೈರತಿ ಸುರೇಶ ಗೌರವ ಉಪಸ್ಥಿತಿಯಲ್ಲಿ ಇರುವರು.

ಮುಖ್ಯಅತಿಥಿಗಳಾಗಿ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಕರ್ನಾಟಕ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ

ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ದಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಕಾಗವಾಡದ ಶಾಸಕ ಹಾಗೂ ವಾ.ಕ.ರ.ಸಾ ಸಂಸ್ಥೆಯ ಅಧ್ಯಕ್ಷ ಭರಮಗೌಡ ಕಾಗೆ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯ ಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ

ಜಿಲ್ಲೆಯ ಎಲ್ಲ ವಿಧಾನ ಸಭೆ ಹಾಗೂ ವಿಧಾನ ಪರಿಷತ್ತಿನ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆಂದು ತಿಳಿಸಿದರು.

ಕಾರ್ಯಕ್ರಮ ಯಶಸ್ವಿ ಆಯೋಜನೆಗಾಗಿ ಕೈಗೊಳ್ಳಬೇಕಾದ ವ್ಯವಸ್ಥೆಗಳ ಕುರಿತು ವಿವರವಾಗಿ ಚರ್ಚಿಸಿದರು. ಶಂಕುಸ್ಥಾಪನೆ ಸಮಾರಂಭಕ್ಕೆ 25 ಸಾವಿರಕ್ಕೂ ಹೆಚ್ಚು ಜನ ಭಾಗವಹಿಸುವ ನಿರೀಕ್ಷೆ ಇದ್ದು, ನವನಗರದ ಯುನಿಟ್–1ರ ಸೆಕ್ಟರ ನಂ.1ರಲ್ಲಿ ವಿಶಾಲವಾದ ವೇದಿಕೆ ಹಾಗೂ ಸಂಭಾಂಗಣ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ಕಾರ್ಯಕ್ರಮದ ಸ್ಥಳದಲ್ಲಿ ಕುಡಿಯುವ ನೀರು, ಪಾರ್ಕಿಂಗ್ ವ್ಯವಸ್ಥೆ, ಭದ್ರತೆ ಹಾಗೂ ಗಣ್ಯವ್ಯಕ್ತಿಗಳಿಗೆ ಪ್ರತ್ಯೇಕ ಆಸನಗಳ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಕಾರ್ಯಕ್ರಮಕ್ಕೆ ಆಗಮಿಸುವ ವಿವಿಧ ಯೋಜನೆಗಳ ಫಲಾನುಭವಿಗಳಿಗೆ 215 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದಿರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಯುಕೆಪಿ ಮಹಾವ್ಯವಸ್ಥಾಪಕ ಗಜಾನನ ಬಾಲೆ, ಅಪರ ಜಿಲ್ಲಾಧಿಕಾರಿ

ಅಶೋಕ ತೇಲಿ, ವೈದ್ಯಕೀಯ ಮಹಾವಿದ್ಯಾಲಯದ ವಿಶೇಷಾಧಿಕಾರಿ ಡಾ.ಬಿ.ಎಚ್.ನಾರಾಯಣಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಹಶೀಲ್ದಾರರು ಉಪಸ್ಥಿತರಿದ್ದರು.

# ಅಡುಗೆ ಅನಿಲ ಕೊರತೆ; ಸಂಸದರು ಸಂಸತ್ತಿನಲ್ಲಿ

## ಮಾತನಾಡಿ ನ್ಯಾಯ ಒದಗಿಸಲಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



"ಬೇರೆ ವಿಚಾರಗಳಲ್ಲಿ ಮಾತನಾಡುವ ಸಂಸದರು ಅಡುಗೆ ಅನಿಲ ಕೊರತೆ ವಿಚಾರವಾಗಿ ಸಂಸತ್ತಿನಲ್ಲಿ ಮಾತನಾಡಬೇಕು. ರಾಜ್ಯಕ್ಕೆ ನ್ಯಾಯ ಒದಗಿಸಿಕೊಡಬೇಕು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು.

"ಅಡುಗೆ ಅನಿಲ್ ಸಿಲಿಂಡರ್ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿದೆ. ಈ ವಿಚಾರವಾಗಿ ಬಿಜೆಪಿಯ ಯಾವುದೇ ಸಂಸದರು ಬಾಯಿ ಬಿಡುತ್ತಿಲ್ಲ. ಹಳ್ಳಿ ಜನರು, ರೈತರು ಹಾಗೂ ಹೊಟೇಲ್ ಗಳಿಗೆ ಸೌದೆ ಒಲೆ ಬಳಸಲು ಕಟ್ಟಿಗೆ ಬಳಸಿಕೊಳ್ಳಲು ಅವಕಾಶ ನೀಡುವುದಿಲ್ಲ" ಎಂದರು.

"ಈ ಇಂಧನ ಬೆಲೆ ಏರಿಕೆಯಿಂದ ಜನ ಪರದಾಡುತ್ತಿದ್ದಾರೆ. ಇದರಲ್ಲಿ ರಾಜ್ಯ ಸರ್ಕಾರ ಏನೂ ಮಾಡಲು ಆಗುವುದಿಲ್ಲ. ಕೇಂದ್ರ ಸರ್ಕಾರ ಇದಕ್ಕೆ ಹೊಣೆ. ಕೇಂದ್ರ ಸರ್ಕಾರ ವಿದೇಶಾಂಗ ನೀತಿ ಬಗ್ಗೆ ಸ್ಪಷ್ಟವಾಗಿ ಮಾತನಾಡುತ್ತಿಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಈ ವಿಚಾರದಲ್ಲಿ ಕೇಂದ್ರದ ಧೋರಣೆ ಖಂಡನೀಯ. ನಾಗರಕರಿಗೆ ಅನುಕೂಲವಾಗುವಂತೆ ಕೇಂದ್ರ ಸರ್ಕಾರ ನೋಡಿಕೊಳ್ಳಬೇಕು. ಮುಂದೆ ಪರಿಸ್ಥಿತಿ ಹೇಗಿರುತ್ತದೆಯೋ ಹೇಗೋ ಈಗಾಗಲೇ ಗ್ಯಾಸ್ ಚಾಲಿತ ಆಟೋ ಬಂದ್ ಆಗಿದ್ದು, ಸಮಸ್ಯೆ ಹೆಚ್ಚುತ್ತಿದೆ" ಎಂದು ತಿಳಿಸಿದರು.

# ವಿಭಿನ್ನ ರೀತಿಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ: ಮಮತಾ ರಾಯರೆಡ್ಡಿ



• ಮಲ್ಲಮ್ಮ ನುಡಿ ವಾರ್ತೆ ಕುಕುನೂರು

ಮಹಿಳೆಯರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ವಿಭಿನ್ನವಾದ ರೀತಿಯಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಯೋಜಿಸಲಾಗಿದೆ ಎಂದು ಆರಾಮ್ ಏನ್ ಜೀವ ಸಂಸ್ಥೆಯ ಅಧ್ಯಕ್ಷರಾದ ಮಮತಾ ರಾಯರೆಡ್ಡಿ ಅವರು ಹೇಳಿದರು.

ಪಟ್ಟಣದಐಬಿಯಲ್ಲಿಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು . ಕೊಪ್ಪಳ ಜಿಲ್ಲಾ ಹಾಗೂ ತಾಲೂಕ ವಿಧಾನಸಭಾ ಮಹಿಳಾ ಕಾಂಗ್ರೆಸ್ ಹಾಗೂ ತಮ್ಮ ಫೌಂಡೇಶನ್ ಸಂಯೋಗದಲ್ಲಿ ಈ ಕಾರ್ಯಕ್ರಮವನ್ನು ಪಟ್ಟಣದ ಹೊರ ವಲಯದಲ್ಲಿರುವ ಬಿವಿ ಶೆಟ್ಟರ್ ಮಂಗಳ ಭವನದಲ್ಲಿ ಮಾರ್ಚ್ 14ರಂದು ನಡೆಸಲಾಗುತ್ತದೆ ಎಂದರು. ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಮಣಿಗಳನ್ನು ಕೊಪ್ಪಳ ಶ್ರೀರತ್ನ ಪ್ರಶಸ್ತಿ ನೀಡಿ ಗೌರವಿಸುವ ಮೂಲಕ ಅವರ ಸಾಧನೆಗೆ ಪ್ರೇರಣೆ ನೀಡಲಾಗುವುದು ಎಂದರು. ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಎಂದರೆ ಮಹಿಳೆಯರ ಸಾಧನೆಯನ್ನು ಬರೀ ಮಾತಿನಲ್ಲಿ ಹೊಗಳದೆ ಸಾಧನೆಗೆ ತಕ್ಕಂತೆ, ಜಿಲ್ಲೆ ರಾಜ್ಯ ಹಾಗೂ ರಾಷ್ಟಮಟ್ಟದಲ್ಲಿ ಅವರನ್ನು ಗುರುತಿಸುವಂತೆ ಪ್ರೋತ್ಸಾಹ ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ಹಾಗೂ ಮಹಿಳಾ ರಕ್ಷಣೆ ತಂಡದವರಿಗೆ, ಮಾನಸಿಕ ಚಟುವಟಿಕೆ ಕುರಿತು ಕಾರ್ಯಕ್ರಮಗಳನ್ನು ಆಚರಿಸಲಾಗುವುದು. ಹದಿನಾರು ವರ್ಷದ ಒಳಗಿನ ಮಕ್ಕಳಿಗೆ ಸೋಶಿಯಲ್ ಮೀಡಿಯಾವನ್ನು ದೂರ ಇಡಬೇಕು ಎನ್ನುವ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ವಿಚಾರಧಾರೆಗಳು ಅತ್ಯಂತ ಸೂಕ್ತವಾಗಿದ್ದು, ನಮ್ಮ ಫೌಂಡೇಶನ್ ವತಿಯಿಂದ ಆ ನಿಟ್ಟಿನಲ್ಲಿ ಮಹಿಳೆಯರಲ್ಲಿ ಜಾಗೃತಿ ಮೂಡಿಸಲಾಗುವುದು ಎಂದರು. ಕೊಪ್ಪಳ ಜಿಲ್ಲೆಯ ಕಿನ್ನಾಳ ಗ್ರಾಮದ ಹಲವು ಕರಕುಶಲತೆಗೆ ಹೆಸರಾಗಿದೆ, ಕಲೆಯನ್ನು ದೇಶದಾದ್ಯಂತ ಬೆಳಕಿಗೆ ತರುವ ಉದ್ದೇಶ ಹೊಂದಿದ್ದು, ಕಾರ್ಯಕ್ರಮದಲ್ಲಿ ಕಿನ್ನಾಳ ಕರಕುಶಲದ ವಸ್ತುಗಳ ಮಾರಾಟಮಳಿಗೆಗಳನ್ನು ಏರ್ಪಡಿಸಲಾಗುವುದು ಎಂದು ತಿಳಿಸಿದರು. ವಿಶೇಷವಾಗಿ ಮಹಿಳಾ ಕಾರ್ಯಕ್ರಮ ಆಗಿರುವುದರಿಂದ ಜಿಲ್ಲೆಯಾದ್ಯಂತ ಮಹಿಳೆಯರು ಭಾಗವಹಿಸುವ

ಮೂಲಕ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಸಾವಿತ್ರಿ ಗೊಲ್ಲರ್,

ಕುಕನೂರು ತಾಲೂಕ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಫರೀದಾ ಬೇಗಂ ತಂಬಾಕದಾರ, ನಂದಿತಾ ದಾನರೆಡ್ಡಿ, ಪೂರ್ಣಿಮಾ ಸಸಿಮಠ ಇದ್ದರು.

# ಸರ್ಕಾರಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಪ್ರೋತ್ಸಾಹ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ನಗರದ ಇತಿಹಾಸವುಳ್ಳ ಸರ್ಕಾರಿ ಹಿರಿಯ ಪ್ರಾಥಮಿಕ ಬಾಲಕರ ಶಾಲೆ 2026–27 ನೇ ಶೈಕ್ಷಣಿಕ ಸಾಲಿನ ದಾಖಲಾತಿ ಆರಂಭ ಕುರಿತು ಹುಣಸೂರು ನಗರದ ಪ್ರತಿಷ್ಠಿತ ಸರ್ಕಾರಿ ಶಾಲೆ ಎಚ್ ಬಿ ಬಿ ಎಸ್ ನಲ್ಲಿ 2026–27 ನೇ ಸಾಲಿನ ಪ್ರವೇಶ ಪತ್ರ ಬಿಡುಗಡೆಗೊಳಿಸಿ ಹಾಗೂ ಪ್ರಾರಂಭವಾಗಿದ್ದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಕರವೇ ಜಿಲ್ಲಾಧ್ಯಕ್ಷ ಪುರುಷೋತ್ತಮ್ ತಿಳಿಸಿದ್ದಾರೆ

ನಗರದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕರೆಯಲಾಗಿದೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ನಾವು ಈ ಶಾಲೆಯನ್ನು ದತ್ತು ತೆಗೆದು–ಕೊಂಡು ಶಾಲೆಗೆ ಭೌತಿಕವಾಗಿ ಹಾಗೆ ಶೈಕ್ಷಣಿಕವಾಗಿ ಅಭಿವೃದ್ಧಿಪಡಿಸಲು ಶ್ರಮಪಡುತಿದ್ದು ಹಾಗೇ ಮೂಲಭೂತ ವ್ಯವಸ್ಥೆಗಳನ್ನು ನೀಡುತ್ತಾ ಹುಣಸೂರಿನ ಮಧ್ಯಮ ಮತ್ತು ಬಡವರ್ಗದ ಪೋಷಕರಿಗೆ ಮುಂದಿನ ದಿನಮಾನಗಳಲ್ಲಿ ಆರ್ಥಿಕವಾಗಿ ಹೊರೆಯಾಗುತ್ತಿದ್ದ ಶಿಕ್ಷಣವನ್ನು ಹಾಗೇ ಖಾಸಗಿ ವ್ಯವಸ್ಥೆಯ ಶಿಕ್ಷಣದ ಮಾದರಿ ಶಿಕ್ಷಣ ನೀಡಲು ಬಳಲಿದ ಪೋಷಕರ ಮನವೊಲಿಸಿ ಶಾಲೆಯ ದಾಖಲಾತಿ ಹೆಚ್ಚಿಸಿದ್ದು ನಮ್ಮ ಈ ಶಾಲೆಯಾದ ಸರ್ಕಾರಿ ಶಾಲೆಯಲ್ಲಿಯೇ ಗುಣಮಟ್ಟದ ಶಿಕ್ಷಣ ನೀಡಲು ಅಗತ್ಯ ನೆರುವು ನೀಡುತ್ತಾ ಬಂದಿದ್ದೇವೆ


ಇದರಿಂದ ಮೊದಲ ವರ್ಷದ 2023–24ರಲ್ಲಿ 386 ಮಕ್ಕಳು 2024–25 ರಲ್ಲಿ 314 ಹಾಗೆ 2025–26ರಲ್ಲಿ 635ಮಕ್ಕಳು ಕಲಿಯುತ್ತಿದ್ದು ವರ್ಷದಿಂದ ವರ್ಷಕ್ಕೆ ಈ ಶಾಲೆಗೆ ಬೇಡಿಕೆ ಹೆಚ್ಚಾಗುತ್ತಿದೆ, ಹಾಗೆ ಇಲ್ಲಿನ ಶಿಕ್ಷಕರು ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು ಎಲ್ಕೆಜಿ

ಯುಕೆಜಿ ಶಿಕ್ಷಣವನ್ನು ಆರಂಭಿಸಿ ಯಶಸ್ವಿಯಾಗಿ 4ನೇ ವರ್ಷಕ್ಕೆ ಕಾಲಿಟ್ಟಿದ್ದೇವೆ ಪೋಷಕರಿಗೆ ಅಗತ್ಯ–ಕ್ಕೆ ತಕ್ಕಂತೆ ಕನ್ನಡದ ಜೊತೆಗೆ ಆಂಗ್ಲ ಮಾಧ್ಯಮದ ಶಿಕ್ಷಣವನ್ನು ಆರಂಭಿಸಿದ್ದೇವೆ

ಎನ್ ಸಿ ಇ ಆರ್ ಟಿ ರಾಷ್ಟ್ರೀಯ ಪಠ್ಯಕ್ರಮದ ಶಿಕ್ಷಣವೂ ಸಹ ಕಲಿಕೆಯ ಭಾಗವಾಗಿ ಈ ಕೂಡ ನಮ್ಮಲ್ಲಿ ಲಭ್ಯವಿರುತ್ತದೆ...ಹಾಗೇ ಈ ಕೆಳಕಂಡ ನೂತನ ಕಲಿಕಾ ಸೌಲಭ್ಯವೂ ಸಹ ನಮ್ಮಲ್ಲಿ ಈಗಾಗಲೇ ಜಾರಿಯಲ್ಲಿದೆ ಎಂದರು

ಸುದ್ದಿಗೋಷ್ಠಿಯಲ್ಲಿ ತಾಲೂಕಿನ ಉಪಾಧ್ಯಕ್ಷರಾದ ಬಾಲರಾಂ ನಗರ ಅಧ್ಯಕ್ಷರಾದ ಮನೋಹರ್ ಪಾಷಾ ಪ್ರಧಾನ ಕಾರ್ಯದರ್ಶಿಯಾದ ಗಿರೀಶ್ ಖಜಾಂಚಿ ರಮೇಶ್ ಹಿರಿಯ ಪತ್ರಕರ್ತರಾದ ಎಚ್ ಕೆ ಕೃಷ್ಣ ಹಾಜರಿದ್ದರು

# ಮಾರುಕಟ್ಟೆಯಲ್ಲಿ ಕುಸಿದ ತೊಗರಿ ದರ: ಖರೀದಿ ಕೇಂದ್ರದತ್ತ ದಾವಿಸಿದ ರೈತರು



• ಸುರೇಶ ಕೆ.ವಿ ಮಲ್ಲಮ್ಮ ನುಡಿ ವಾರ್ತೆ ಮುದಗಲ್ಲ

ಮುಂಗಾರು ಹಂಗಾಮಿನಲ್ಲಿ ಬೆಳೆದ ತೊಗರಿಗೆ ಧೀಡಿರನೆ ಮಾರುಕಟ್ಟೆಯಲ್ಲಿ ದರ ಕುಸಿದ ಪರಿಣಾಮ ರೈತರಲ್ಲಿ ಆತಂಕ ಮನೆಮಾಡಿದೆ.

ಕೃಷಿ ಇಲಾಖೆಯ ವರದಿಯ ಪ್ರಕಾರ ಮಳೆಯಾಧಾರಿತ ಖುಷ್ಕ ಭೂಮಿಯಲ್ಲಿ ತಾಲೂಕಿನಲ್ಲಿ 22050 ಹೆಕ್ಟೇರ್, ನೀರಾವರಿಯಲ್ಲಿ 4830 ಹೆಕ್ಟೇರ್ ಪ್ರದೇಶದಲ್ಲಿ ತೊಗರಿ ಬಿತ್ತನೆ ಗುರಿ ಹೊಂದಲಾಗಿತ್ತು. ರೈತರು ಗುರಿ ಮೀರಿ ಬಿತ್ತನೆ ಮಾಡಿದ್ದು ಖುಷ್ಕಿಯಲ್ಲಿ 30625 ಹೆಕ್ಟರ್, ನೀರಾವರಿ ಪ್ರದೇಶದಲ್ಲಿ 4070 ಹೆಕ್ಟೇರ್ ಪ್ರದೇಶ ಸೇರಿ 34695 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಿದ್ದಾರೆ.

ಉತ್ತಮಮಳೆಯಾಗಿದ್ದರಿಂದ ಉತ್ತಮ ಇಳುವರಿ ಬಂದಿದೆ ಎನ್ನಲಾಗಿದೆ. ಡಿಸೆಂಬರ–ಜನೆವರಿಯಲ್ಲಿ ರಾಶಿಮಾಡಿದ ರೈತರು ಆಗ ಮಾರುಕಟ್ಟೆಯಲ್ಲಿ ಪ್ರತಿಕ್ವಂಟಲ್ ತೋಗರಿಗೆ 7ಸಾವಿರ ರೂ. ಇದ್ದ ಕಾರಣ ಕನಿಷ್ಠ ಬೆಂಬಲ ಬೆಲೆಯಡಿ ಖರೀದಿಸಲು ರಾಜ್ಯ ಕೃಷಿ ಮಾರಾಟ ಮಂಡಳಿ ಪ್ರತಿ ಕ್ವಿಂಟಲ್‌ಗೆ 8200ರೂ. ನಿಗದಿಪಡಿಸಿತ್ತು. ಆದರೆ ಜನೆವರಿ ಮಧ್ಯದಲ್ಲಿ ಪ್ರತಿ ಕ್ವಿಂಟಲ್ ತೊಗರಿಗೆ 9000 ದಿಂದ 9200ರೂ. ದರ ಏರಿಕೆಯಾಗಿದ್ದ–ರಿಂದ ಸರಕಾರ ತೆರೆದ ಖರೀದಿ ಕೇಂದ್ರದ ಕಡೆ ಸೂಳಿಯದ ರೈತರು ಎಪಿಎಂಸಿಗಳಲ್ಲಿ ಮಾರಾಟ ಮಾಡಲು ಮುಂದಾಗಿದ್ದರು. ನಾಗಲಾಪೂರ, ಮೆದಕನಾಳ, ಮಟ್ಟೂರ, ಮುದಗಲ್ಲ, ಆಮದಿಹಾಳ ಸೇರಿದಂತೆ ವಿವೀದಡೆ ತೆರೆಯಲಾಗಿದ್ದ ತೊಗರಿ ಖರೀದಿ ಕೇಂದ್ರದಲ್ಲಿ ತೊಗರಿ ಮಾರಾಟ ಮಾಡಿದ್ದ ರೈತರು ತಮ್ಮ ತೊಗರಿಯನ್ನು ಹಿಂಪಡೆಯಲು ಖರೀದಿ ಕೇಂದ್ರದ ಅಧಿಕಾರಿಗಳಿಗೆ

ಪಿಡಿಸಲು ಮುಂದಾಗಿ ಮಾರುಕಟ್ಟೆಯಲ್ಲಿ 9200ರಿಂದ 9500ರೂ. ದರಕ್ಕೆ ಮರಾಟ ಮಾಡಿದರು. ಆದರೆ ಫೇಬ್ರವರಿಯಲ್ಲಿ 8000ರೂ.ಗೆ ನಿಂತಿದ್ದ ದರ ಪುನಃ ಏರಲೆ ಇಲ್ಲ ಇನ್ನು ಹೆಚ್ಚಿನ ದರಕ್ಕಾಗಿ ಮನೆಯಲ್ಲಿಯೇ ತೊಗರಿ ಸಂಗ್ರಹಮಾಡಿ ಕೊಂಡು ಕಾಯುತ್ತಿದ್ದವರು ಈಗ ಅನಿವಾರ್ಯವಾಗಿ ಖರೀದಿ ಕೇಂದ್ರಗಳಿಗೆ ತಂದು ತೂಕ ಮಾಡಿಸಲು ಮುಂದಾಗಿದ್ದಾರೆ..

ಆರಂಭದಲ್ಲಿ ಆರಂಬದಲು 9000 ದಿಂದ 95000ವರೆಗೆ ತೊಗರಿ ಖರೀದಿಸಿದ್ದೆನೆ.


ಆದರೆ ಈಗ ತೊಗರಿ ದರ ಪಾತಾಳಕ್ಕೆ ಕುಸಿದ ಕಾರಣ ವರ್ತಕರಿಗೂ ನಷ್ಟವಾಗಿದೆ. ಪ್ರಭುಗೌಡ ಎಪಿಎಂಸಿ ವರ್ತಕ ಮುದಗಲ್ಲ. ಮೆದಿಕಿನಾಳ ಖರೀದಿ ಕೇಂದ್ರದಲ್ಲಿ, 7ದಿನಗಳಿಂದ ಒಟ್ಟು 2250ಕ್ವಿಂಟಲ್ ತೋಗರಿ ಖರೀದಿ ಮಾಡಲಾಗಿದೆ. ಇನ್ನೂ ರೈತರು ತೊಗರಿ ಮಾರಾಟಕ್ಕೆ ತರುತ್ತಿದ್ದಾರೆ.

ಬಸವರಾಜ ಮ್ಯಾನೇಜರ್ ವಿಎಸ್‌ಎಸ್‌ಎನ್ ಬ್ಯಾಂಕ್ ಮೆದಕಿನಾಳ.

(ತೊಗರಿಗೆ ಉತ್ತಮ ದರ ಬರುತ್ತದೆ ಎಂಬ ನಿರೀಕ್ಷೆ ಇತ್ತು ಆದರೆ ಕಳೆದ ಎರಡು ತಿಂಗಳಿಂದ ಮಾರುಕಟ್ಟೆಯಲ್ಲಿ ಯಾವುದೇ ವೆತ್ಯಸ ಕಂಡಿಲ್ಲ. ಶಂಕ್ರಪ್ಪ ತೊಗರಿ ಬೆಳೆದ ರೈತ ದೆಸಾಯಿ ಭೋಗಾಪೂರ ತಾಂಡಾ) ಮುದಗಲ್ಲ: ಮೆದಿಕಿನಾಳ ವಿಎಸ್‌ಎಸ್‌ಎನ್ ಬ್ಯಾಂಕಿನಲ್ಲಿ ತೆ–ರದ ತೊಗರಿ ಖರೀದಿ ಕೇಂದ್ರದಲ್ಲಿ ರೈತರು ಮಾರಾಟ ಮಾಡಲು ಮುಂದಾಗಿರುವುದು.

# ಗರ್ಭ ಕಂಠದ ಕ್ಯಾನ್ಸರ್ ತಡೆಗಟ್ಟಲು ಇಂದೇ ಎಚ್ ಪಿ ವಿ ವ್ಯಾಕ್ಸಿನ್ ತಪ್ಪದೇ ಹಾಕಿಸಿಕೋಳ್ಳಿ

• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು



ಭಾರತ ಸರ್ಕಾರ ಕರ್ನಾಟಕ ಸರ್ಕಾರ, ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾಡಳಿತ ಜಿಲ್ಲಾ ಪಂಚಾಯತ್–ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆರ್ ಸಿ ಹೆಚ್. ಅಧಿ ಕಾರಿಗಳ ಕಾರ್ಯಾಲಯ ಬಳ್ಳಾರಿ. ತಾಲೂಕು ಪಂಚಾ ಯತ್ ಕುರುಗೋಡು, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಕುರುಗೋಡು, ಪುರಸಭೆ ಕಾರ್ಯಾಲಯ ಕುರುಗೋಡು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮುದಾಯ ಆರೋಗ್ಯ ಕೇಂದ್ರ ಕುರುಗೋಡು ವತಿಯಿಂದ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಗರ್ಭ ಕಂಠ ಕ್ಯಾನ್ಸರ್ ಕುರಿತು ಬುಧವಾರ ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು.

ಎಚ್ ಪಿವಿ ಲಸಿಕಾ ಅಭಿಯಾನ ಚಾಲನ ಕಾರ್ಯ –2026–– 110 ಪ್ರಸೂತಿ ರೋಗ ತಜ್ಞೆ, ವೈದ್ಯಾಧಿಕಾರಿಗಳಾದ ಆಶೀಯ ಭಾನು ರವರು ಮತ್ತು ಮಕ್ಕಳ ತಜ್ಞ ವೈದ್ಯಾಧಿಕಾರಿಗಳಾದ ರೋಹಿಣಿರವರು ಸಾಂಕೇತಿಕವಾಗಿ ಚಾಲನೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಎಚ್ ಪಿ ಎ ವ್ಯಾಕ್ಸಿನ್ ಮಹತ್ವದ್ದಾಗಿದ್ದು ನಮ್ಮ ಹೆಣ್ಣು ಮಕ್ಕಳ ಆರೋಗ್ಯ–ನಾಡಿನ ಸುಭದ್ರ ಭವಿಷ್ಯ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಇಂದೇ ವ್ಯಾಕ್ಸಿನ್ ಪಡೆದುಕೊಳ್ಳಿ, ಕ್ಯಾನ್ಸರ್ ಬಗ್ಗೆ ಭಯ ಬೇಡ, ಎಚ್ಚರಿಕೆ ಅಗತ್ಯ. 11 ವರ್ಷದ ಎಲ್ಲಾ ಹೆಣ್ಣು ಮಕ್ಕಳಿಗೆ. ಜಿಲ್ಲೆಯ ಎಲ್ಲಾ ಸರ್ಕಾರಿ ಆರೋಗ್ಯ ಸಂಸ್ಥೆಗಳು ಮತ್ತು ಆಸ್ಪತ್ರೆಗಳಲ್ಲಿ, ಗರ್ಭಕಂಠದ ಕ್ಯಾನ್ಸರ್ (ಅಜಡಿತು–ಛಿಚಿಟ ಅಚಿಟಿಛಿಜಡಿ) ನಿಂದ ರಕ್ಷಣೆ ಪಡೆಯಲು. ಸೂಕ್ತ ಗುರುತಿನ ಚೀಟಿ ಅಥವಾ ದಾಖಲೆಗಳೊಂದಿಗೆ ಭೇಟಿ ನೀಡಿ ಚುಚ್ಚುಮದ್ದು ಪಡೆಯಲು ತಿಳಿಸಿದರು.

ದೇಶದ ಭಾಗ್ಯ – ಊಕಗಿ ಲಸಿಕೆ ಪಡೆಯುವುದು ಪ್ರತಿಯೊಬ್ಬರ ಹಕ್ಕು, ಮುನ್ನೆಚ್ಚರಿಕೆ ಎಂಬುದು ಮದ್ದಿಗಿಂತ , . ಸುರಕ್ಷಿತ ಲಸಿಕೆ, ಸುಂದರ ಭವಿಷ್ಯ ನಮ್ಮ ಹೆಣ್ಣುಮಕ್ಕಳ ಆರೋಗ್ಯ ನಮ್ಮ ಆದ್ಯತೆ. ಎಂಬ ಭಿತ್ತಿ ಪತ್ರಗಳನ್ನು ಪ್ರದರ್ಶನ ಮಾಡಲಾಯಿತು. ಇನ್ನೂ ಇದೇ ವೇಳೆ ಸ್ಫೂರ್ತಿದಾಯಕ ಘೋಷಣೆಗಳಾದ ಕ್ಯಾನ್ಸರ್ ಮುಕ್ತ ನಾಳೆಗಾಗಿ. ಇಂದೇ ಇರಲಿ ಲಸಿಕೆಯ ಸುರಕ್ಷೆ, ಹೆಣ್ಣು ಮಗುವಿನ ಆರೋಗ್ಯ ಬಗ್ಗೆ ನಮ್ಮ ಆದ್ಯತೆ ಎಂದು ಬಿತ್ತಿ ಪತ್ರ ಪ್ರದರ್ಶನ ಮಾಡಲಾಯಿತು.

ಈ ಸಂದರ್ಭದಲ್ಲಿ ಸ್ತ್ರೀ ಮತ್ತು ಪ್ರಸೂತಿ ರೋಗ ತಜ್ಞ ವೈದ್ಯಾಧಿಕಾರಿ ಆಶಿಯ ಭಾನು, ಮಕ್ಕಳ ತಜ್ಞ ವೈದ್ಯಾಧಿಕಾರಿ ರೋಹಿಣಿ, ಶುಶೂಷಣಾಧಿಕಾರಿ ಮಂಜುಳಾ ಬಂಡಿ, ಔಷಧ ತಜ್ಞ ಅಧಿಕಾರಿ ಶೇಷಗಿರಿ ದಾನಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕೆ. . ಎನ್ ಸಿಡಿ ಶುಶೂಷಣಾಧಿಕಾರಿ ಕುಮಾರಿ ಅಶ್ವಿನಿ, ಡಾಟಾ ಎಂಟ್ರಿ ಆಪರೇಟರ್ ಶ್ವೇತಾ, ಆರ್ ಕೆ ಎಸ್ ಕೆ ಹದಿಹರೆಯದವರ ಸ್ನೇಹಿ ಆರೋಗ್ಯ ಕೇಂದ್ರ ಸ್ನೇಹಾಕ್ಲಿನಿಕ್ ಆಪ್ತ ಸಮಾಲೋಚಕರಾದ ಮೆಹಬೂಬ್ ಭಾಷಾ, ಆಶಾ ಕಾರ್ಯಕರ್ತರಾದ ಶ್ರೀಮತಿ ಉಮಾದೇವಿ ಮತ್ತು ಶ್ರೀಮತಿ ರಾಜೇಶ್ವರಿ. ಶಾಲೆಯ ವಿದ್ಯಾರ್ಥಿನಿಯರು ಮತ್ತು ವಿದ್ಯಾರ್ಥಿನಿ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

## ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ



**ಹಗರಿಬೊಮ್ಮನಹಳ್ಳಿ:** ಜನರ ಸೇವೆ ಜನಾರ್ದನ ಸೇವೆ ಎಂದು ಭಾವಿಸಿ, ಸೂರ್ಯೋದಯ ಮುಂಚಿತವಾಗಿ ಸ್ವಚ್ಛ ಕೆಲಸಗಳಲ್ಲಿ ನಿರತರಾಗಿ, ಜನರ ಆರೋಗ್ಯ ಕಾಪಾಡುವ ಪೌರಕಾರ್ಮಿಕರಿಗೆ ಆರೋಗ್ಯ ತಪಾಷಣೆ ನಡೆಸಲಾಯಿತು. ಗುರುವಾರ ಹಗರಿಬೊಮ್ಮನಹಳ್ಳಿ ತಾಲೂಕ ಆಸ್ಪತ್ರೆಯಲ್ಲಿ ಪೌರಕಾರ್ಮಿಕರಿಗೆ ಆರೋಗ್ಯ ತಪಾಷಣ ನಡಿಸಲಾಯಿತು. ಈ ಸಂದರ್ಭದಲ್ಲಿ ಸ್ಥಾನಿಕ ಪುರಸಭೆ ಪೌರಕಾರ್ಮಿಕರ ಸೂಪರ್ವೈಸರ್ ಹಾಗೂ ರಾಜ್ಯ ಪೌರ ನೌಕರರ ಸಂಘ ರಾಜ್ಯದ್ಯಕ್ಷ ಕೆ ಪ್ರಭಾಕರ್ ಮಾತನಾಡಿ, ಪೌರಕಾರ್ಮಿಕರು ಆರೋಗ್ಯವನ್ನು ನಿರ್ಲಕ್ಷಿಸಿದೆ ಕಾಪಾಡಿಕೊಳ್ಳಬೇಕು. ಕೆಲಸ ಒತ್ತಡಗಳಿಗೆ ತಮ್ಮ ಆರೋಗ್ಯದ ಬಗ್ಗೆ ಗಮನ ಕೊಡದೆ ಅನಾರೋಗ್ಯಕ್ಕೆ ಒಳಗಾಗಬಾರದು. ನಮಗಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ತಪಾಸಣೆ ಮಾಡಿ ಔಷಧಗಳು ಕೊಡ್ತಾ ಇದ್ದಾರೆ. ಕಾರ್ಮಿಕರು ಸದುಪಯೋಗ ಕೊಡಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಪುರಸಭೆ ಹೆಲ್ತ್ ಇನ್ಸ್ಪೆಕ್ಟರ್ ಜಯಲಕ್ಷ್ಮಿ, ಆಸ್ಪತ್ರೆ ಸಿಬ್ಬಂದಿ, ಹಲವಾರು ಕಾರ್ಮಿಕರು ಭಾಗವಹಿಸಿದರು.

## ಸರಸ್ವತಿ ಪೂಜಾ ಸಮಾರಂಭ



**ಯಲಬುರ್ಗಾ:** ಮಕ್ಕಳಲ್ಲಿ ಶಿಕ್ಷಣ ಒಂದೇ ಇದ್ದರೆ ಸಾಲದು ಅದರ ಜೋತೆಗೆ, ಗುರು ಹಿರಿಯರಿಗೆ ಗೌರವಕೊಡಬೇಕು, ಉತ್ತಮ ಸಂಸ್ಕಾರ ಸಂಸ್ಕೃತಿ ಬೆಳೆಸಿಕೊಂಡು, ಪಾಲಕರಿಗೆ ಶಾಲೆಗೆ ಕೀರ್ತಿ ತರುವ ಕಾರ್ಯ ಮಾಡಬೇಕು ಎಂದು ನಿವೃತ್ತ ಶಿಕ್ಷಕ ವೈ .ಬಿ .ಮೇಟಿ ಅವರು ತಾಲೂಕಿನ ದಮ್ಮೂರ ಗ್ರಾಮದ ಸರ್ಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಸರಸ್ವತಿ ಪೂಜಾ ಕಾರ್ಯಕ್ರಮ, ಬೀಳ್ಕೋಡಿಗೆ ಕಾರ್ಯಕ್ರಮ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕಿ ಮಾತನಾಡಿದರು. ಶಿಕ್ಷಣ ಎಂಬುದು ಹುಲಿಯ ಹಾಲು ಇದ್ದಂತೆ ಇದನ್ನು ಕುಡಿದರೆ ಹುಲಿಯಂತೆ ಗರ್ಜಿಸಲು ಸಾಧ್ಯ ಆದ್ದರಿಂದ ವಿದ್ಯಾರ್ಥಿಗಳು ಈ ಹಂತದಲ್ಲಿ ಓದಿನ ಕಡೆ ಹೆಚ್ಚು ಗಮನಹರಿಸಿದಾಗ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ಸಾಧ್ಯ ಎಂದು ಮುಖ್ಯ ಗುರು ಕನಕಪ್ಪ ಕಂಬಳಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು .ಈ ವೇಳೆ ಸವಿತಾ ಕಮ್ಮಾರ, ಹೊಳೆಯಮ್ಮ ಹಳ್ಳಿಕೇರಿ, ಶಂಕ್ರಪ್ಪ ಹೊನ್ನಳ್ಳಿ ,ಲಕ್ಷ್ಮಣ ಚಲವಾದಿ, ಮಾನಪ್ಪ ಬಡಿಗೇರ, ಹನುಮಂತಪ್ಪ ಹಡಪದ, ಪತ್ರಕರ್ತರಾದ ವಿ ಎಸ್ ಶಿವಪ್ಪಯ್ಯನಮಠ, ಶ್ರೀಕಾಂತಗೌಡ ಪಾಟೀಲ, ನೀಲಪ್ಪ ಖಾನವಳಿ ಸೇರಿದಂತೆ ಇತರರು ಇದ್ದರು.

## ರೈತ ದಿನಾಚರಣೆ: ಶರಣರಿಂದ ಹಿತನುಡಿ

**ರಾಯಚೂರು:** ಈ ಅಧುನಿಕ AI ಯುಗದಲ್ಲಿ ರೈತರು ತಮ್ಮ ಕೃಷಿಯನ್ನು ತಾಂತ್ರಕತೆಯಿಂದ ಮಾಡಲು ಹೋಗಿ ಅತಿ ಹೆಚ್ಚು ಅತಾಂತ್ರಿಕತೆಯಿಂದ ಹಾಗೂ ಹೆಚ್ಚಿನ ಬೆಳೆಗೆ ರಾಸಾಯನಿಕ ಬಳಕೆ ಕೃಷಿಗೆ ಮಾರು ಹೋಗಿದ್ದಾರೆ, ಸಾಂಸ್ಕೃತಿಕ, ಪಾರಂಪರಿಕ ಮತ್ತು ಸಾವಯವ ಕೃಷಿಯಿಂದ ದೂರ ಉಳಿದಿದ್ದಾರೆ, ಕಾರಣ ರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ (ರಿ) ರಾಯಚೂರು ಜಿಲ್ಲಾ ಘಟಕದ ವತಿಯಿಂದ ಇದೇ ಶನಿವಾರ ದಿನಾಂಕ: 14–03–2026 ರಂದು ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲೆಯ ಮಹಾಸ್ವಾಮಿಗಳಾದ ಶ್ರೀ ಶ್ರೀ ಶಾಂತಮಲ್ಲ ಶಿವಾಚಾರ್ಯರು, ಶ್ರೀ ಶ್ರೀ ನಿಜಲಿಂಗಪ್ಪ ತಾತನವರು, ದೇವರ ಗುಂಡಗುರ್ತಿ ಹಾಗೂ ಕೃಷಿ ತಂತ್ರಜ್ಞರು ಬಂದು ರೈತರಿಗೆ ನಿಜವಾದ ಕೃಷಿ ಹೇಗೆ ಮಾಡಬೇಕು ನಮ್ಮ ರೈತರ ತಪ್ಪುಗಳೇನು ಹಾಗೂ ಅದನ್ನು ಹೇಗೆ ಸುಧಾರಿಸಿಕೊಂಡು, ಪಾರಂಪರಿಕ ಹಾಗೂ ಸಾವಯವ ಕೃಷಿ ಕುರಿತು ಹಿತನುಡಿ ಜೊತೆಗೆ ಸಲಹೆ ಸೂಚನೆಗಳ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಮತ್ತು ಆರ್ಥಿಕವಾಗಿ ಹಿಂದುಳಿದ ಜನರಿಗೆ ಸಪ್ತಗಿರಿ ಆಸ್ಪತ್ರೆ, ಬೆಂಗಳೂರು ಇವರ ಸಹಯೋಗದೊಂದಿಗೆ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಂಡಿದ್ದು ಎಲ್ಲಾ ವರ್ಗದವರು ಬಂದು ಸದರಿ ಕಾರ್ಯಕ್ರಮ ಭಾಗವಿಸಿ ಶರಣ, ತಂತ್ರಜ್ಞರ ಹಾಗೂ ವೈದರ ಸೇವೆಯನ್ನು ಪಡೆದು ಯಶಸ್ವಿಯಾಗಿಸಲು ಇಂದ್ರಜೀತ್ ಯಾದವ್, ಮುಜಾಹಿದ್ ಮರ್ಚೆಡ್ ರವರು ಪತ್ರಿಕೆ ಹೆಳಿಕೆ ಮುಖಾಂತರ ಮನವಿ ಮಾಡಿರುತ್ತಾರೆ.

# ಅಧಿಸೂಚನೆ ಹೊರಡಿಸುವ ಬಗ್ಗೆ ಬಿಜೆಪಿ ದನಿ ಇಲ್ಲ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಕೃಷ್ಣಾ ಮೇಲ್ದಂಡೆ ಯೋಜನೆ ವಿಚಾರದಲ್ಲಿ ಭೂಸ್ವಾಧೀನ ಪ್ರಕ್ರಿಯೆ ಮಾಡಬಾರದು, ಪರಿಹಾರ ನೀಡಬಾರದು ಎಂದು ಆಂಧ್ರ ಪ್ರದೇಶ ಕೇಂದ್ರ ಸರ್ಕಾರಕ್ಕೆ ಆಕ್ಷೇಪಣೆ ಸಲ್ಲಿಸಿದೆ. ಆದರೂ ಬಿಜೆಪಿ ನಾಯಕರು ಈ ಬಗ್ಗೆ ಧ್ವನಿ ಎತ್ತುತ್ತಿಲ್ಲ. ನಾನು, ಹೆಚ್.ಕೆ ಪಾಟೀಲ್ ಹಾಗೂ ಎಂ.ಬಿ ಪಾಟೀಲ್ ಅವರು ಮಂಗಳವಾರ ದೆಹಲಿಗೆ ಹೋಗುತ್ತಿದ್ದು, ಎಲ್ಲಾ ಸಂಸದರನ್ನು ಭೇಟಿ ಮಾಡಿ ನಮ್ಮ ರಾಜ್ಯದ ವಿಚಾರಗಳನ್ನು ಪ್ರಸ್ತಾಪಿಸುತ್ತೇವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿ ನಿಯಮ 330 ಅಡಿಯಲ್ಲಿ ನಡೆದ ಚರ್ಚೆ ವೇಳೆ ನಿರಾಣಿ ಹನುಮಂತ ರುದ್ರಪ್ಪ ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮುಳುಗಡೆಯಾಗುವ 20 ಗ್ರಾಮಗಳ ಪುನರ್ ವಸತಿ ವಿಚಾರವಾಗಿ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಶಿವಕುಮಾರ್ ಅವರು, "ಈ ಯೋಜನೆ ಭೂ ಸಂತ್ರಸ್ತ ರೈತರಿಗೆ ಪರಿಹಾರ ನೀಡುವ ಬಗ್ಗೆ ಸರ್ಕಾರ ಈಗಾಗಲೇ ತೀರ್ಮಾನ ಮಾಡಿದ್ದು, ಪುನರ್ವಸತಿ ಕಾರ್ಯವನ್ನು ಬಾಕಿ ಉಳಿಸಿದ್ದೇವೆ. ಈ ಯೋಜನೆಗೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಲಿ, ನ್ಯಾಯಬದ್ಧವಾಗಿ ಸಂತ್ರಸ್ತರಿಗೆ ಪರಿಹಾರ ನೀಡಲಾಗುವುದು" ಎಂದು ಉತ್ತರಿಸಿದರು.



"ಮಾನ್ಯ ಸದಸ್ಯರ ಕಾಳಜಿಗೆ ನಾವು ಅಭಿನಂದಿಸುತ್ತೇವೆ. ಸರ್ಕಾರ ಈ ಗ್ರಾಮಗಳ ವಿಚಾರದಲ್ಲಿ ಯಾಕೆ ಗೊಂದಲದಲ್ಲಿದೆ ಎಂದರೆ, ಈ ಪ್ರದೇಶದಲ್ಲಿ ಜಮೀನು ಕಳೆದುಕೊಂಡವರು ಕೋರ್ಟ್ ಗೆ ಹೋಗಿ, ಎಕರೆಗೆ 13–14 ಕೋಟಿ ಪರಿಹಾರ ನೀಡಬೇಕು ಎಂದು ಆದೇಶ ತಂದರು. ನಾವು ಅವರಿಗೆ ಅಷ್ಟು ಪರಿಹಾರ ನೀಡಿ, ನಂತರ ಪುನರ್ವಸತಿ ಕಲ್ಪಿಸುವುದು ಗೊಂದಲಮಯವಾಗಿದೆ. ಹೀಗಾಗಿ ನಾವು ಪರಿಹಾರ ನೀಡುವುದರ ಜತೆಗೆ ಪುನರ್ವಸತಿ ಬದಲು ಹಣವನ್ನೇ ನೀಡುವ ಬಗ್ಗೆ ಚಿಂತನೆ ಮಾಡಲಾಗುತ್ತಿದೆ. ಈ ವಿಚಾರವಾಗಿ ನಿಮ್ಮ ಜತೆಗೂ ಚರ್ಚೆ ಮಾಡಲಾಗುವುದು. ಇಲ್ಲಿ ಜಮೀನು ಖರೀದಿ ಮಾಡುವುದು ಹಗರಣವಾಗುವುದಕ್ಕೆ ಅವಕಾಶ ನೀಡಬಾರದು ಎಂದು ಆಲೋಚಿಸಲಾಗುತ್ತಿದೆ. ಈ ಮಧ್ಯೆ ಆಂಧ್ರ ಪ್ರದೇಶದವರು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಭೂಸ್ವಾಧೀನ ಪ್ರಕ್ರಿಯೆ ಮಾಡಬಾರದು, ಪರಿಹಾರ ನೀಡಬಾರದು ಎಂದು ಆಕ್ಷೇಪಣೆ ಹಾಕಿದ್ದಾರೆ. ನಿಮ್ಮೆಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಈ ವಿಚಾರವಾಗಿ ಪರಿಹಾರ ಕಂಡುಕೊಳ್ಳಲಾಗುವುದು" ಎಂದು ತಿಳಿಸಿದರು.

**ರಾಜ್ಯದ ಹಿತದೃಷ್ಟಿಯಿಂದ ನ್ಯಾಯಾಲಯದಲ್ಲಿ 2 ಐತಿಹಾಸಿಕ ತೀರ್ಪು:** ಪ್ರಶೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯರಾದ ತಿಪ್ಪಣಪ್ಪ ಕಮಕನೂರು ಅವರು ನ್ಯಾಯಾಲಯದ ತೀರ್ಪಿನಿಂದ ಸರ್ಕಾರಕ್ಕೆ ಸುಮಾರು 10 ಸಾವಿರ ಕೋಟಿ ರೂ. ಉಳಿತಾಯವಾಗಿದ್ದು, ಇದನ್ನು ಎತ್ತಿನಹೊಳೆ, ಕೃಷ್ಣಾ ಮೇಲ್ದಂಡೆ ಯೋಜನೆಗೆ ವಿನಿಯೋಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ಎಂದು ಕೇಳಿದಾಗ, "ಈ ಅವಧಿಯಲ್ಲಿ ನಾನು ನೀರಾವರಿ ಸಚಿವನಾದ ಬಳಿಕ ರಾಜ್ಯದ ಹಿತದೃಷ್ಟಿಯಿಂದ ನ್ಯಾಯಾಲಯದಲ್ಲಿ ಎರಡು ಪ್ರಮುಖ ತೀರ್ಪುಗಳು ಸಿಕ್ಕಿವೆ. ನಮ್ಮ ಒತ್ತಡ ಹಾಗೂ ತಂತ್ರಗಾರಿಕೆ ಮೇಲೆ ಮೇಕೆದಾಟು ಯೋಜನೆ ವಿಚಾರವಾಗಿ ಕೇಂದ್ರ ಸರ್ಕಾರ ಪರಿಶೀಲನೆ ಮಾಡಿ ತೀರ್ಮಾನ ಮಾಡಬೇಕು ಎಂದು ತೀರ್ಪು ನೀಡಿದೆ. ತಮಿಳುನಾಡಿಗೆ 177 ಟಿಎಂಸಿ ನೀರು ನೀಡಬೇಕು ಎಂದು ಹೇಳಿರುವುದು ನಮ್ಮ ದೊಡ್ಡ ಸಾಧನೆ. ಇನ್ನು ಭೂ ಪರಿಹಾರ ವಿಚಾರವಾಗಿ ಸಿಕ್ಕಿರುವ ತೀರ್ಪು ಎರಡನೆಯದು. ಈ ಎರಡು ತೀರ್ಪು ನೀಡಿರುವ ಸುಪ್ರೀಂ ಕೋರ್ಟಿಗೆ ಇಲ್ಲಿಂದಲೇ ನಮ್ಮ ಸರ್ಕಾರ ತಲೆಬಾಗುತ್ತದೆ. 20 ಸಾವಿರಕ್ಕೂ ಹೆಚ್ಚು ಪ್ರಕರಣಗಳು ಸುಪ್ರೀಂ ಕೋರ್ಟ್ ಮೆಟ್ಟಿಲೇರುವ ಸಂದರ್ಭವಿತ್ತು. ನಮ್ಮ ನಾಯಕರ ಒತ್ತಡದ ಮೇರೆಗೆ ನಮ್ಮ ಸರ್ಕಾರ ಭೂಸಂತ್ರಸ್ತರಿಗೆ 35–40 ಲಕ್ಷ ಪ್ರತಿ ಎಕರೆಗೆ ಪರಿಹಾರ ನಿಗದಿಪಡಿಸಿದೆ. ಅನೇಕ ಪ್ರಕರಣಗಳಲ್ಲಿ ವಕೀಲರು, ಅಧಿಕಾರಿಗಳು ಒಳಒಪ್ಪಂದ ಮಾಡಿಕೊಂಡು ಪ್ರಕರಣ ದಾಖಲಿಸಿ ಕೋಟಿಗಟ್ಟಲೆ ಹಣ ನೀಡುವಂತೆ ಆದೇಶ ತಂದಿದ್ದರು. ಆದರೆ ಸುಪ್ರೀಂ ಕೋರ್ಟ್ ಇಡೀ ದೇಶಕ್ಕೆ ನೀಡಿರುವ ತೀರ್ಪು ನೀಡಿದೆ. 120 ದಿನಗಳ ನಂತರ ಎಂಎಫ್ಎ ವಾಪಸ್ ಕಳುಹಿಸಿದೆ. ಇದರಿಂದ ಕೆಎನ್ಎನ್ಎಲ್ ನಲ್ಲಿ 900 ಪ್ರಕರಣ, ಕೆಬಿಜೆಎನ್ಎಲ್‌ನಲ್ಲಿ 380 ಪ್ರಕರಣಗಳು ಒಂದೇ ದಿನ ವಾಪಸ್ ಬಂದಿವೆ. ಈ ಪ್ರಕರಣದಲ್ಲಿ ನಾವು 365 ಕೋಟಿ ಹಣವನ್ನು ನ್ಯಾಯಾಲಯಕ್ಕೆ ಠೇವಣಿ ಇಡಬೇಕಾಗಿತ್ತು. ಇನ್ನು ಮುಂದೆ ಇದಕ್ಕೆ ಕಾನೂನು ಸಚಿವರ ನೇತೃತ್ವದಲ್ಲಿ ಪ್ರತ್ಯೇಕ ತಂಡ ರಚಿಸಲಾಗುವುದು, ನಾನು, ಹೆಚ್.ಕೆ ಪಾಟೀಲ್ ಹಾಗೂ ಎಂ.ಬಿ ಪಾಟೀಲ್ ಅವರು ಮಂಗಳವಾರ ದೆಹಲಿಗೆ ಹೋಗುತ್ತಿದ್ದು, ಎಲ್ಲಾ ಸಂಸದರನ್ನು ಭೇಟಿ ಮಾಡಿ ನಮ್ಮ ರಾಜ್ಯದ ವಿಚಾರಗಳನ್ನು ಪ್ರಸ್ತಾಪಿಸುತ್ತೇನೆ. ಕೃಷ್ಣಾ ಮೇಲ್ದಂಡೆ ಯೋಜನೆ ಬಗ್ಗೆ ನಮ್ಮ ಸಚಿವ ಸಂಪುಟ ಸಭೆ ತೀರ್ಮಾನಕ್ಕೆ ಆಂಧ್ರ ಪ್ರದೇಶದವರು ಆಕ್ಷೇಪಣೆ ಮಾಡಿದ್ದಾರೆ. ಈ ಎಲ್ಲಾ ವಿಚಾರವಾಗಿ ನಾವು ಚರ್ಚೆ ಮಾಡುತ್ತೇವೆ. ಈ ತೀರ್ಪು ನಮ್ಮ ರಾಜ್ಯ ಮಾತ್ರವಲ್ಲ, ದೇಶಕ್ಕೆ ಹೊಸ ರೂಪ ನೀಡಿದೆ" ಎಂದು ತಿಳಿಸಿದರು.

## ಸಚಿವರು ಕೂಡಲೇ ವಿಶೇಷ ಸಭೆ ಕರೆಯಬೇಕು


• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**



ಜಿಲ್ಲೆಯಲ್ಲಿ ಬೇಸಿಗೆಗೂ ಮುನ್ನವೇ ಬಿಸಲಿನ ಪ್ರಖರತೆ ಅಧಿಕವಾಗಿದೆ, ಬಿಸಿಲಿನ ತೀವ್ರತೆಯಿಂದ ಜಲಮೂಲಗಳು ಬತ್ತಿ ಕುಡಿಯುವ ನೀರಿಗೆ ವ್ಯತ್ಯಯ ಮೊದಲಾದ ಎದುರಾಗುವ ಸಮಸ್ಯೆಗಳಿಗೆ ಮುಂಜಾಗ್ರತಾ ಕ್ರಮವಾಗಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲರು ಕೂಡಲೇ ಜನಪ್ರತಿನಿಧಿಗಳ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ವಿಶೇಷ ಸಭೆ ಕರೆಯಬೇಕು ಎಂದು ಸಂಸದ ರಮೇಶ ಜಿಗಜಿಣಗಿ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬೇಸಿಗೆ ಮುನ್ನವೇ ಬಿಸಿಲಿನ ತೀವ್ರತೆ ಅಧಿಕವಾಗಿದೆ, ವಿಜಯಪುರ ನಗರದಲ್ಲಿ 8 ರಿಂದ 10 ದಿನಕ್ಕೆ ನೀರು ಪೂರೈಕೆಯಾಗುತ್ತಿದ್ದು, ನೀರಿನ ಹಾಹಾಕಾರ ಉಂಟಾಗುವ ಎಲ್ಲ ಲಕ್ಷಣಗಳು ಗೋಚರಿಸುತ್ತಿವೆ. ಹೀಗಾಗಿ ಮುಂಬರುವ ಪರಿಸ್ಥಿತಿಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವುದು ಒಳ್ಳೆಯದು, ನಗರ ಹಾಗೂ ಗ್ರಾಮೀಣ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮರ್ಪಕ ಪೂರೈಕೆಯಾಗಬೇಕು, ಈ ನಿಟ್ಟಿನಲ್ಲಿ ಆಡಳಿತ ಯಂತ್ರ ಚುರುಕಾಗಬೇಕು, ಅನೇಕ ವಿಷಯದಲ್ಲಿ ಬೇಜವಾಬ್ದಾರಿಯಿಂದ ನಡೆದುಕೊಳ್ಳುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಈ ವಿಷಯವನ್ನಾದರೂ ಗಂಭೀರವಾಗಿ ತೆಗೆದುಕೊಳ್ಳಬೇಕು. ಹೀಗಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಕೂಡಲೇ ಕುಡಿಯುವ ನೀರಿನ ಸಮರ್ಪಕ ಪೂರೈಕೆ ವಿಷಯವಾಗಿ ಜನಪ್ರತಿನಿಧಿಗಳ ಹಾಗೂ ಅಧಿಕಾರಿಗಳ ಸಭೆ ಕರೆಯಬೇಕು. ಯಾವ ಸ್ಥಳದಲ್ಲಿ ಕುಡಿಯುವ ನೀರಿನ ಅಭಾವ ಎದುರಾಗುವ ಸಾಧ್ಯತೆ ಇದೆಯೋ ಅಲ್ಲಿ ಮುಂಜಾಗ್ರತಾ ಕ್ರಮವಾಗಿ ಯಾವ ಕ್ರಮ ಕೈಗೊಳ್ಳಬೇಕು ಎಂಬುದನ್ನು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವುದು ಒಳಿತು ಎಂದು ಸಂಸದ ರಮೇಶ ಜಿಗಜಿಣಗಿ ಒತ್ತಾಯಿಸಿದ್ದಾರೆ.

## ತೆರಿಗೆ ನಂತರದ 449.72 ಕೋಟಿ ಲಾಭ



• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ( ಈ ಹಿಂದೆ ಮೈಸೂರು ಮಿನರಲ್ಸ್ ಸಂಸ್ಥೆ) ಗಣಿಗಾರಿಕೆಯಲ್ಲಿ ತೊಡಗಿರುವ ಕರ್ನಾಟಕ ಸರ್ಕಾರದ ಸಂಪೂರ್ಣ ಮಾಲೀಕತ್ವದ ಒಂದು ಉನ್ನತ ಸಾರ್ವಜನಿಕ ಉದ್ದಿಮೆಯಾಗಿದ್ದು, ಸಂಸ್ಥೆಯು 2024–25ನೇ ಸಾಲಿನಲ್ಲಿ ರೂ.1053.08 ಕೋಟಿಗಳ ವಹಿವಾಟು ನಡೆಸಿ ರೂ.642.82 ಕೋಟಿ ತೆರಿಗೆ ಪೂರ್ವ ಲಾಭ ಹಾಗೂ ರೂ.449.72 ಕೋಟಿ ತೆರಿಗೆ ನಂತರದ ಲಾಭ ಗಳಿಸಿರುತ್ತದೆ.

ದಿನಾಂಕ 29.11.2025 ರಂದು ನಡೆದ 358ನೇ ಮಂಡಳಿ ಸಭೆಯಲ್ಲಿ ಕಂಪನಿಯು 2024–25ನೇ ಸಾಲಿನಲ್ಲಿ ಗಳಿಸಿರುವ ನಿವ್ವಳ ಲಾಭದ (ಓಜಣ ರಿಡಿಠಜುಣ) ಮೇಲೆ ಷೇರುದಾರರಿಗೆ ಅಂದರೆ ಸರ್ಕಾರಕ್ಕೆ ರೂ.133.79 ಕೋಟಿಗಳನ್ನು ಶೇಕಡಾ 30% ಲಾಭಾಂಶವಾಗಿ ನೀಡಲು ಮಂಡಳಿ ನಿರ್ದೇಶಕರು ಒಪ್ಪಿಗೆ ನೀಡಿದ್ದು, ದಿನಾಂಕ 26.02.2026 ರಂದು ನಡೆದ 59ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಅನುಮೋದನೆಗೊಂಡಿದೆ ಎಂದು ಸಂಸ್ಥೆ ತಿಳಿಸಿದೆ.

## ಪ್ಯಾಪಿಲೋಮ ವೈರಸ್ ಲಸಿಕೆ ಕುರಿತು ಜಾಗೃತಿ: ಶಿಕ್ಷಣಾಧಿಕಾರಿ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಹ್ಯೂಮನ್ ಪ್ಯಾಪಿಲೋಮ ವೈರಸ (HPV) ಲಸಿಕೆಯ ಕುರಿತು ಮಕ್ಕಳಲ್ಲಿ ಜಾಗೃತಿ ಕಾರ್ಯಕ್ರಮ ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ್ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರು ಪ್ರಾಥಮಿಕ ಆರೋಗ್ಯ ಕೇಂದ್ರ ದಡೇಸೂಗುರ್ ವ್ಯಾಪ್ತಿಗೆ ಒಳಪಡುವ ಆಯುಷ್ಮಾನ್ ಆರೋಗ್ಯ ಕೇಂದ್ರ ಗೊರೆಬಾಳ ಸರ್ಕಾರಿ ಪ್ರೌಢಶಾಲೆ ಇವರ ಸಯುಕ್ತ ಆಶ್ರಯದಲ್ಲಿ , ಗೊರೆಬಾಳ ಗ್ರಾಮದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಗೀತಾ ಹಿರೇಮಠ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಾತನಾಡಿ ಎಚ್ ಪಿ ವಿ ಲಸಿಕೆಯ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಎಚ್.ಪಿ.ವಿ ಲಸಿಕೆ ಎಂದರೆ ಹ್ಯೂಮನ್ ಪ್ಯಾಪಿಲೋಮ ವೈರಸ್ ನಿಂದ ಉಂಟಾಗುವ ಜನನಾಂಗದ ನರಹುಲಿಗಳು ಗುದದ್ವಾರ ಗಂಟಲು



ಮತ್ತು ತಲೆ ಕುತ್ತಿಗೆ ಕ್ಯಾನ್ಸರ್ ಗಳಿಂದ ರಕ್ಷಣೆ ನೀಡುತ್ತದೆ 9 ರಿಂದ 45 ವರ್ಷ ವಯಸ್ಸಿನ ಹೆಣ್ಣು ಮಕ್ಕಳು ಮತ್ತು ಗಂಡು ಮಕ್ಕಳಿಗೆ ಈ ಲಸಿಕೆ ಅತ್ಯಂತ ಪರಿಣಾಮಕಾರಿ ಹೆಣ್ಣು ಮಕ್ಕಳಲ್ಲಿ ಗರ್ಭಕಂಠ ಕ್ಯಾನ್ಸರ್ ತಡೆಗಟ್ಟುವಿಕೆ ಕ್ಯಾನ್ಸರ್ ಪೂರ್ವ ಸ್ಥಿತಿಗಳ ನಿರ್ವಹಣೆ ಕ್ಯಾನ್ಸರ್ ಗೆ ಕಾರಣವಾಗುವ ಎಚ್ ಪಿ ವಿ ತಳಿಗಳಿಂದ ಉಂಟಾಗುವ ಕೋಶಗಳ ಬದಲಾವಣೆಯನ್ನು ತಡೆಯುತ್ತದೆ ಜನನಾಂಗದ ನರಹುಲಿಗಳ ಕ್ಯಾನ್ಸರಗಳ ತಡೆಗಟ್ಟುವಿಕೆ ಈ ಲಸಿಕೆಯನ್ನು ಪಡೆಯುವ ಸಮಯ 9 ರಿಂದ 14 ವರ್ಷ ವಯಸ್ಸಿನ ಮಕ್ಕಳಿಗೆ ಎರಡು ಡೋಸ್ ಗಳನ್ನು ಶಿಫಾರಸ್ಸು ಮಾಡಲಾಗುತ್ತದೆ ಲೈಂಗಿಕ ಚಟುವಟಿಕೆಗಳ ಪ್ರಾರಂಭವಾಗುವ ಮೊದಲು ಲಸಿಕೆ ಪಡೆಯುವುದು ಅತ್ಯಂತ ಪರಿಣಾಮಕಾರಿ 15ರಿಂದ 45 ವರ್ಷ ವಯಸ್ಸಿನವರೆಗೂ ಇದು ಪ್ರಯೋಜನಕಾರಿಯಾಗಿದೆ.

ಭಾರತದಲ್ಲಿ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಲಸಿಕೆ ಲಭವಿದೆ ಲಸಿಕೆ ಹಾಕಿದ ಜಾಗದಲ್ಲಿ ನೋವು ಊಟ ಅಥವಾ ಲಘು ಜ್ವರ ಇರಬಹುದು ಲಸಿಕೆ ಪಡೆಯುವ ಮೊದಲು ನಿಮ್ಮ ವೈದ್ಯರನ್ನು ಸಂಪರ್ಕಿಸಿ ಸಲಹೆ ಪಡೆಯುವುದು ಉತ್ತಮ. ಎಚ್ ಪಿ ವಿ ಲಸಿಕೆಯು ಹೊಸದೇನಲ್ಲ ಜಗತ್ತಿನಾದ್ಯಂತ ಈಗಾಗಲೇ 50 ಕೋಟಿ ಲಸಿಕೆಗಳನ್ನು ನೀಡಲಾಗಿದೆ. ಬೇರೆ ಬೇರೆ ದೇಶಗಳಲ್ಲಿ 10 ವರ್ಷದಲ್ಲಿ ಕ್ಯಾನ್ಸರ್ ಪೂರ್ವ ಲಕ್ಷಣಗಳು ಕಡಿಮೆಯಾಗಿದೆ ನಂತರ ಸಾಂಕ್ರಾಮಿಕ ರೋಗಗಳ ಕುರಿತು ಕುಡಿಯುವ ನೀರಿನ ಶುದ್ಧತೆಯ ಬಗ್ಗೆ ವಿಷಪೂರಿತ ಆಹಾರ ಸೇವನೆಯ ಮಾಡಬಾರದು ನಂತರ ಧೂಮಪಾನ ರಹಿತ ದಿನ ಬಗ್ಗೆ ನಿಮ್ಮ ಶ್ವಾಸಕೋಶ ಬೂದಿಪಾತ್ರೆಯಲ್ಲ ಧೂಮಪಾನದ ಹವ್ಯಾಸ ಬಿಡಿ ಮುಕ್ತವಾಗಿ ಉಸಿರಾಡಿ ದಂದು ಆರೋಗ್ಯಕರ ಭವಿಷ್ಯದತ್ತ ಹೆಜ್ಜೆ ಇಡಿ ತಂಬಾಕನಲ್ಲ ಉತ್ತಮ ಜೀವನವನ್ನು ಆರಿಸಿ. ಸಮಯಕ್ಕೆ ಸರಿಯಾಗಿ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಆಗಾಗೆ ಬಗ್ಗೆ ಪರೀಕ್ಷೆಯನ್ನ ಮಾಡಿಸಬೇಕೆಂದು ಎಂದರು.

ಈ ಕಾರ್ಯಕ್ರಮದಲ್ಲಿ ಅಂಬಮ್ಮ ಪಿಎಚ್ ಸಿಇಒ, ಚಾಂದ್ ಬಾಷಾ ಸಿ ಎಚ್ ಓ, ಶಿವರೆಡ್ಡಿ ಮುಖ್ಯಗುರುಗಳು, ನಿಲೋಫರ್ ಮೇಡಂ, ಶ್ವೇತಾ, ಪದ್ಮಾ, ಗಂಗಾಧರ್ ಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮುಗ್ಧಜನರ ನೆತ್ತರ ನದಿಯಲಿ ಯುದ್ಧದೋಕುಳಿ..!






**ಡಾಲರ್ ವಿರುದ್ಧ ದನಿ ಎತ್ತಿದವರ ಚರಮಗೀತೆ**

ಅಮೆರಿಕದ ಡಾಲರ್..! ಇದು ಬರೀ ಪೇಪರ್ ಕರೆನ್ಸಿಯಾಗಿ ಉಳಿದಿಲ್ಲ. ಸಾವಿರಾರು ಮುಗ್ಧಜೀವಿಗಳ ಬಲಿಪೀಠದ ಮೇಲೆ ಕುಳಿತು ಕೇಕ್ಕರಿಸುವ ಯುದ್ಧವಾಗಿದೆ. ಅಮಾಯಕರ ನೆತ್ತರ ನದಿಹರಿಸುವ ಕ್ರೌರ್ಯದ ರಕ್ಕಸ ಯುದ್ಧವಾಗಿದೆ. ಡಾಲರ್ ಅಂದರೆ ಪವರ್. ಅದರ ವಿರುದ್ಧ ಯಾರೂ ದನಿ ಎತ್ತಕೂಡದು. ಅದುವೇ ಸುಪ್ರೀಮ್. ಅದರ ವಿರುದ್ಧ ಮಾತನಾಡಿದವರ ಕತೆ ಏನಾಗಿದೆ ಎನ್ನುವ ಸಣ್ಣ ಫ್ಲಾಷ್ಬಾಕ್ ಇಲ್ಲಿದೆ.

2011ರಲ್ಲಿ 'ಅರಬ್‌ಸ್ಪ್ರಿಂಗ್' ದಂಗೆಗಳು ಉತ್ತರ ಆಫ್ರಿಕಾದಾದ್ಯಂತ ಬದಲಾವಣೆಯ ಭರವಸೆಯನ್ನು ಮೂಡಿಸಿದ್ದವು. ಸದಾ ಮಂದಹಾಸದ ಮುಖಲ್ಲಿ ಮಿಸೈಲ್ ಶಕ್ತಿತುಂಬಿಕೊಂಡವನಂತೆ ಲಿಬಿಯಾವನ್ನು ಕಪಿಮುಷ್ಟಿಯಲ್ಲಿಟ್ಟುಕೊಂಡಿದ್ದ ಹಾಗೂ ದೀರ್ಘಕಾಲದ ಆಡಳಿತಗಾರನಾಗಿದ್ದ ಮೊಹಮ್ಮರ್‌ಗಡಾಫಿ ವಿರುದ್ಧ ಸಂಚು ರೂಪಿಸಿದ್ದು ಇದೇ ಅಮೆರಿಕ. 2002ರಲ್ಲಿ ಯುದ್ಧಗಳ ವಿರುದ್ಧ ಮಾತನಾಡಿದ್ದ ಒಬಾಮ ಅವರೇ 2011ರಲ್ಲಿ ಲಿಬಿಯಾ ವಿರುದ್ಧ ತಮ್ಮ ಸೈನ್ಯವನ್ನು ಸಂಘರ್ಷಕ್ಕಿಳಿಸಿದ್ದರು. ಕಾರಣ, ಬೇರೆ ಇರಬಹುದು ಆದರೆ ಗಡಾಫಿ ಡಾಲರ್ ಮೌಲ್ಯದ ಬದಲಿಗೆ ಚಿನ್ನದ ಸಿಕ್ಕಾ ಜಾರಿಗೆ ತರುವ ಮಾತನಾಡಿದ್ದ. ಎಚ್ಚೆತ್ತ ಅಮೆರಿಕವು, ಗಡಾಫಿ ವಿರೋಧಿ 'ನ್ಯಾಷನಲ್ ಟ್ರಾನ್ಸಿಶನಲ್ ಕೌನ್ಸಿಲ್' ಪರ ನಿಂತಿತು. ಲಿಬಿಯಾ ನಾಗರಿಕರ ರಕ್ಷಣೆಗಾಗಿ ಬಲಪ್ರಯೋಗಕ್ಕೆ ಅನುಮತಿ ನೀಡುವ ನಿರ್ಣಯಕ್ಕೆ ಸಮ್ಮತಿಸುವಂತೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಒತ್ತಡ ಹೇರಿತು. 2011ರ ಅಕ್ಟೋಬರ್‌ನಲ್ಲಿ, ಗಡಾಫಿಯ ಬೆಂಗಾವಲು ಪಡೆಯ ಮೇಲೆ ದಾಳಿ ನಡೆದವು. ಗಡಾಫಿ ಅವರನ್ನು ನ್ಯಾಷನಲ್ ಟ್ರಾನ್ಸಿಶನಲ್ ಕೌನ್ಸಿಲ್‌ನ ಹೋರಾಟಗಾರರೇ ಕೊಲ್ಲುವಂತೆ ಮಾಡಿದ್ದು ಇದೇ ಅಮೆರಿಕ..!

ಅಹಂಕಾರ ಮತ್ತು ಕ್ರೌರ್ಯದ ಮಡುವಿನಂತಿದ್ದ ಇರಾಕ್ ಅಧ್ಯಕ್ಷ ಸದ್ದಾಮ್ ಹುಸೇನ್ ಗೊತ್ತಲ್ಲ..? ಆತ ಕೂಡ ತನ್ನ ತೈಲ ಹಣದ ಅಹಮಿಕೆಯಲ್ಲಿ ತೊಯ್ದಾಡುತ್ತಿದ್ದ. ಕೆಲವು ಉತ್ತಮ ಕಾರ್ಯದ ಬದಲಿಗೆ ಜನರ ದನಿ ಹತ್ತಿಕ್ಕುವ ಕಾರ್ಯ ಮಾಡುತ್ತಲೇ ಅಮರಿಕ ಡಾಲರ್ ಬದಲಿಗೆ ತಮ್ಮ ದಿನಾರ್ ಕರೆನ್ಸಿಯೇ ಸ್ಟ್ರಾಂಗ್ ಅಂತ ಟೇಬಲ್ ಗುದ್ದಿ ಹೇಳ ತೊಡಗಿದ್ದ. ಡ್ರಾಕುಲಾ ಡಾಲರ್ ಸುಮ್ಮನಿದ್ದೀತೆ..? ಅಣ್ವಸ್ತ್ರ ಅಭಿವೃದ್ಧಿ ಪಡಿಸುತ್ತಿದ್ದಾನೆ ಸದ್ದಾಂ ಗುಲ್ಲೆಬ್ಬಿಸಿತು. ಯುದ್ಧವನ್ನೂ ಸಾರಿತು. 2003ರಲ್ಲಿ ಸರ್ವಾಧಿಕಾರಿ ಸದ್ದಾಂ ಹುಸೇನ್ ಅವರ ಆಡಳಿತವನ್ನು ಪತನಗೊಳಿಸುವಲ್ಲಿ ಯಶಸ್ವಿಯಾತು. 'ಸರ್ವಾಧಿಕಾರದಿಂದ ಪ್ರಜಾಪ್ರಭುತ್ವಕ್ಕೆ ಬದಲಾಗಲು ಸಮಯ ಬೇಕಾಗುತ್ತದೆ. ನಮ್ಮ ಕೆಲಸ ಮುಗಿಯುವವರೆಗೆ ನಮ್ಮ ಒಕ್ಕೂಟವು ಅಲ್ಲಿಯೇ ಇರುತ್ತದೆ. ಬಳಿಕ ಸ್ವತಂತ್ರ ಇರಾಕ್ ಅನ್ನು ಬಿಟ್ಟು ಹೋಗುತ್ತೇವೆ' ಎಂದು ಬುಷ್ ಹೇಳಿದ್ದರು. ಇದ್ದಷ್ಟು ದಿನವೂ ಕ್ರೂಡ್ ಆಯಿಲ್ ಕೊಳ್ಳೆ ಹೊಡೆದದ್ದು ಇತಿಹಾಸ.

ವಿಶೇಷವೆಂದರೆ ಇರಾಕ್‌ನಲ್ಲಿನ ಹೋರಾಟವು ಜಾರ್ಜ್ ಡಬ್ಲ್ಯೂ ಬುಷ್ ಅವರ ಏಕೈಕ 'ಆಡಳಿತ ಬದಲಾವಣೆ' ಯುದ್ಧವಾಗಿರಲಿಲ್ಲ. ಅಫ್ಘಾನಿಸ್ತಾನದಲ್ಲಿಯೂ ಆಡಳಿತ ಬದಲಾವಣೆ ಮಾಡುವುದು ಅಮೆರಿಕದ ಇರಾದೆ..! ಅದಕ್ಕೆ ಕುಮ್ಮಕ್ಕು ದೊರೆತದ್ದು 2001ರ ಸೆಪ್ಟೆಂಬರ್ 11ರಲ್ಲಿ ನ್ಯೂಯಾರ್ಕ್ 'ಡಬ್ಲ್ಯೂಟಿಸಿ' ಮೇಲೆ ನಡೆದ ಭಯೋತ್ಪಾದಕ ದಾಳಿ. ಈ ದಾಳಿಯನ್ನು ಸೌದಿ ಅರೇಬಿಯಾ ಮೂಲಕ ಅಮೆರಿಕವೇ ನಡೆಸಿದೆ ಎಂಬ ಆರೋಪಗಳಿವೆ. ಆದರೂ, ಈ ದಾಳಿಯನ್ನು ಮುಂದಿಟ್ಟುಕೊಂಡು, 2002ರ ಜನವರಿಯಲ್ಲಿ ಅಮೆರಿಕದ ಮಿಲಿಟರಿ ಅಫ್ಘಾನಿಸ್ತಾನದಲ್ಲಿ 'ಆಪರೇಷನ್ ಎಂಡ್ಯೂರಿಂಗ್ ಫ್ರೀಡಮ್' ಅನ್ನು ಪ್ರಾರಂಭಿಸಿತು. ತಾಲಿಬಾನ್ ಆಡಳಿತವನ್ನು ಶೀಘ್ರದಲ್ಲೇ ಉರುಳಿಸಲಾಯಿತಾದರೂ, ಡಾಲರ್ ಬೆಂಬಲಿತ ಹೊಸ ಸರ್ಕಾರವು ಸೀಮಿತ ಅವಧಿಗೆ ಮಾತ್ರ ಇದ್ದು, ಮತ್ತೆ ತಾಲಿಬಾನಿಗಳ ಅಟ್ಟಹಾಸ ಮುಂದುವರೆದದ್ದ ಎಲ್ಲರಿಗೂ ಗೊತ್ತಿದೆ.

ಲಿಬಿಯಾ, ಇರಾಕ್, ಅಫ್ಘಾನ್ ಬಳಿಕ ಸಿರಿಯಾ ಸದರಿ. ಲಿಬಿಯಾದಲ್ಲಿ ತಮ್ಮ ಹಸ್ತಕ್ಷೇಪವು ಮುಕ್ತಾಯ ಹಂತಕ್ಕೆ ಬರುತ್ತಿದ್ದಂತೆಯೇ ಸಿರಿಯಾದ ಬಶರ್ ಅಲ್–ಅಸ್ಸಾದ್ ಅವರ ಕ್ರೂರ ಆಡಳಿತವು ಅಮೆರಿಕ ಕಣ್ಣಿಗೆ ಬಿದ್ದಿತು. ಆತನೂ ಡಾಲರ್ ವಿರುದ್ಧ ಗುಡುಗಿದ್ದ. 2011ರಲ್ಲಿ ಅರಬ್ ದಂಗೆಯ ಭಾಗವಾಗಿ ಸಿರಿಯಾದಲ್ಲಿ ಶಾಂತಿಯುತ ಪ್ರತಿಭಟನೆಗಳು ಆರಂಭವಾದವು. ಜನರು ಬಶಾರ್ ಅಲ್–ಅಸದ್ ಅವರ ಏಕಾಧಿಪತ್ಯ ಆಡಳಿತವನ್ನು ವಿರೋಧಿಸಿ, ಪ್ರಜಾಪ್ರಭುತ್ವ ಸುಧಾರಣೆ, ಭ್ರಷ್ಟಾಚಾರ ನಿರ್ಮೂಲನೆ, 1970ರಿಂದ ಅಧಿಕಾರದಲ್ಲಿದ್ದ ಅಸದ್ ವಂಶಾಡಳಿತದ ಅಂತ್ಯಕ್ಕೆ ಒತ್ತಾಯಿಸಿ ಪ್ರತಿಭಟನೆಗಳನ್ನು ನಡೆದವು. ಆಂತರ್ಯದಲ್ಲಿ ಇದರ ಸೂತ್ರದಾರನೇ ಡಾಲರ್..!

2011ರ ಆಗಸ್ಟ್‌ನಲ್ಲಿ ಅಮೆರಿಕ ಅಧ್ಯಕ್ಷ ಒಬಾಮ, ಅಸ್ಸಾದ್ ಅವರನ್ನು ಅಧಿಕಾರದಿಂದ ಕಳೆಗಿಳಿಸಲು ಸಿರಿಯಾ ಮೇಲೆ ನಿರ್ಬಂಧ, ಸೌದಿ ಅರೇಬಿಯಾ, ಯುಕೆ, ಜೋರ್ಡನ್‌ಗಳ ಜೊತೆ ಕೈ ಜೋಡಿಸಿ, ವಿರೋಧಿ ಗುಂಪುಗಳಿಗೆ ಶಸ್ತ್ರಾಸ್ತ್ರ, ತರಬೇತಿ ಮತ್ತು ಹಣದ ನೆರವು ಹಾಗೂ ವಾಯುದಾಳಿಗಳೊದಿಗೆ ಆತನ ಚರಮ ಗೀತೆ ಇಲ್ಲಿ ಗುಟ್ಟಿನ ವಿಚಾರವೇನಲ್ಲ. ಇದೀಗ ಇರಾನ್ ಮೇಲೆ ಅಮೆರಿಕ–ಇಸ್ರೇಲ್ ಜಂಟಿಯಾಗಿ 'ಆಪರೇಷನ್ ಎಪಿಕ್ ಫ್ಯೂರಿ' ಹೆಸರಿನಲ್ಲಿ ದಾಳಿ ಆರಂಭಿಸಿದೆ. ಈ ಯುದ್ಧದ ಆರಂಭದಲ್ಲಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಗುರಿಗಳ ಬಗ್ಗೆ ಸ್ಪಷ್ಟವಾಗಿದ್ದರು: 'ಇರಾನ್ ಇನ್ನು ಮುಂದೆ ಪರಮಾಣು ಅಥವಾ ಸಾಂಪ್ರದಾಯಿಕ ಮಿಲಿಟರಿ ಬೆದರಿಕೆಯಾಗಿ ಉಳಿಯಬಾರದು. ಅಲ್ಲಿನ ಖಮೇನಿ ಆಡಳಿತವನ್ನು ಅಧಿಕಾರದಿಂದ ಕೆಳಗಿಳಿಸಬೇಕು' ಎನ್ನುತ್ತಿದೆ ಡಾಲರ್. ಡಾಲರ್ ವಿರುದ್ಧ ಗುಡುಗಿದ್ದ ಖಮೇನಿ ಕೂಡ ತನ್ನ ದೇಶದ ರಿಯಾಲ್ ಕರೆನ್ಸಿಯೇ ಪರಮಸ್ಟ್ರಾಂಗ್ ಅಂತ ಭಾವಿಸಿದ್ದ. ಅದೇ ತೈಲದ ಅಮಲು, ಧರ್ಮದ ಅಫೀಮು ಹಾಗೂ ಆತನ ಅಂತ್ಯಕ್ಕೆ ಗೋರಿ ತೋಡಿದ್ದು ಇದೇ ಡಾಲರ್ ಮತ್ತು ಇಸ್ರೇಲ್..! ಜಿದ್ದಾ ಜಿದ್ದಿನ ಯುದ್ಧದಿಂದ ಯಾರಿಗೆ ಲಾಭ ಅನ್ನುವುದು ಇಲ್ಲಿ ಮುಖ್ಯವಾಗಿಲ್ಲ. ಡಾಲರ್ ರಕ್ತದಾಹಕ್ಕೆ ಇನ್ನೆಷ್ಟು ನೆತ್ತರ ನದಿ ಹರಿಯಬೇಕು..? ಅದೆಷ್ಟು ಅಮಾಯಕ ಮಕ್ಕಳು, ನಾಗರಿಕರು ಬಲಿಯಾಗಬೇಕು..? ಉತ್ತರ ಅಸ್ಪಷ್ಟ..!

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)